28 March 2026 Saturday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಕನಸಿಗೂ ನನಸಿಗೂ ಸಣ್ಣ ವ್ಯತ್ಯಾಸ!
ಕನಸಿಗೆ ಶ್ರಮವಿಲ್ಲದ ನಿದ್ದೆ ಬೇಕು! ನನಸು
ಮಾಡಲು ನಿದ್ದೆ ರಹಿತ ಶ್ರಮ ಬೇಕು!

-ಸ್ನೇಹಾ ಆನಂದ್

info.varthaman@gmail.com



ನಿಯಮಾಧಾರಿತ ಸಮಾಜದಿಂದ ಮೌಲ್ಯಾಧಾರಿತ ಸಮಾಜವಾಗಬೇಕು — ಪುಟ ಸಂ. 2


ಕೋಟಿ ಜೆಡಿಎಸ್ ಸಂಬಂಧ ಅವಿನಾಭಾವ: ನಿಖಿಲ್ ಕುಮಾರಸ್ವಾಮಿ — ಪುಟ ಸಂ. 3



ದೌರ್ಜನ್ಯ ಪ್ರಕರಣ: ಪ್ರಕರಣಗಳ ವಿಲೇವಾರಿ ಮಾಡಿ: — ಪುಟ ಸಂ. 4


9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು | ಗ್ರಾಮಾಂತರ ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 133 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

## ಇಂಧನ ಅಬಕಾರಿ ಸುಂಕ ಕಡಿತ

### ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆಗೆ ಕೇಂದ್ರದ ಕಡಿವಾಣ




**ನವದೆಹಲಿ:** ದೇಶದ ಜನರಿಗೆ ಕೇಂದ್ರ ಸರ್ಕಾರ ಗುಡ್‌ನ್ಯೂಸ್ ನೀಡಿದೆ. ಮಧ್ಯಪ್ರಾಚ್ಯ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಪೆಟ್ರೋಲ್, ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ಕೇಂದ್ರ ಕಡಿತಗೊಳಿಸಿದೆ. ಪೆಟ್ರೋಲ್ ಮೇಲಿನ ಸುಂಕ 13 ರೂ. ನಿಂದ 3 ರೂ.ಗೆ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನ 10ರಿಂದ ನಿಂದ ಶೂನ್ಯಕ್ಕೆ ಇಳಿಕೆ ಮಾಡಿದೆ.

ಅಮೆರಿಕ ಮತ್ತು ಇಸ್ರೇಲ್ ಮತ್ತು ಇರಾನ್ ನಡುವಿನ ಯುದ್ಧ, ಹಾರ್ಮುಜ್ ಜಲಸಂಧಿ ಬಿಕ್ಕಟ್ಟಿನಿಂದ ಭಾರತೀಯ ತೈಲ ಕಂಪನಿಗಳು ಎದುರಿಸುತ್ತಿರುವ ನಷ್ಟವನ್ನು ಸರಿದೂಗಿಸಲು ಕೇಂದ್ರ ಸರ್ಕಾರ ಈ ನಿರ್ಧಾರ ಕೈಗೊಂಡಿದೆ. ಆದರೆ ಇದರಿಂದ ಗ್ರಾಹಕರಿಗೆ ಬೆಲೆ ಇಳಿಕೆ ಆಗುವುದಿಲ್ಲ. ಬದಲಿಗೆ ಬೆಲೆ ಏರಿಕೆಯನ್ನು ತಡೆಯಲು ಈ ನಿರ್ಧಾರ ಕೈಗೊಳ್ಳಲಾಗಿದೆ.

ಹಾರ್ಮುಜ್ ಜಲಸಂಧಿಯನ್ನು ಇರಾನ್ ಭಾರತಕ್ಕೆ ಮುಕ್ತಗೊಳಿಸಿದ ಒಂದು ದಿನದ ನಂತರ ಈ ಕ್ರಮ ಕೈಗೊಳ್ಳಲಾಗಿದೆ. ಹಾರ್ಮುಜ್ ಬಿಕ್ಕಟ್ಟಿನಿಂದ ಪ್ರತಿ ಬ್ಯಾರಲ್ ಕಚ್ಚಾ ತೈಲ 100 ಡಾಲರ್‌ಗಳ ಗಡಿ ದಾಟಿದೆ. ಇದರಿಂದ ತೈಲ ಕಂಪನಿಗಳು ಪ್ರತಿ ಲೀಟರ್‌ಗೆ 48.8 ರೂ. ನಷ್ಟ ಅನುಭವಿಸುತ್ತಿವೆ. ಕೇಂದ್ರ ಸರ್ಕಾರದ ಕ್ರಮವು ಕಂಪನಿಗಳಿಗೆ ನಷ್ಟ ಸರಿದೂಗಿಸಲು ನೆರವಾಗಲಿದೆ.

ಕೇಂದ್ರ ಸರ್ಕಾರ ಈ ಹಿಂದೆ ಮೇ 2022 ರಲ್ಲಿ ಅಬಕಾರಿ ಸುಂಕವನ್ನ ಕಡಿತಗೊಳಿಸಿತ್ತು. ಇದರ ನಂತರ, ಪೆಟ್ರೋಲ್ ಪ್ರತಿ ಲೀಟರ್‌ಗೆ 8 ರೂ. ಮತ್ತು ಡೀಸೆಲ್ ಪ್ರತಿ ಲೀಟರ್‌ಗೆ 6 ರೂ. ನಷ್ಟು ಅಗ್ಗವಾಗಿತ್ತು. ಆದರೆ ಕೇಂದ್ರ ಸರ್ಕಾರದ ಇಂದಿನ ಕ್ರಮದಿಂದ ಗ್ರಾಹಕರಿಗೆ ಪುಟ 2ಕ್ಕೆ

## ಮೈಸೂರು ವಿಶ್ವವಿದ್ಯಾಲಯದಲ್ಲಿ ಶೌಚಾಲಯ ಸ್ವಚ್ಛಕ್ಕೂ ಹಣವಿಲ್ಲ

### ಕುಲಪತಿ ಲೋಕನಾಥ್ ವಿರುದ್ಧ ವಿಶ್ರಾಂತ ಕುಲಪತಿ ಕೆ.ಎಸ್.ರಂಗಪ್ಪ ವಾಗ್ದಾಳಿ




**ಮೈಸೂರು:** ಮೈಸೂರು ವಿಶ್ವವಿದ್ಯಾಲಯದ ಶೌಚಾಲಯ ಸ್ವಚ್ಛ ಮಾಡಲು ಪಿನಾಯಿಲ್ ಖರೀದಿಗೂ ಹಣವಿಲ್ಲ. ಆಡಳಿತ ವೈಫಲ್ಯದಿಂದ ವಿವಿಯ ಗುಣಮಟ್ಟ ಕುಸಿದಿದೆ ಎಂದು ಮೈಸೂರು ವಿವಿಯ ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ ಆರೋಪಿಸಿದರು.

ಮೈಸೂರು ವಿಶ್ವವಿದ್ಯಾಲಯ ಕುಲಪತಿ ಪ್ರೊ.ಲೋಕನಾಥ್ ಹೇಳಿಕೆಗೆ ಸ್ಪಷ್ಟೀಕರಣ ನೀಡಿರುವ ಪ್ರೊ.ರಂಗಪ್ಪ ಅವರು, ನಗರದ ಯುವರಾಜ ಕಾಲೇಜಿನ ಸ್ವಾಯತ್ತತೆಗೆ 1 ಕೋಟಿ ಹಣ ದುರ್ಬಳಕೆಗೆ ಕಾರಣ ಎಂಬ ಕುಲಪತಿ ಲೋಕನಾಥ್ ಹೇಳಿಕೆಗೂ ಸ್ವಾಯತ್ತತೆಗೂ ಸಂಬಂಧವಿಲ್ಲ. ಈ ವಿಚಾರದಲ್ಲಿ ಬಹಿರಂಗ ಚರ್ಚೆಗೆ ಸಿದ್ಧ. ಮೆರಿಟ್ ವಿದ್ಯಾರ್ಥಿಗಳಿಗೆ ಇದ್ದ ಎ ಸ್ಕೀಮ್ ನ ಶೇಕಡ 50ರಷ್ಟು ಸೀಟ್ ಗಳನ್ನು ರದ್ದುಗೊಳಿಸುವುದರಿಂದ ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದೆ ಎಂದು ಆರೋಪಿಸಿದ್ದಾರೆ.

ವಿದ್ಯಾರ್ಥಿಗಳ ಪ್ರವೇಶ ಕುಸಿತದಿಂದ ಮೈಸೂರು ವಿವಿಯಲ್ಲಿ ಹಲವು ಕೋರ್ಸ್ ಮುಚ್ಚಿವೆ. ಈ ಕುರಿತು ಆಂತರಿಕ ತನಿಖೆ ನಡೆಸಿ ಎಂದು ಕುಲಪತಿ ಲೋಕನಾಥ್‌ಗೆ ಸವಾಲು ಹಾಕಿದರು. ನಿವೃತ್ತರಿಗಾಗಿ 400 ಕೋಟಿ ನಿಧಿ ಸಂಗ್ರಹಿಸಿದ್ದರು. ಅದು ಏನಾಗಿದೆ ಎಂಬುವುದು ಗೊತ್ತಿಲ್ಲ. ಇದರ ಜೊತೆಗೆ ಈಗಿರುವ ಕುಲಪತಿ ಲೋಕನಾಥ್ ಕೇವಲ ಟೆಂಡರ್ ಗಳನ್ನ ಕರೆಯುವ ಮೂಲಕ ಹೆಚ್ಚು ಖರ್ಚು ಮಾಡುತ್ತಿದ್ದು, ಇದರಿಂದ ವಿವಿಯ ಬೊಕ್ಕಸ ಖಾಲಿಯಾಗುತ್ತಿದೆ ಎಂದು ಆರೋಪಿಸಿದ್ದಾರೆ.

**ಪತ್ರದ ಹಿನ್ನೆಲೆ ಏನು:** ಮಾ.26ರಂದು ಮೈಸೂರು ವಿಶ್ವವಿದ್ಯಾಲಯ ಸಾಮಾನ್ಯ ಸಭೆಯಲ್ಲಿ ವಿವಿ ಕುಲಪತಿ ಲೋಕನಾಥ್ ಪ್ರೊ.ಕೆ.ಎಸ್.ರಂಗಪ್ಪ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ್ದರು. ಯುವರಾಜ ಕಾಲೇಜಿನ ಸ್ವಾಯತತೆ ಹೋಗಲು ಕಾರಣ ಏನು ಹಾಗೂ ಯಾವುದೇ ಕೋರ್ಸ್ಗಳನ್ನು ಪುಟ 2ಕ್ಕೆ

## ರಾಜ್ಯದಲ್ಲಿ ದ್ವಿಭಾಷಾ ಸೂತ್ರ ಜಾರಿ

### ಇನ್ನು ಮುಂದೆ ಹಿಂದಿ ಪಠ್ಯಕ್ರಮ 'ಆಟಕ್ಕುಂಟು ಲೆಕ್ಕಕ್ಕಿಲ್ಲ'!



**ಬೆಂಗಳೂರು:** ರಾಜ್ಯದಲ್ಲಿ ಪಠ್ಯಕ್ರಮದಲ್ಲಿ ದ್ವಿಭಾಷಾ ಸೂತ್ರ ಜಾರಿಗೆ ಸರ್ಕಾರ ಮುಂದಾಗಿದೆ. ಹಿಂದಿ ಕಡ್ಡಾಯ ಪಠ್ಯವನ್ನು ತೆಗೆದುಹಾಕಲು ಸರ್ಕಾರ ತೀರ್ಮಾನ ಮಾಡಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ವಿದ್ಯಾರ್ಥಿಗಳಿಗೆ ಹಿಂದಿ ವಿಷಯ ಕಡ್ಡಾಯ ಮಾಡದಂತೆ ಕನ್ನಡಪರ ಸಂಘಟನೆಗಳು ಹೋರಾಟಕ್ಕೆ ಇಳಿದಿರುವ ಬೆನ್ನಲ್ಲೇ ಪ್ರೌಢ ಶಿಕ್ಷಣದಲ್ಲಿ ಹಿಂದಿ ಕಡ್ಡಾಯ ಕೈಬಿಡಲು ಸರ್ಕಾರ ಮುಂದಾಗಿದೆ. ಈ ಮೂಲಕ ಕನ್ನಡ ಪರ ಹೋರಾಟಗಾರರ ಹಲವು ವರ್ಷಗಳ ಬೇಡಿಕೆ ಈಡೇರಿಸಲು ಸರ್ಕಾರ ಮುಂದಾಗಿದೆ.

ಈ ಹಿಂದೆ ಕನ್ನಡ ಮತ್ತು ಇಂಗ್ಲಿಷ್ ಭಾಷೆಗಳನ್ನ ಮಾತ್ರ ಒಳಗೊಂಡ ದ್ವಿಭಾಷಾ ನೀತಿಯನ್ನು ಜಾರಿಗೆ ತರಲು ಪ್ರೊ.ಸುಖದೇವ್ ಥೋರಟ್ ನೇತೃತ್ವದ ರಾಜ್ಯ ಶಿಕ್ಷಣ ನೀತಿ ಆಯೋಗ ಸರ್ಕಾರಕ್ಕೆ ಶಿಫಾರಸು ಮಾಡಿತ್ತು. ಈ ನೀತಿ ಅನ್ವಯ ಮಾತೃಭಾಷೆ ಕನ್ನಡಕ್ಕೆ ಆದ್ಯತೆ ಸಿಗುತ್ತಿತ್ತು. ಹಿಂದಿ ಭಾಷೆ ಕಡ್ಡಾಯ ಕಲಿಕೆಯನ್ನು ಕೈಬಿಡುವ ಗುರಿ ಹೊಂದಿತ್ತು.

ಕನ್ನಡ ಪರ ಸಂಘಟನೆಗಳ ಮನವಿ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು, ರಾಜ್ಯದಲ್ಲಿ ಹಿಂದಿ ಕಡ್ಡಾಯ ಅವಶ್ಯಕತೆ ಇಲ್ಲವೆಂದು ಕನ್ನಡಪರ ಸಂಘಟನೆಗಳು ಹೇಳಿವೆ. ಸಿಎಂ ಕೂಡ ದ್ವಿಭಾಷಾ ಸೂತ್ರ ತಂದರೆ ಒಳ್ಳೆಯದು ಎಂದು ತಿಳಿಸಿದ್ದಾರೆ. ದ್ವಿಭಾಷಾ ಸೂತ್ರ ಬಂದರೆ ಒಳ್ಳೆಯದು. ಈಗ ತ್ರಿಭಾಷಾ ಸೂತ್ರ ಇದೆ. ಇದು ಬದಲಾವಣೆ ಆಗಬೇಕಾದರೆ ಚರ್ಚೆ ಆಗಬೇಕು ಎಂದು ತಿಳಿಸಿದರು.

ಈ ಬಗ್ಗೆ ಶಿಕ್ಷಕರ ಜೊತೆಯೂ ಮಾತಾಡ್ತೀವಿ. ಸಿಎಂ ಜೊತೆ ನಾವು ಮಾತಾಡಬೇಕು. ಎಲ್ಲಾ ಆಯಾಮಗಳಲ್ಲಿ ಚರ್ಚಿಸಿದ ಬಳಿಕ ಮುಂದಿನ ನಿರ್ಧಾರ ಕೈಗೊಳ್ಳುತ್ತೇವೆ. ಹಾಗಾಗಿ ಯಾರೂ ಪರೀಕ್ಷಾ ಕೇಂದ್ರಗಳಿಗೆ ಮುತ್ತಿಗೆ ಹಾಕುವುದು ಬೇಡ. ಸಿಎಂ ಜೊತೆ ಮಾತನಾಡಿ ಈ ಬಗ್ಗೆ ನಿರ್ಧಾರ ಮಾಡ್ತೀವಿ ಎಂದು ಹೇಳಿದರು.

### 525 ಅಂಕಕ್ಕೆ ಎಸ್ಸೆಸ್ಸೆಲ್ಸಿ ಪರೀಕ್ಷೆ

**ಬೆಂಗಳೂರು:** ರಾಜ್ಯದಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆಯನ್ನು ಇನ್ನು ಮುಂದೆ 625 ಅಂಕಗಳ ಬದಲಿಗೆ 525 ಅಂಕಗಳಿಗೆ ನಡೆಸಲು ಕರ್ನಾಟಕ ಸರ್ಕಾರ ಮಹತ್ವದ ತೀರ್ಮಾನ ತೆಗೆದುಕೊಂಡಿದೆ.

ಮಾಧ್ಯಮಗಳ ಜೊತೆ ಮಾತನಾಡಿದ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಈ ವರ್ಷದಿಂದ ರಾಜ್ಯ ಪಠ್ಯಕ್ರಮದಲ್ಲಿ ತೃತೀಯ ಭಾಷೆ ಕಡ್ಡಾಯವಲ್ಲ. ವಿದ್ಯಾರ್ಥಿಗಳು ತೃತೀಯ ಭಾಷೆ ಪರೀಕ್ಷೆ ಬರೆಯುತ್ತಾರೆ. ಆದರೆ ಆ ಭಾಷೆಯ 100 ಅಂಕವನ್ನು ಪರಿಗಣನೆ ಮಾಡುವುದಿಲ್ಲ ಎಂದು ತಿಳಿಸಿದರು.

ತೃತೀಯ ಭಾಷೆಗೆ ಗ್ರೇಡ್ ನೀಡುತ್ತೇವೆ ಮತ್ತು ಇದರಲ್ಲಿ ಪಾಸ್, ಫೇಲ್ ಇರುವುದಿಲ್ಲ. ಹಿಂದಿ ಭಾಷೆ ಕಡ್ಡಾಯವಲ್ಲ. ಈ ನಿರ್ಧಾರಕ್ಕೆ ಸಿಎಂ ಸಿದ್ದರಾಮಯ್ಯನವರು ಒಪ್ಪಿದ್ದಾರೆ ಎಂದು ಹೇಳಿದರು.

ತೃತೀಯ ಭಾಷೆಗೆ ಎಬಿಸಿಡಿ ಎಂದು ಗ್ರೇಡ್ ನೀಡುತ್ತೇವೆ. ಈ ವರ್ಷದ ಪರೀಕ್ಷೆಯಲ್ಲಿ ಈ ನಿಯಮವನ್ನು ಜಾರಿ ಮಾಡಲಾಗುವುದು. ಇಂದು ಸಂಜೆ ಒಳಗಡೆ ಆದೇಶ ಜಾರಿಯಾಗಲಿದೆ ಎಂದು ತಿಳಿಸಿದರು.

ಸಿಬಿಎಸ್‌ಇ, ಐಸಿಎಸ್‌ಇ ರಾಜ್ಯದ ಪಠ್ಯಕ್ರಮಗಳಿಗೆ ಅನ್ವಯ ಆಗದೆ ಇರುವ ಕಾರಣ ಆ ಶಾಲೆಗಳಿಗೆ ಈ ನಿಯಮ ಅನ್ವಯ ಆಗುವುದಿಲ್ಲ.

ಈ ವೇಳೆ ಉರ್ದು ಮಾಧ್ಯಮ ಶಾಲೆಗಳಲ್ಲಿ ಕನ್ನಡವನ್ನು ತೃತೀಯ ಭಾಷೆಯನ್ನಾಗಿ ಓದಿಸಲಾಗುತ್ತದೆ. ಇಲ್ಲಿ ಕನ್ನಡ ಇರುವುದಿಲ್ಲವೇ ಎಂಬ ಪ್ರಶ್ನೆಗೆ, ಇದಕ್ಕೆ ಒಂದು ನಿಯಮವನ್ನು ನಾವು ಮಾಡುತ್ತೇವೆ. ಕನ್ನಡ ವಿಷಯಕ್ಕೆ ಧಕ್ಕೆ ಆಗದಂತೆ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ತಿಳಿಸಿದರು.

## ಮತ್ತೆ 10 ದಿನ ಕದನ ವಿರಾಮ



**ವಾಷಿಂಗ್ಟನ್:** ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಭೀಕರ ಯುದ್ಧ ಕೊನೆಗೊಳಿಸಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರಯತ್ನ ನಡೆಸುತ್ತಿದ್ದಾರೆ. ಇರಾನ್ ಜೊತೆಗೆ ಮಾತುಕತೆ ಮುಂದುವರಿಸಲು ಮತ್ತೆ 10 ದಿನಗಳ ಕದನ ವಿರಾಮ ಘೋಷಿಸಿದ್ದಾರೆ.

ಇರಾನ್‌ನ ಇಂಧನ ಸೌಲಭ್ಯ ಕೇಂದ್ರಗಳ ಮೇಲಿನ ದಾಳಿಯನ್ನು 10 ದಿನ ಸ್ಥಗಿತಗೊಳಿಸುವುದಾಗಿ ಟ್ರಂಪ್ ಘೋಷಿಸಿದ್ದಾರೆ. ಇರಾನ್ ಸರ್ಕಾರದ ಕೋರಿಕೆಯ ಮೇರೆಗೆ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಅಲ್ಲದೇ ಇದು ಎರಡೂ ದೇಶಗಳ ನಡುವೆ ಮಾತುಕತೆಯನ್ನ ಮುಂದುವರಿಸಲು ಅನುವು ಮಾಡಿಕೊಡುತ್ತದೆ ಎಂದು ಅವರು ಹೇಳಿದ್ದಾರೆ.

ನಾನು ಇಂಧನ ಸ್ಥಾಪನೆಗಳ ನಾಶವನ್ನ 10 ದಿನಗಳವರೆಗೆ ವಿರಾಮಗೊಳಿಸುತ್ತಿದ್ದೇನೆ. ಇದು ಏಪ್ರಿಲ್ 6 ರ ರಾತ್ರಿ 8 ಗಂಟೆಯವರೆಗೆ ಮುಂದುವರಿಯುತ್ತದೆ ಎಂದು ಅವರು ಪೋಸ್ಟ್ ಮಾಡಿದ್ದಾರೆ. ಅಲ್ಲದೆ, ಇರಾನ್ ಮಾತುಕತೆಗೆ ಒಪ್ಪಿಲ್ಲ ಎನ್ನುವ ಮಾಧ್ಯಮ ವರದಿಗಳನ್ನು ತಳ್ಳಿಹಾಕಿರುವ ಟ್ರಂಪ್, ಅಮೆರಿಕ ಮತ್ತು ಇರಾನ್ ನಡುವೆ ಸಕಾರಾತ್ಮಕ ದಿಕ್ಕಿನಲ್ಲಿ ಮಾತುಕತೆ ನಡೆಯುತ್ತಿದೆ ಎಂದು ಪ್ರತಿಕ್ರಿಯಿಸಿದ್ದಾರೆ.

## ಸಮರ್ಥ್ ಗೆಲುವು ಖಚಿತ: ಡಿಕೆಶಿ



**ಬೆಂಗಳೂರು:** ದಾವಣಗೆರೆಯಲ್ಲಿ ದಕ್ಷಿಣ ಕ್ಷೇತ್ರದಲ್ಲಿ ಶಾಮನೂರು ಶಿವಶಂಕರಪ್ಪ ಅವರಿಗಿಂತ ಹೆಚ್ಚು ಮತಗಳ ಅಂತರದಿಂದ ಸಮರ್ಥ್ ಗೆಲುವು ಸಾಧಿಸುತ್ತಾರೆ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ತಿಳಿಸಿದರು.

ಮಾಧ್ಯಮದರೊಂದಿಗೆ ಮಾತನಾಡಿದ ಅವರು, ಅಲ್ಪಸಂಖ್ಯಾತರ ಮತಗಳು ವಿಭಜನೆಯಾಗುತ್ತವೆಯೇ ಎಂದು ಪ್ರಶ್ನೆಗೆ, ಯಾವುದೇ ಕಾರಣಕ್ಕೂ ವಿಭಜನೆ ಆಗುವುದಿಲ್ಲ. ಬೇರೆ ಸಮುದಾಯಗಳೂ ಆಗುವುದಿಲ್ಲ. ಶಿವಶಂಕರಪ್ಪ ಅವರಿಗಿಂತ ಹೆಚ್ಚು ಮತಗಳ ಅಂತರದಿಂದ ಅವರ ಮೊಮ್ಮಗ ಸಮರ್ಥ್ ಗೆಲ್ಲುತ್ತಾರೆ ಎನ್ನುವ ವಿಶ್ವಾಸವಿದೆ. ಇಡೀ ರಾಜ್ಯ ನೋಡುವಂತೆ ಆ ಕುಟುಂಬ ದಾವಣಗೆರೆಗೆ ಕೊಡುಗೆ ಕೊಟ್ಟಿದೆ. ಜನ ಅವರನ್ನ ಸ್ಮರಿಸುತ್ತಿದ್ದಾರೆ ಎಂದು ತಿಳಿಸಿದರು.


ಜಮೀರ್, ಜಬ್ಬಾರ್, ನಜೀರ್ ಅವರು ಎಲ್ಲಾ ಕಾಂಗ್ರೆಸ್ ನಾಯಕರು ಪಕ್ಷ ಏನು ಹೇಳುತ್ತದೆಯೋ ಅದನ್ನು ಕೇಳುತ್ತಾರೆ. ಇದರಲ್ಲಿ ಯಾವುದೇ ಅನುಮಾನ ಬೇಡ. ಪುಟ 2ಕ್ಕೆ

## ಕಣದಿಂದ ಹಿಂದೆ ಸರಿದ ಪೈಲ್ವಾನ್



**ಬೆಂಗಳೂರು:** ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಸ್ಪರ್ಧೆಯಿಂದ ಹಿಂದೆ ಸರಿದಿರುವುದಾಗಿ ಪಕ್ಷೇತರ ಅಭ್ಯರ್ಥಿ ಸಾದಿಕ್ ಪೈಲ್ವಾನ್ ತಿಳಿಸಿದರು. ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು ನಾನು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತ. ಮುಸ್ಲಿಮರಿಗೆ ಟಿಕೆಟ್ ನೀಡಲಿಲ್ಲ ಎಂದು ಬಂಡಾಯ ಅಭ್ಯರ್ಥಿಯಾಗಿ ಪುಟ 2ಕ್ಕೆ

## ಸುಂಕ ಕಡಿತಕ್ಕೆ ಡಿಕೆಶಿ ಆಕ್ರೋಶ



**ಬೆಂಗಳೂರು:** ಕೇಂದ್ರ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕ ಕಡಿತಗೊಳಿಸಿರುವ ಕ್ರಮಕ್ಕೆ ಡಿಸಿಎಂ ಡಿ.ಕೆ ಶಿವಕುಮಾರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮುಂಬರುವ ರಾಜ್ಯಗಳ ವಿಧಾನಸಭೆ ಚುನಾವಣೆ ಇರುವುದರಿಂದ ತೈಲದ ಅಬಕಾರಿ ಸುಂಕ ಕಡಿಮೆ ಮಾಡಿದ್ದಾರೆ. ತೈಲ ಬೆಲೆ ಹೆಚ್ಚಳ ಮಾಡಿ ಕೇಂದ್ರ ನಮ್ಮನ್ನು ಕೊಲೆ ಮಾಡುತ್ತಿದೆ. ಕಂಪನಿಯವರು ಕೂಡ ಜಾಸ್ತಿ ಮಾಡಿದ್ದಾರೆ ಎಂದು ಕಿಡಿಕಾರಿದರು. ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಂದೀಪ್ ಸಿಂಗ್ ಸುರ್ಜೇವಾಲಾ ಬೆಂಗಳೂರಿಗೆ ಬರುತ್ತಿದ್ದಾರೆ. ನಾನು, ಮುಖ್ಯಮಂತ್ರಿ ಹಾಗೂ ಸುರ್ಜೇವಾಲಾ ಅವರು ಈ ವಿಚಾರ ಕುರಿತು ರಾಜ್ಯದ ಜನತೆಗೆ ಬೆಳಕು ಚೆಲ್ಲುತ್ತೇವೆ ಎಂದು ಅವರು ಹೇಳಿದರು.

### ಶಾಸಕರು ಕ್ರಿಕೆಟ್ ಟಿಕೆಟ್ ಕೇಳುವುದು ತಪ್ಪಲ್ಲ: ಪರಂ



**ಬೆಂಗಳೂರು:** ಶಾಸಕರು ಐಪಿಎಲ್ ಕ್ರಿಕೆಟ್ ಟಿಕೆಟ್ ಕೇಳುವುದರಲ್ಲಿ ತಪ್ಪಿಲ್ಲ. ಸರ್ಕಾರ ಎಷ್ಟರ ಮಟ್ಟಿಗೆ ಭಾಗಿಯಾಗುತ್ತದೆ ಎಂಬುದನ್ನು ನೋಡಬೇಕು. ಈವರೆಗೆ ಸರ್ಕಾರ ಮಧ್ಯಪ್ರವೇಶ ಮಾಡಿಲ್ಲ. ದುರಂತದ ಹಿನ್ನೆಲೆಯಲ್ಲಿ ಕಮಿಟಿಗೆ ಶಿಫಾರಸು ಮಾಡಿ ಪಂದ್ಯ ಆಡಲು ಅನುಮತಿ ನೀಡಿದ್ದೇವೆ ಎಂದು ಗೃಹ ಸಚಿವ ಪರಮೇಶ್ವರ ತಿಳಿಸಿದರು. ಟಿಕೆಟ್ ವಿಚಾರ ಪುಟ 2ಕ್ಕೆ


## ತೈಲ ಬಿಕ್ಕಟ್ಟು: ಲಾಕ್‌ಡೌನ್ ವದಂತಿ ಸುಳ್ಳು: ಕೇಂದ್ರ

**ನವದೆಹಲಿ:** ದೇಶದಲ್ಲಿ ತೈಲ ಬಿಕ್ಕಟ್ಟು ಉಲ್ಬಣಗೊಂಡ ಬಳಿಕ ದೇಶದಲ್ಲಿ ಲಾಕ್‌ಡೌನ್ ಜಾರಿ ಮಾಡಬಹುದು ಅನ್ನುವ ಸುದ್ದಿಗಳನ್ನ ಹರಿಯಬಿಡಲಾಗಿತ್ತು. ಇದಕ್ಕೆ ಕೇಂದ್ರ ಸರ್ಕಾರ ಸ್ಪಷ್ಟನೆ ನೀಡಿದೆ.

ತೈಲ ಬಿಕ್ಕಟ್ಟಿನಿಂದ ಜಾಗತಿಕ ಪರಿಸ್ಥಿತಿ ಅಸ್ಥಿರವಾಗಿದ್ದು, ಇಂಧನ, ಪೂರೈಕೆಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದೇವೆ. ಪ್ರಧಾನಿ ಮೋದಿ ನೇತೃತ್ವದಲ್ಲಿ ಹೊಸ ಸವಾಲುಗಳನ್ನು ಎದುರಿಸಲು ಸಿದ್ಧರಿದ್ದೇವೆ. ಭಾರತದಲ್ಲಿ ಲಾಕ್‌ಡೌನ್ ಬಗ್ಗೆ ಇರುವ ವದಂತಿಗಳು ಶುದ್ಧ ಸುಳ್ಳು. ಸರ್ಕಾರದ ಮುಂದೆ ಅಂತಹ ಯಾವುದೇ ಪ್ರಸ್ತಾವನೆಗಳೂ ಇಲ್ಲ. ಇಂತಹ ಸಮಯದಲ್ಲಿ ನಾವೆಲ್ಲಾ ಒಗ್ಗಟ್ಟಾಗಿರುವುದು ಸೂಕ್ತ. ಈ ರೀತಿಯ ವದಂತಿಗಳು ಸಮಾಜಕ್ಕೆ ಹಾನಿಕಾರಕ ವಾಗಲಿದೆ ಎಂದು ಕೇಂದ್ರ ಸಚಿವ ಹರ್ದೀಪ್ ಸಿಂಗ್ ಪುರಿ ಸ್ಪಷ್ಟನೆ ನೀಡಿದ್ದಾರೆ.

ಕಮರ್ಷಿಯಲ್ ಗ್ಯಾಸ್ ಪೂರೈಕೆಯ ಸಮಸ್ಯೆ ಬಗೆಹರಿಸಲು ಕೇಂದ್ರ ಮುಂದಾಗಿದೆ. ರಾಜ್ಯ ಸರ್ಕಾರಗಳ ಮನವಿ ಮೇರೆಗೆ ಶೇ.20ರಷ್ಟು ಗ್ಯಾಸ್ ಹೆಚ್ಚಳ ಮಾಡಿದೆ. ಈಗಿರುವ ಕಮರ್ಷಿಯಲ್ ಗ್ಯಾಸ್ ಮಿತಿ ಶೇ.50ರಿಂದ 70ಕ್ಕೆ ಹೆಚ್ಚಳವಾಗಲಿದೆ. ಇದರಿಂದ ಕೈಗಾರಿಕೆ, ಜವಳಿ ಸೇರಿದಂತೆ ಹಲವು ವಲಯಗಳಿಗೆ ಅನುಕೂಲವಾಗಲಿದೆ.

## 444 ಎಕರೆ ಅರಣ್ಯ ಭೂಮಿ ಮರುವಶಕ್ಕೆ ಸಚಿವ ಖಂಡ್ರೆ ಆದೇಶ



**ಬೆಂಗಳೂರು:** ಬೆಂಗಳೂರು ಉತ್ತರ ತಾಲ್ಲೂಕಿನ ಜಾರಕಬಂಡೆ ಶ್ರೀಗಂಧದ ಕಾವಲ್‌ನಲ್ಲಿ ವಾಯುಪಡೆಯ ವಶದಲ್ಲಿರುವ 444 ಎಕರೆ ಅರಣ್ಯ ಭೂಮಿ ಮರುವಶಕ್ಕೆ ಕರ್ನಾಟಕ ಅರಣ್ಯ ಕಾಯಿದೆ 1963ರ ಸೆಕ್ಷನ್ 64ಎ ಅಡಿ ಪ್ರಕ್ರಿಯೆ ಆರಂಭಿಸಲು ಅರಣ್ಯ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಲಿಖಿತ ಸೂಚನೆ ನೀಡಿದ್ದಾರೆ.

ಈ ಸಂಬಂಧ ಇಲಾಖೆ ಮುಖ್ಯ ಕಾರ್ಯದರ್ಶಿಗೆ ಎರಡು ಪ್ರತ್ಯೇಕ ಆದೇಶ ನೀಡಿರುವ ಅವರು, ಜಾರಕಬಂಡೆ ಕಾವಲ್ ಅರಣ್ಯ ಪ್ರದೇಶದಲ್ಲಿ ವಾಯುಪಡೆಗೆ ನೀಡಲಾಗಿದ್ದ 452 ಎಕರೆ 4ಳಿ ಗಂಟೆ ಭೂ ಮಂಜೂರಾತಿಯನ್ನು ರಾಜ್ಯ ಸರ್ಕಾರ 2017ರ ಅ.09ರಂದು ರದ್ದುಗೊಳಿಸಿದೆ. ಇದನ್ನು ಅತ್ಯಗತ್ಯವಾದ ಶ್ವಾಸತಾಣವಾಗಿ ಉಳಿಸಲು ತೀರ್ಮಾನಿಸಲಾಗಿದೆ. ಕೂಡಲೇ ತೆರವಿಗೆ ಕ್ರಮ ವಹಿಸುವಂತೆ ಸೂಚಿಸಿದ್ದಾರೆ.

ಭೂ ಮಂಜೂರಾತಿ ರದ್ದುಪಡಿಸಿದ ಬಳಿಕವೂ ಭಾರತೀಯ ವಾಯುಪಡೆ ಸದರಿ ಭೂಮಿಯನ್ನು ಬಳಸಲು, ಅರಣ್ಯ (ಸಂರಕ್ಷಣಾ) ಕಾಯ್ದೆ–1980ರಡಿಯಲ್ಲಿ ನಿಯಮಾನುಸಾರ ಅರ್ಜಿ ಸಲ್ಲಿಸಿ ಪರ್ಯಾಯ ಭೂಮಿ ನೀಡುವಂತೆ ತಿಳಿಸಿದ್ದರೂ ನಿಯಮ ಉಲ್ಲಂಘಿಸಿದೆ. ಈ ನಿಟ್ಟಿನಲ್ಲಿ 64ಎ ನೋಟಿಸ್ ನೀಡಿ ಒತ್ತುವರಿ ಪುಟ 2ಕ್ಕೆ

## ಕ್ರಿಕೆಟ್: ಶಾಸಕರಿಗೆ ತಲಾ 2 ಟಿಕೆಟ್

### ಸಿಎಂ, ಡಿಸಿಎಂಗೆ ಆಹ್ವಾನ ನೀಡಿದ ವೆಂಕಟೇಶ್ ಪ್ರಸಾದ್





**ಬೆಂಗಳೂರು:** ಚಿನ್ನಸ್ವಾಮಿ ಮೈದಾನದಲ್ಲಿ ಶನಿವಾರ ರಾತ್ರಿ ನಡೆಯಲಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಸನ್‌ರೈಸರ್ಸ್ ಹೈದರಾಬಾದ್ ನಡುವಿನ ಪಂದ್ಯಕ್ಕೆ ಶಾಸಕರಿಗೆ 1+1 ಟಿಕೆಟ್ ನೀಡಲು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಒಪ್ಪಿಕೊಂಡಿದೆ.

ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಮತ್ತು ಪದಾಧಿಕಾರಿಗಳು ಸಿಎಂ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಅವರನ್ನು ವಿಧಾನಸೌಧದಲ್ಲಿ ಶುಕ್ರವಾರ ಭೇಟಿ ಮಾಡಿ ಪಂದ್ಯಕ್ಕೆ ಆಹ್ವಾನ ನೀಡಿದರು.

ಈ ಭೇಟಿ ವೇಳೆ ಸಿಎಂ ಸಿದ್ದರಾಮಯ್ಯ ಅವರು, ನಮ್ಮ ಶಾಸಕರು ಐಪಿಎಲ್ ಟಿಕೆಟ್ ವಿಚಾರವಾಗಿ ಬೇಡಿಕೆ ಇಟ್ಟಿದ್ದಾರೆ. ನಾಲ್ಕು ಟಿಕೆಟ್ ಕೊಡಿ ಎಂದು ಕೇಳಿದ್ದಾರೆ. ಇದಕ್ಕೆ ವೆಂಕಟೇಶ್ ಪ್ರಸಾದ್ ಒಪ್ಪಿದ್ದಾರೆ. ಕೆಎಸ್‌ಸಿಎ ಸದಸ್ಯರಾದ ಡಿಕೆಶಿ ಅವರು ಶಾಸಕರಿಗೆ ಟಿಕೆಟ್ ನೀಡುವಂತೆ ಸೂಚಿಸಿದ್ದಾರೆ. ಈಗಾಗಲೇ ಟಿಕೆಟ್ ಮಾರಾಟವಾಗಿರುವ ಕಾರಣ ನಾಳಿನ ಪಂದ್ಯಕ್ಕೆ 1+1 ಟಿಕೆಟ್ ಹಾಗೂ ಮುಂದೆ ನಡೆಯಲಿರುವ ಪಂದ್ಯಕ್ಕೆ 4 ಟಿಕೆಟ್ ನೀಡುವ ಬಗ್ಗೆ ಕೆಎಸ್‌ಸಿಎ ಭರವಸೆ ನೀಡಿದೆ.

ಇದಕ್ಕೆ ಡಿಕೆಶಿ ಪ್ರತಿಕ್ರಿಯಿಸಿ, ಶಾಸಕರಿಗೆ ಟಿಕೆಟ್ ಕೇಳಲು ಹಕ್ಕಿದೆ. ಏಕೆಂದರೆ ಅವರು ಸರ್ಕಾರ ಹಾಗೂ ವ್ಯವಸ್ಥೆಯ ಭಾಗ. ಈಗ ನಾವು ಒತ್ತಡಗಳ ಮಧ್ಯೆ ಪಂದ್ಯ ಆಯೋಜನೆಗೆ ಅನುಮತಿ ನೀಡಿದ್ದೇವೆ. ಪುಟ 2ಕ್ಕೆ

## ಅಯೋಧ್ಯೆ ರಾಮಮಂದಿರದಲ್ಲಿ ಶ್ರೀರಾಮನಿಗೆ ಸೂರ್ಯ ತಿಲಕ



**ಲಕ್ನೋ:** ಅಯೋಧ್ಯೆ ರಾಮಮಂದಿರದಲ್ಲಿ ರಾಮನವಮಿ ಸಂಭ್ರಮ ಮನೆ ಮಾಡಿದೆ. ಈ ಶುಭ ಸಂದರ್ಭದಲ್ಲಿ ಬಾಲರಾಮನ ಹಣೆ ಮೇಲೆ ಸೂರ್ಯ ತಿಲಕ ಇಟ್ಟಿದ್ದಾನೆ. ಸೂರ್ಯ ರಶ್ಮಿಯು ನೇರವಾಗಿ ರಾಮಲಲ್ಲಾ ವಿಗ್ರಹದ ಹಣೆಯ ಮೇಲೆ ಬಿದ್ದ ದಿವ್ಯ ದೃಶ್ಯ ಕಂಡುಬಂದಿದೆ.

ನಿಖರವಾಗಿ ಶುಕ್ರವಾರ ಮಧ್ಯಾಹ್ನ 12 ಗಂಟೆಗೆ ಬಾಲರಾಮನ ಮೂರ್ತಿಯ ಹಣೆಯ ಮೇಲೆ ಬಿದ್ದ ಸೂರ್ಯನ ಕಿರಣ ದಿವ್ಯ ತಿಲಕ ರೂಪಿಸಿತು. ಈ ತಿಲಕವು ಮೂರ್ತಿ ಮೇಲೆ ಸುಮಾರು 3ರಿಂದ 4 ನಿಮಿಷಗಳ ಕಾಲ ಕಂಡುಬಂತು. ಈ ವಿಸ್ಮಯವನ್ನು ಶ್ರೀರಾಮನ ಭಕ್ತರು ಕಣ್ತುಂಬಿಕೊಂಡರು. ಈ ಸೂರ್ಯ ರಶ್ಮಿ ದೇವರ ಹಣೆಯನ್ನು ಬೆಳಗಿಸಿ, ಆಚರಣೆಗಳಿಗೆ ಆಧ್ಯಾತ್ಮಿಕ ಹೊಳಪನ್ನು ನೀಡಿತು.

**2 ಲಕ್ಷಕ್ಕೂ ಅಧಿಕ ಭಕ್ತರ ದರ್ಶನ:** ಇನ್ನೂ ರಾಮನವಮಿ ಸಂಭ್ರಮದ ಹಿನ್ನೆಲೆ ದೇಶದ ವಿವಿಧೆಡೆಯಿಂದ ಶ್ರೀರಾಮನ ಭಕ್ತರು ಅಯೋಧ್ಯೆಗೆ ಆಗಮಿಸಿದ್ದರು. ತಡರಾತ್ರಿವರೆಗೆ 2 ಲಕ್ಷಕ್ಕೂ ಅಧಿಕ ಭಕ್ತರು ದರ್ಶನ ಪಡೆದಿದ್ದಾರೆ. ಬುಧವಾರ ಸಹ ರಾತ್ರಿ 10 ಗಂಟೆವರೆಗೆ ಬಾಲ ರಾಮನ ದರ್ಶನಕ್ಕೆ ಭಕ್ತರಿಗೆ ಮುಕ್ತ ಅವಕಾಶ ಕಲ್ಪಿಸಲಾಗಿದೆ. ದೇಶಾದ್ಯಂತ ರಾಮನವಮಿಯನ್ನು ಅತ್ಯಂತ ವೈಭವದಿಂದ ಆಚರಿಸಲಾಗುತ್ತಿದೆ. ಇದು ವಿಷ್ಣುವಿನ 7ನೇ ಅವತಾರವಾದ ಭಗವಾನ್ ರಾಮ ಜನ್ಮ ವಾರ್ಷಿಕೋತ್ಸವದ ದಿನ.

## ಕೆಇಎ ಪರೀಕ್ಷೆ ಮುಂದೂಡಿಕೆ

**ಬೆಂಗಳೂರು:** ವಿಧಾನಸಭೆ ಎರಡು ಕ್ಷೇತ್ರಗಳಿಗೆ ಏ.9ರಂದು ಉಪಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಅಂದು ನಡೆಸಬೇಕಾಗಿದ್ದ ವಾಯವ್ಯ ರಸ್ತೆ ಸಾರಿಗೆ ಸಂಸ್ಥೆಯ ವಿವಿಧ ಖಾಲಿ ಹುದ್ದೆಗಳ ನೇಮಕಾತಿ ಪರೀಕ್ಷೆಯನ್ನು ಏ.10ರಂದು ನಡೆಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ತೀರ್ಮಾನಿಸಿದೆ.

ಬೆಂಗಳೂರು ಮತ್ತು ಧಾರವಾಡ ಕೇಂದ್ರಗಳಲ್ಲಿ ಅಂದು ಲಿಖಿತ ಪರೀಕ್ಷೆ ನಡೆಯಲಿದೆ. ಸದ್ಯದಲ್ಲೇ ಪ್ರವೇಶ ಪತ್ರಗಳನ್ನು ಪುಟ 2ಕ್ಕೆ




## ಬಿಆರ್‌ಟಿ ಹುಲಿ ಪ್ರದೇಶದಲ್ಲಿ 30 ಎಕರೆ ಅರಣ್ಯ ಬೆಂಕಿಗಾಹುತಿ



**ಚಾಮರಾಜನಗರ:** ತಾಲ್ಲೂಕಿನ ಬಿಆರ್ ಟಿ ಹುಲಿ ಸಂರಕ್ಷಿತ ಪ್ರದೇಶದ ಬೈಲೂರು ವಲಯ ವ್ಯಾಪ್ತಿಯ ಗುಂಡಿಮಾಳ ಹಾಗೂ ನೆಲ್ಲಿಕತ್ರಿ ಅರಣ್ಯದಲ್ಲಿ ಬೆಂಕಿ ಹೊತ್ತಿದೆ. ಬೆಂಕಿಯ ಕೆನ್ನಾಲಿಗೆಗೆ ಸುಮಾರು 30 ಎಕರೆ ಅರಣ್ಯ ಆಹುತಿ ಆಗಿದೆ.

ಬಿಆರ್‌ಟಿ ವನ್ಯಜೀವಿ ವಲಯ ವ್ಯಾಪ್ತಿಯ ನೆಲ್ಲಿಕತ್ರಿ ಅರಣ್ಯ ಪ್ರದೇಶದಲ್ಲಿ ಗುರುವಾರ ರಾತ್ರಿ ಬೆಂಕಿ ಕಾಣಿಸಿಕೊಂಡಿದೆ. ಗಾಳಿ ಹೆಚ್ಚಾಗಿರುವುದರಿಂದ ಏಕಾಏಕಿ ಬೆಂಕಿ ವ್ಯಾಪಿಸಿ ಸುಮಾರು 30 ಎಕರೆಗೂ ಹೆಚ್ಚು ಅರಣ್ಯ ಪ್ರದೇಶ ಬೆಂಕಿಗೆ ಆಹುತಿಯಾಗಿದೆ.

ಬೈಲೂರು ವನ್ಯಜೀವಿ ವಲಯ ವ್ಯಾಪ್ತಿಯ ಗುಂಡಿಮಾಳ ಗ್ರಾಮದ ಅರಣ್ಯ ಪ್ರದೇಶದಲ್ಲಿ ಬೆಂಕಿ ಕಾಣಿಸಿಕೊಂಡ ವಿಚಾರ ತಿಳಿಯುತ್ತಿದ್ದಂತೆ ಬೈಲೂರು ವನ್ಯಜೀವಿ ಪುಟ 2ಕ್ಕೆ

# ಡಿಸಿಯೊಂದಿಗೆ ವಿದ್ಯಾರ್ಥಿಗಳ ಸಂವಾದ

ಚಾಮರಾಜನಗರ, ಬೇಡಗುಳಿಗೆ ಜಿಲ್ಲಾಧಿಕಾರಿ ಶ್ರೀರೂಪ ಅವರು ಬುಧವಾರ (ಮಾ.25) ಭೇಟಿ ನೀಡಿ ಸೋಲಿಗ ಸಮುದಾಯದವರೊಂದಿಗೆ ಸಂವಾದ ನಡೆಸಿ ಸಮಸ್ಯೆಗಳನ್ನು ಆಲಿಸಿದರು. ಬೇಡಗುಳಿಯಲ್ಲಿರುವ ಸೋಲಿಗರ ಹಾಡಿಗಳಿಗೆ ತೆರಳಿದ ಜಿಲ್ಲಾಧಿಕಾರಿ ಶ್ರೀರೂಪ ಅವರಿಗೆ ಸ್ಥಳೀಯರು ಹಾಡಿಗಳಲ್ಲಿನ ಕುಡಿಯುವ ನೀರು, ವಿದ್ಯುತ್, ವಸತಿ ಸೇರಿದಂತೆ ಇತರೆ ಮೂಲ ಸೌಕರ್ಯಗಳ ಸಮಸ್ಯೆಗಳನ್ನು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು.

ಇದೇ ವೇಳೆ ಟಿವಿಎಸ್, ಎಸ್.ಎಸ್.ಟಿ ವತಿಯಿಂದ ಬೇಡಗುಳಿಯಲ್ಲಿ ಆಯೋಜಿಸಲಾಗಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿದ ಜಿಲ್ಲಾಧಿಕಾರಿಯವರು ಮಹಿಳೆಯರು ಶಿಕ್ಷಣವನ್ನು ಮುಂದುವರಿಸಬೇಕು. ಮಕ್ಕಳು ಶಾಲೆಯನ್ನು ತೊರೆಯಬಾರದು ಎಂದು ಸಲಹೆ ಮಾಡಿದರು. ಗಿರಿಜನ ಮಹಿಳೆಯರು ತಯಾರಿಸುವ ಉತ್ಪನ್ನಗಳನ್ನು ಚಾಮರಸಿ ಬ್ರಾಂಡ್ ಮೂಲಕ ಪ್ರಚಾರ ಮಾಡಿ ಸ್ವಾವಲಂಬನೆ ಸಾಧಿಸುವಂತೆ ತಿಳಿಸಿದರು. ಅಲ್ಲದೇ ಸ್ತ್ರೀ ಸೌಖ್ಯ ಯೋಜನೆಯಡಿ ಮಹಿಳೆಯರು ಕ್ಯಾನ್ಸರ್



ತಪಾಸಣೆಗೆ ಒಳಗಾಗುವಂತೆ ಜಾಗೃತಿ ಮೂಡಿಸಿದರು. ಬೇಡಗುಳಿಯ ಆಶ್ರಮ ಶಾಲೆಗೆ ಭೇಟಿ ನೀಡಿದ ಜಿಲ್ಲಾಧಿಕಾರಿ ಶ್ರೀರೂಪ ಅವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಶಿಕ್ಷಣದ ಗುಣಮಟ್ಟ ಹಾಗೂ ಶಿಕ್ಷಕರ ಕಾರ್ಯನಿರ್ವಹಣೆ ಕುರಿತು ಪರಿಶೀಲನೆ ನಡೆಸಿದರು. ಶಿಕ್ಷಣದ ಮಹತ್ವವನ್ನು ವಿದ್ಯಾರ್ಥಿಗಳಿಗೆ ವಿವರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಹೆಚ್.ಎಸ್. ಬಿಂದ್ಯಾ ಸೇರಿದಂತೆ ಇತರರು ಇದ್ದರು.

# ಬಡ್ತಿ ನೀಡುವ ಪ್ರಕ್ರಿಯೆ ಆರಂಭಿಸುವಂತೆ ಮನವಿ

ಚಾಮರಾಜನಗರ: ಆಯುಕ್ತರ ಆದೇಶದಂತೆ ಜಿಲ್ಲೆಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲಾ ಸಹ ಶಿಕ್ಷಕರಿಂದ ಮುಖ್ಯ ಶಿಕ್ಷಕರ ಹುದ್ದೆಗೆ ಬಡ್ತಿ ನೀಡುವ ಪ್ರಕ್ರಿಯೆ ಆರಂಭಿಸುವಂತೆ

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕದ ವತಿಯಿಂದ ನಗರದ ಜಿಲ್ಲಾಡಳಿತ ಭವನದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಚಂದ್ರಪಾಟೀಲ್ ಅವರಿಗೆ ಮನವಿ ಸಲ್ಲಿಸಲಾಯಿತು

2025–26ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲಾ ಸಹ ಶಿಕ್ಷಕರಿಗೆ ಮುಖ್ಯ ಶಿಕ್ಷಕರ ಹುದ್ದೆಗೆ ಬಡ್ತಿ ನೀಡುವ ಕುರಿತು 18.03.2026 ಮಾ.18ರಂದು ಆಯುಕ್ತರಿಂದ ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಗೆ (ಆಡಳಿತ) ಆದೇಶವಾಗಿರುತ್ತದೆ.ಸುಮಾರು ವರ್ಷಗಳಿಂದ ಬಡ್ತಿ ಪ್ರಕ್ರಿಯೆ ನಿಂತಿದ್ದರಿಂದ ನಮ್ಮ ಜಿಲ್ಲೆಯಲ್ಲಿ ಬಡ್ತಿಯಿಂದ ವಂಚಿತರಾಗಿ ಅನೇಕ ಹಿರಿಯ ಶಿಕ್ಷಕರು ನಿವೃತ್ತಿಯನ್ನು ಹೊಂದಿರುತ್ತಾರೆ. ಪ್ರಸ್ತುತ ಜಿಲ್ಲೆಯಲ್ಲಿ ಸಾಕಷ್ಟು ಮುಖ್ಯ ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಅನೇಕ ಹಿರಿಯ ಸಹ ಶಿಕ್ಷಕರು ನಿವೃತ್ತಿಯ ಅಂಚಿನಲ್ಲಿದ್ದಾರೆ. ನಮ್ಮೆಲ್ಲರ ಆಶಯದಂತೆ ಈಗ ಬಡ್ತಿ ಪ್ರಕ್ರಿಯೆ ಆರಂಭವಾಗಿದೆ. ಶಾಲಾ ಆಡಳಿತಾತ್ಮಕ ಹಿತದೃಷ್ಟಿಯಿಂದಲೂ ಬಹುಬೇಗ ಮುಗಿಸಬೇಕಿದೆ.

ಆದ್ದರಿಂದ, ಜಿಲ್ಲೆಯಲ್ಲಿ ಬಡ್ತಿ ನೀಡುವ ಸಮಕ್ಷಮ ಪ್ರಾಧಿಕಾರಿಗಳು ತಾವೇ ಆಗಿರುವುದರಿಂದ ದಯಮಾಡಿ



2026 ಜ. 1ರಲ್ಲಿದ್ದಂತೆ ಜಿಲ್ಲೆಯ ಜೇಷ್ಠತಾ ಪಟ್ಟಿಯನ್ನು ಸಿದ್ದಪಡಿಸಿ ಪ್ರಕಟಿಸಿ, ನಂತರ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಿ, ಅಂತಿಮ ಅರ್ಹತಾ ಪಟ್ಟಿ ತಯಾರಿಸಿ, ಬಡ್ತಿ ಪ್ರಕ್ರಿಯೆ ನಡೆಸುವ ವೇಳಾ ಪಟ್ಟಿಯನ್ನು ತಕ್ಷಣ ಬಿಡುಗಡೆ ಮಾಡಿ, ಶೀಘ್ರವಾಗಿ ಕೌನ್ಸಿಲಿಂಗ್ ಪೂರ್ಣಗೊಳಿಸಲು ಜಿಲ್ಲೆಯ ಸಮಸ್ತ ಶಿಕ್ಷಕರ ಪರವಾಗಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸಲ್ಲಿಸಿರುವ ಮನವಿಯಲ್ಲಿ ಜಿಲ್ಲಾ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಕೆ.ಎಸ್.ಮಾದಪ್ಪ, ಪ್ರಧಾನ ಕಾರ್ಯ ದರ್ಶಿ ಮಹಾದೇವಸ್ವಾಮಿ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಚಾಮರಾಜನಗರ ತಾಲೂಕು ಅಧ್ಯಕ್ಷ ಸಿ.ಕೆ.ರಾಮಸ್ವಾಮಿ, ಗುಂಡ್ಲುಪೇಟೆ ತಾಲೂಕು ಅಧ್ಯಕ್ಷ ಶಿವಪ್ರಸಾದ್, ಕೊಳ್ಳೇಗಾಲ ತಾಲೂಕು ಅಧ್ಯಕ್ಷ ಶ್ರೀಧರ್, ಕಾರ್ಯದರ್ಶಿ ನಂದೀಶ್, ಯಳಂದೂರು ತಾಲೂಕು ಅಧ್ಯಕ್ಷ ಸೋಮಣ್ಣ, ಕಾರ್ಯದರ್ಶಿ ನಾಗರಾಜು, ಹನೂರು ತಾಲೂಕು ಕಾರ್ಯದರ್ಶಿ ನಾಗಸುಂದರ, ಪದಾಧಿಕಾರಿಗಳಾದ ಎಂಡಿ.ಮಹದೇವಯ್ಯ, ಭರತ್ ಭೂಷಣ್, ಶಾಂತರಾಜು, ಮಹಾದೇವಸ್ವಾಮಿ, ಕೃಷ್ಣಮೂರ್ತಿ, ಪುಟ್ಟಸ್ವಾಮಿ, ಸಮೀವುಲ್ಲಾ, ಧನಂಜಯ ಇತರರು ಹಾಜರಿದ್ದರು.

## ಮೊದಲ ಪುಟದಿಂದ

### ಬಿಆರ್ ಟಿ ಹುಲಿ ಪ್ರದೇಶದಲ್ಲಿ 30 ಎಕರೆ ಅರಣ್ಯ ಬೆಂಕಿಗಾಹುತಿ

ವಲಯ ಸಿಬ್ಬಂದಿ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಅಗ್ನಿಶಾಮಕ ಠಾಣೆಗೆ ಮಾಹಿತಿ ನೀಡಿದ್ದರು.

ತಕ್ಷಣ ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ಠಾಣೆಯ ಸಿಬ್ಬಂದಿ ವರ್ಗದವರು ಹಾಗೂ ಅರಣ್ಯ ಇಲಾ ಖೆಯ ಸಿಬ್ಬಂದಿ ಬೆಂಕಿಯನ್ನು ನಂದಿಸಿ ಕಾಡ್ಗಿಚ್ಚು ಹರಡದಂತೆ ತಡೆಯುವಲ್ಲಿ ಯಶಸ್ವಿಯಾಗಿ ದ್ದಾರೆ. ಅರಣ್ಯ ಇಲಾಖೆ ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಜಂಟಿ ಕಾರ್ಯಚರಣೆಯಿಂದ ಬೆಂಕಿಯನ್ನು ಹತೋಟಿಗೆ ತರಲಾಗಿದೆ.

### ಕಣದಿಂದ ಹಿಂದೆ ಸರಿದ ಪೈಲ್ವಾನ್

ಕಣಕ್ಕೆ ಇಳಿದಿದ್ದೆ. ಮುಖ್ಯಮಂತ್ರಿ ಸಿದ್ದ ರಾಮಯ್ಯ, ಕೆಪಿಸಿಸಿ ಅಧ್ಯಕ್ಷ

ಡಿ.ಕೆ.ಶಿವಕುಮಾರ್ ಮಾತಿಗೆ ಮನ್ನಣೆ ನೀಡಿ ಸ್ಪರ್ಧೆಯಿಂದ ಹಿಂದೆ ಸರಿದಿದ್ದೇನೆ. ಪಕ್ಷ ಶಾಮನೂರು ಶಿವಶಂಕರಪ್ಪ ಅವರ ಮೊಮ್ಮಗ ಸಮರ್ಥ್ ಅವರಿಗೆ ಟಿಕೆಟ್ ನೀಡಿದೆ. ಅವರನ್ನು ಗೆಲ್ಲಿಸಿಕೊಂಡು ಬೆಂಗಳೂರಿಗೆ ಕರೆತರುವೆ ಎಂದು ಭರವಸೆ ನೀಡಿದರು. ಇದಕ್ಕೂ ಮುನ್ನ ಅವರು ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದರು.

### ಇಂಧನ ಅಬಕಾರಿ ಸುಂಕ ಕಡಿತ

ಯಾವುದೇ ಲಾಭವಿಲ್ಲ.

ಭಾರತದ ಬಳಿ ಪ್ರಸ್ತುತ 60 ದಿನಗಳಿಗೆ ಆಗು ವಷ್ಟು ತೈಲ ದಾಸ್ತಾನು ಮತ್ತು 30 ದಿನಗಳಿಗೆ ಆಗುವಷ್ಟು ಎಲ್‌ಪಿಜಿ ಸಿಲಿಂಡರ್‌ಗಳ ಪೂರೈಕೆ ಇದೆ ಎಂದು ಕೇಂದ್ರ ಸರ್ಕಾರ ತಿಳಿಸಿತ್ತು. ಇನ್ನು ನಯಾರ ಎನರ್ಜಿ ಖಾಸಗಿ ಸಂಸ್ಥೆಯು ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯನ್ನು ಕ್ರಮವಾಗಿ 5 ರೂ. ಮತ್ತು 3 ರೂ.ಗಳಷ್ಟು ಹೆಚ್ಚಿಸಿರುವುದು ಮಾರುಕಟ್ಟೆಯ ಮೇಲೆ ಮತ್ತಷ್ಟು ಪರಿಣಾಮ ಬೀರಿದೆ ಎನ್ನಲಾಗಿದೆ.

### 444 ಎಕರೆ ಅರಣ್ಯ ಭೂಮಿ ಮರುವಶಕ್ಕೆ ಸಚಿವ ಖಂಡ್ರೆ ಆದೇಶ

ತೆರವು ಮಾಡಿಸಲು ಸೂಚಿಸಿದ್ದಾರೆ.

ಈ ಜಮೀನಿಗೂ ವಾಯುಪಡೆಗೂ ಯಾವುದೇ ಸಂಬಂಧ ಇರುವುದಿಲ್ಲ ಎಂದು ಸ್ಪಷ್ಟಪಡಿಸಿರುವ ಈಶ್ವರ್ ಖಂಡ್ರೆ, ಇನ್ನು ಮುಂದೆ ಸದರಿ ಪ್ರದೇಶದಲ್ಲಿ ಅನಿವಾರ್ಯವಾಗಿ ಯಾವುದೇ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವಾಗ ನಿಯಮಾನುಸಾರ ಅರಣ್ಯ ಇಲಾಖೆಯಿಂದ ಅನುಮತಿ ಪಡೆಯುವಂತೆ ಸುತ್ತೋಲೆ ಹೊರಡಿಸಲು ಮತ್ತು ಎಲ್ಲ ಇಲಾಖೆಗಳಿಗೂ ಮಾಹಿತಿ ನೀಡಲು ನಿರ್ದೇಶನ ನೀಡಿದ್ದಾರೆ.

### ಕೆಇಎ ಪರೀಕ್ಷೆ ಮುಂದೂಡಿಕೆ

ಬಿಡುಗಡೆ ಮಾಡಲಾಗುವುದು. ಅಭ್ಯರ್ಥಿಗಳು ಪರಿಷ್ಕೃತ ವೇಳಾಪಟ್ಟಿ ಪ್ರಕಾರ ಪರೀಕ್ಷೆಗೆ ಹಾಜರಾಗಬೇಕು ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

### ಸಮರ್ಥ್ ಗೆಲುವು ಖಚಿತ: ಡಿಕೆಶಿ

ಪೈಲ್ವಾನ್, ಉಸ್ತಾದ್ ಇರಬಹುದು ಎಲ್ಲರೂ ನಮ್ಮವರೇ. ಚುನಾವಣೆ ಸಮಯದಲ್ಲಿ ಒಂದಷ್ಟು ಭಿನ್ನಾಭಿಪ್ರಾಯ ಬಂದೇ ಬರುತ್ತದೆ. ನಾವು ಅದನ್ನು ನಿಭಾಯಿಸುತ್ತೇವೆ ಎಂದು ಹೇಳಿದರು.

### ಮೈಸೂರು ವಿಶ್ವವಿದ್ಯಾಲಯದಲ್ಲಿ ಶೌಚಾಲಯ ಸ್ವಚ್ಛಕ್ಕೂ ಹಣವಿಲ್ಲ


ಎಂಬ ಬಗ್ಗೆ ಹೇಳಿಕೆ ನೀಡಿದ್ದರು. ಈ ಹೇಳಿಕೆಗೆ ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ ಪತ್ರದ ಮೂಲಕ ಪ್ರತಿಕ್ರಿಯಿಸಿದ್ದಾರೆ. ಮಾ.17ರಂದು ರಂಗಪ್ಪ ಸುದ್ದಿಗೋಷ್ಠಿ ನಡೆಸಿ, ಯಾವುದೇ ಕಮಿಟ್ಮೆಂಟ್ ಇಲ್ಲದೇ ವಿಶ್ವವಿದ್ಯಾಲಯ ನಡೆಸುತ್ತಿದ್ದಾರೆ. ಹೀಗೆ ಮುಂದುವರಿದರೆ 5 ವರ್ಷಗಳಲ್ಲಿ ವಿವಿ ಮುಚ್ಚಬೇಕಾಗುತ್ತದೆ ಎಂದು ಬೇಸರ ವ್ಯಕ್ತಪಡಿಸಿದ್ದರು. ಮೈಸೂರು ವಿವಿಯ ಯುವರಾಜ ಕಾಲೇಜು ಹಾಗೂ ಮಹಾರಾಜ ಕಾಲೇಜು ಎರಡು ಕಣ್ಣುಗಳು ಇದ್ದ ಹಾಗೆ. ನಾವು ಇದ್ದ ಸಮಯದಲ್ಲಿ ಕಷ್ಟಪಟ್ಟು ಯುವರಾಜ ಕಾಲೇಜ್ ಅನ್ನು ಅಟೋನಮಸ್ ಮಾಡಿದ್ದೆವು. ಈಗ ಅದನ್ನು ತೆಗೆಯಲು ಹೊರಟಿದ್ದಾರೆ. ಇದು ಸರಿಯಲ್ಲ. ಈ ಬಗ್ಗೆ ರಾಜ್ಯ ಸರ್ಕಾರ ಹಾಗೂ ರಾಜ್ಯಪಾಲರು ಮಧ್ಯಪ್ರವೇಶ ಮಾಡಬೇಕು ಎಂದು ಆಗ್ರಹಿಸಿದ್ದರು.

# ನಿಯಮಾಧಾರಿತ ಸಮಾಜದಿಂದ ಮೌಲ್ಯಾಧಾರಿತ ಸಮಾಜವಾಗಬೇಕು

## ಭಾರತೀಯ ಜನತಾ ಪಕ್ಷದ ಅಖಿಲ ಭಾರತೀಯ ಸಂಘಟನಾ ಕಾರ್ಯದರ್ಶಿ ಸಂತೋಷ್ ಕರೆ

ಮೈಸೂರು: ಒಬ್ಬ ವ್ಯಕ್ತಿ ತನ್ನ ಮೌಲ್ಯಗಳಿಂದ ದೇವರಾಗಬಹುದು ಎನ್ನುವುದನ್ನು ತೋರಿಸಿಕೊಟ್ಟು ಸಕಲ ಕಾಲಕ್ಕೂ ಮಾದರಿಯಾದವನು ಪ್ರಭು ಶ್ರೀ ರಾಮ. ಇಂದು ನಿಯಮಾಧಾರಿತವಾಗಿರುವ ಸಮಾಜದಿಂದ ಮೌಲ್ಯಾಧಾರಿತ ಸಮಾಜದೆಡೆಗೆ ಸಾಗಬೇಕಾದ ಅನಿವಾರ್ಯತೆ ಇದೆ ಎಂದು ಭಾರತೀಯ ಜನತಾ ಪಕ್ಷದ ಅಖಿಲ ಭಾರತೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಹೇಳಿದರು.

ಪ್ರಜ್ಞಾ ಪ್ರವಾಹ ಕರ್ನಾಟಕದ ವತಿಯಿಂದ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಆಯೋಜಿಸಲಾದ 'ಏಕಾತ್ಮ ಮಾನವ ದರ್ಶನ : ಭಾರತದ ವಿಶ್ವದೃಷ್ಟಿ' ವಿಚಾರ ಸಂಕಿರಣದಲ್ಲಿ "ತತ್ವಶಾಸ್ತ್ರದಿಂದ ನೀತಿಗೆ ಸಮಕಾಲೀನ ರಾಜಕೀಯ, ಆರ್ಥಿಕ ಮತ್ತು ನಾಗರಿಕತೆಯ ಸವಾಲುಗಳು: ಭಾರತೀಯ ದೃಷ್ಟಿಕೋನ" ವಿಷಯದ ಕುರಿತು ನಡೆದ ವಿಶೇಷ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದರು. ಭಾರತೀಯ ದೃಷ್ಟಿಕೋನದ ಅನುಷ್ಠಾನಕ್ಕೆ ವ್ಯಕ್ತಿ, ಸಮಾಜ, ಶಿಕ್ಷಣ ಕ್ಷೇತ್ರ, ನೀತಿ ನಿರೂಪಕರು ಮತ್ತು ಅಧಿಕಾರಿ ವರ್ಗ, ಜನಪ್ರತಿನಿಧಿಗಳ ಹಂತಗಳಲ್ಲಿ ಸವಾಲುಗಳು ಎದುರಾಗಬಹುದು. ಇದೆಲ್ಲದಕ್ಕಿಂತಲೂ ಒಂದು ದೊಡ್ಡ ಸವಾಲಾಗಿ ಪಾಶ್ಚಾತ್ಯ ಯೋಚನೆ ಮತ್ತು ಜೀವನಶೈಲಿಯಿಂದ ಪ್ರಭಾವಕ್ಕೆ ಒಳಗಾಗಿರುವ ಜನಮಾನಸ ನಮ್ಮ ಮುಂದಿದೆ. ಸಮಾಜವನ್ನು ನಿರ್ವಸಾಹತೀಕರಣ ಮಾಡಬೇಕು, ಆದರೆ ಅದಕ್ಕಾಗಿ ಪ್ರಯತ್ನಿಸುವವರೇ ವಸಾಹತು ಶಾಹಿ ಮಾನಸಿಕತೆಗೆ ಒಳಗಾಗಿರುವಾಗ ಈ ಪ್ರಯತ್ನ ಸಫಲಗೊಳ್ಳುವುದಾದರೂ ಹೇಗೆ ಎಂದು ಪ್ರಶ್ನಿಸಿದರು.





> ವಿವಿಧ ಕ್ಷೇತ್ರದಲ್ಲಿ ಏಕಾತ್ಮ ಮಾನವ ದರ್ಶನವನ್ನು ಯಾವ ಹಂತದಲ್ಲಿ ಅಳವಡಿಸಿಕೊಳ್ಳಬೇಕು ಎಂಬ ಸ್ಪಷ್ಟತೆ ನಮಗೆ ಇರಬೇಕು. ಯಾವುದೇ ವಿಚಾರ ಸಂಕಿರಣದ ನಂತರ ಅದರಲ್ಲಿ ಚರ್ಚೆಯಾದ ವಿಷಯಗಳ ಆಧಾರಿತವಾಗಿ ಮುಂದಿನ ಕಾರ್ಯ ಏನು ಮಾಡಬೇಕು, ಹೇಗೆ ಮಾಡಬೇಕು, ಯಾರು ಮಾಡಬೇಕು, ಇದರಿಂದ ಏನು ಪ್ರಯೋಜನ, ಅದನ್ನು ಹೇಗೆ ಮಾಪನಮಾಡುವ ಬಗೆ ಮತ್ತು ಅದರಿಂದ ಯಾರಿಗೆ ಪ್ರಯೋಜನವಾಗುತ್ತದೆ ಎನ್ನುವುದು ತಿಳಿದಿರಬೇಕು.
>
> **ಪ್ರೊ.ಕೆ.ವಿ.ರಾಜು,** ಪ್ರಧಾನಮಂತ್ರಿಗಳ ಆರ್ಥಿಕ ಸಲಹಾ ಮಂಡಳಿಯ ಸದಸ್ಯ

### ಹೆಚ್ಚು ಮೌಲ್ಯಗಳು ಮುನ್ನೆಲೆಗೆ ಬರಬೇಕು

ಸಿದ್ಧಾಂತ ಹೀನ ಮತದಾರ, ಸಿದ್ಧಾಂತ ಹೀನ ರಾಜ್ಯವ್ಯವಸ್ಥೆಯನ್ನು ನಿರ್ಮಿಸುತ್ತಾನೆ. ಇದರಿಂದಾಗಿ ಭವಿಷ್ಯದಲ್ಲಿ ಅನೇಕ ಸಮಸ್ಯೆಗಳು ಎದುರಾಗುತ್ತದೆ. ಅನ್ಯ ರಾಜ್ಯಗಳಲ್ಲಿ ರಾಜ ಮತ್ತು ಋಷಿಯ ವ್ಯವಸ್ಥೆ ಇದೆ. ಭಾರತದಲ್ಲಿ ಮಾತ್ರ ಅವುಗಳ ಸಮನ್ವಯಗೊಂಡ ರಾಜರ್ಷಿ ಎಂಬ ಕಲ್ಪನೆಯೂ ಇದೆ. ಎಲ್ಲಾ ರಾಜಕೀಯ ವ್ಯವಸ್ಥೆಯಲ್ಲಿ ಉತ್ತಮ ಜನಪ್ರತಿನಿಧಿಗಳಿದ್ದಾರೆ. ಆದರೆ ಪೀಳಿಗೆಗೊಬ್ಬ ಉತ್ತಮ ಜನಪ್ರತಿನಿಧಿಯ ನಿರ್ಮಾಣವಾಗುತ್ತಿದೆ. ಅಂತಹವರ ಸಂಖ್ಯೆ ಹೆಚ್ಚಾಗಬೇಕು. ರಾಜ್ಯದ ನಿಯಂತ್ರಣ ಕಡಿಮೆಯಾಗಿ ಸಮಾಜಕೇಂದ್ರಿತ ನಿರ್ವಹಣೆ ಜಾಸ್ತಿಯಾಗಬೇಕು. ಹೆಚ್ಚು ಮೌಲ್ಯಗಳು ಮುನ್ನೆಲೆಗೆ ಬರಬೇಕು. ಅದಕ್ಕಾಗಿ ಮತದಾರ ಜಾಗೃತನಾಗಬೇಕು ಎಂದು ಅಭಿಪ್ರಾಯಪಟ್ಟರು.

ನವದೆಹಲಿಯ ಜವಾಹರಲಾಲ್ ನೆಹರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶಾಂತಿಶ್ರೀ ಧುಲಿಪುಡಿ ಪಂಡಿತ್ ಮಾತನಾಡಿದರು. ಪ್ರಜ್ಞಾ ಪ್ರವಾಹ ಕರ್ನಾಟಕದ ವತಿಯಿಂದ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಆಯೋಜಿಸಲಾದ 'ಏಕಾತ್ಮ ಮಾನವ ದರ್ಶನ : ಭಾರತದ ವಿಶ್ವದೃಷ್ಟಿ' ವಿಚಾರ ಸಂಕಿರಣದ ಸಮಾರೋಪ ಸಮಾರಂಭದಲ್ಲಿ ಪ್ರಜ್ಞಾ ಪ್ರವಾಹದ ಅಖಿಲ ಭಾರತೀಯ ಟೋಳಿ ಸದಸ್ಯ ರಘುನಂದನ ಮಾತನಾಡಿದರು. ವೇದಿಕೆಯಲ್ಲಿ ಪ್ರಜ್ಞಾಪ್ರವಾಹದ ಕರ್ನಾಟಕ ಉತ್ತರ ಪ್ರಾಂತದ ಸಂಯೋಜಕ ಡಾ. ನಿರಂಜನ ಪೂಜಾರ್ ಉಪಸ್ಥಿತರಿದ್ದರು.

## ಮೊದಲ ಪುಟದಿಂದ

### ಶಾಸಕರು ಕ್ರಿಕೆಟ್ ಟಿಕೆಟ್ ಕೇಳುವುದು ತಪ್ಪಲ್ಲ: ಪರಂ

ಈಗ ಸ್ಪೀಕರ್ ಕಚೇರಿ ಮತ್ತು ಕೆಎಸ್‌ಸಿಎ ಅಥವಾ ಆರ್‌ಸಿಬಿ ಸಂಸ್ಥೆಗೆ ಬಿಟ್ಟ ವಿಷಯ. ಸ್ಪೀಕರ್ ಯಾವ ಕ್ರಮಗಳನ್ನು ತೆಗೆದುಕೊಳ್ಳಲಿದ್ದಾರೆ ಎಂಬುದು ಅವರಿಗೆ ಬಿಟ್ಟ ವಿಚಾರ. ಏಕೆಂದರೆ ಶಾಸಕರು ಸ್ಪೀಕರ್ ಅಡಿಯಲ್ಲಿ ಬರುತ್ತಾರೆ. ಅವರು ನಿರ್ಧಾರ ತೆಗೆದುಕೊಳ್ಳಬೇಕು ಎಂದು ಹೇಳಿದರು.

### ಕ್ರಿಕೆಟ್: ಶಾಸಕರಿಗೆ ತಲಾ 2 ಟಿಕೆಟ್

ನಾನು ಕೆಎಸ್‌ಸಿಎ ಸದಸ್ಯನಾಗಿರಬಹುದು. ನಮ್ಮ ಶಾಸಕರಿಗೆ ಪಂದ್ಯ ವೀಕ್ಷಣೆಗೆ ಅವಕಾಶ ಕಲ್ಪಿಸುವ ಬಗ್ಗೆ ಕೆಎಸ್‌ಸಿಎ ಜೊತೆ ಚರ್ಚೆ ನಡೆಸುತ್ತೇನೆ ಎಂದರು. ತೇಜಸ್ವಿಸೂರ್ಯ ಅವರು ಇದು ಅವಶ್ಯಕತೆ ಇರಲಿಲ್ಲ ಎಂದು ಹೇಳಿರುವ ಬಗ್ಗೆ ಕೇಳಿದಾಗ, ತೇಜಸ್ವಿ ಸೂರ್ಯ ಅವರ ಪಕ್ಷದ ನಾಯಕರಿಗೆ ಜ್ಞಾನ ನೀಡಲಿ. ನಮಗಲ್ಲ ಎಂದು ತಿರುಗೇಟು ನೀಡಿದರು.

# ಶ್ರೀರಾಮನವಮಿ: ಮಜ್ಜಿಗೆ ಪಾಲಕ ವಿತರಣಾ ಕಾರ್ಯ

ಮೈಸೂರು: ದೇಶಾದ್ಯಂತ ಇಂದು ಶ್ರೀ ರಾಮ ನವಮಿಯ ಸಂಭ್ರಮ ಮನೆ ಮಾಡಿದ್ದು, ಸಾಂಸ್ಕೃತಿಕ ನಗರಿಯಲ್ಲೂ ಸಹ ಸಂಭ್ರಮದಿಂದ ಶ್ರೀರಾಮ ನವಮಿಯನ್ನು ಆಚರಿಸಲಾಗುತ್ತಿದ್ದು, ರಾಮ ಮಂದಿರಗಳಿಗೆ ವಿಶೇಷ ಅಲಂಕಾರ, ಪೂಜೆ ಹಾಗೂ ಭಕ್ತರಿಗೆ ಪಾನಕ ಹಾಗೂ ಕೊಸಂಬರಿ ವಿತರಿಸಿ ಸಂಭ್ರಮಿಸಿದರು.

ಸಾಂಸ್ಕೃತಿಕ ನಗರಿಯ ವಿವಿಧ ಬಡಾವಣೆಗಳಲ್ಲಿ ಶ್ರೀರಾಮ ಮಂದಿರಗಳಿದ್ದು, ಬೆಳಗಿನಿಂದಲೇ ಮಂದಿರಗಳಿಗೆ ವಿಶೇಷ ಅಲಂಕಾರ ಮಾಡಲಾಗಿದ್ದು, ಪೂಜೆ ನೆರವೇರಿಸಿ ನಂತರ ಭಕ್ತಾದಿಗಳಿಗೆ ಪಾನಕ ಹಾಗೂ ಮಜ್ಜಿಗೆಯನ್ನು ವಿತರಿಸಲಾಯಿತು. ಮೈಸೂರಿನ ಶಿವರಾಂ ಪೇಟೆಯಲ್ಲಿ ಇತಿಹಾಸ ಪ್ರಸಿದ್ಧ ಶ್ರೀರಾಮ ಮಂದಿರದಲ್ಲಿ ಕಳೆದ 100ಕ್ಕೂ ಹೆಚ್ಚು ವರ್ಷಗಳಿಂದ ಪೂಜೆ ಸಲ್ಲಿಸಿತ್ತಿರುವುದು ವಿಶೇಷ. ಚಾರಿಟೇಬಲ್ ಟ್ರಸ್ಟ್ ವತಿಯಿಂದ ಶ್ರೀ ರಾಮ ನವಮಿ ಅಂಗವಾಗಿ ಕಳೆದ ನೂರಕ್ಕೂ ಹೆಚ್ಚು ವರ್ಷಗಳಿಂದ ಇದೇ ಜಾಗದಲ್ಲಿ ರಾಮ ನವಮಿಯನ್ನು ಆಚರಿಸುತ್ತ ಬಂದಿದ್ದು, ಅದನ್ನು ನಾವು ಮುಂದುವರೆಸಿಕೊಂಡು ಬಂದಿದ್ದೇವೆ. ಇಂದಿನಿಂದ



ಪ್ರಾರಂಭಿಸಿ ಸುಮಾರು 10 ದಿನಗಳ ಕಾಲ ರಾಮೋತ್ಸವವನ್ನು ಆಚರಿಸಲಾಗುತ್ತದೆ. ಶ್ರೀ ರಾಮನ ಪಟ್ಟಾಭಿಷೇಕದಲ್ಲಿ 1000 ಕ್ಕೂ ಹೆಚ್ಚು ಜನರಿಗೆ ಅನ್ನ ಸಂತರ್ಪಣೆ ಮಾಡಲಾಗುತ್ತದೆಂದರು. ಈ ಪೂಜಾ ಕಾರ್ಯಕ್ರಮದ ಜೊತೆಗೆ ಪಕ್ಕದ ಭವನದಲ್ಲಿ 10 ದಿನಗಳ ಕಾಲ ಸಂಗೀತೋತ್ಸವ ನಡೆಸಲಾಗುತ್ತದೆ. ದೇಶ ವಿದೇಶಗಳಿಂದ ಈ ಕಾರ್ಯಕ್ರಮಕ್ಕೆ ಆಗಮಿಸುತ್ತಾರೆ. ನಂತರ ಹನುಮಂತೋತ್ಸವ, ಶಯನೋತ್ಸವ ನಡೆಯಲಿದ್ದು, ಕೊನೆಯಲ್ಲಿ ಶಂಕರ ಜಯಂತಿ ಉತ್ಸವದೊಂದಿಗೆ ಈ ವರ್ಷದ ರಾಮೋತ್ಸವವನ್ನು ಸಮಾಪ್ತಿ ಮಾಡಲಾಗುತ್ತದೆ. ಇಂದು ಬೆಳಗ್ಗಿನಿಂದಲೇ ದೇವರಿಗೆ ಅಭಿಷೇಕ, ಪೂಜೆ ನೆರವೇರಿಸಲಾಗುತ್ತಿದ್ದು, ರುದ್ರಾಭಿಷೇಕ, ಅಷ್ಟೋತ್ತರ ಕೊನೆಯದಾಗಿ ದೇವರಿಗೆ ಮಂಗಳಾರತಿ ಮಾಡಿ ಸಾರ್ವಜನಿಕರಿಗೆ ಪಾನಕ, ಮಜ್ಜಿಗೆ ವಿತರಿಸಲಾಗುತ್ತಿದೆ ಎಂದು ದೇವಸ್ಥಾನದ ಪ್ರಮುಖ ಡಾ.ಶ್ರೀರಾಮ್ ತಿಳಿಸಿದರು.

ಉದಯಗಿರಿಯ ಶ್ರೀರಾಮಮಂದಿರದಲ್ಲಿ 32ನೇ ವರ್ಷದ ರಾಮನವಮಿ ಉತ್ಸವ ನಡೆಯಿತು. ಇದರ ಅಂಗವಾಗಿ ಮುಂಜಾನೆಯಿಂದ ಪುಣ್ಯಾಹ, ನಾಂದಿ ಕಲಶ ಪ್ರತಿಷ್ಠಾಪನೆ ಮಹಾಸಂಕಲ್ಪ, ನವಗ್ರಹ ಹೋಮ ಮತ್ತು ಶ್ರೀರಾಮತಾರಕ ಹೋಮ ನಡೆಯಿತು. ಚಾಮರಾಜ ಮೊಹಲ್ಲಾದ ಜಾನಕಿ ರಾಮಮಂದಿರದಲ್ಲಿ ಜಾನಕಿ ರಾಮ ಸೇವಾ ಸಮಿತಿ ವತಿಯಿಂದ ರಾಮ ನವಮಿ ಪ್ರಯುಕ್ತ ವಿಶೇಷಪೂಜೆ, ಪ್ರಸಾದ ವಿನಿಯೋಗ ಮುಂಜಾನೆ ನಡೆಯಿತು. ಸಂಜೆ ಕಲಾವಿದರಿಂದ ದೇವರನಾಮ ಪ್ರಸ್ತುತಗೊಂಡಿತು. ಶಿವಛತ್ರಪತಿ ಅಂಬಾಭವಾನಿ ಟ್ರಸ್ಟ್ ವತಿಯಿಂದ ರಾಮನವಮಿ ಅಂಗವಾಗಿ ಮುಂಜಾನೆ ವೀರಾಂಜನೇಯ ಸ್ವಾಮಿಗೆ ಪಂಚಾಮೃತ ಅಭಿಷೇಕ, ವಿಶೇಷ ಹೂವಿನ ಅಲಂಕಾರ, ತಾರಕ ಹೋಮ, ಭಜನೆ, ಮಹಾಮಂಗಳಾರತಿ ಮತ್ತು ಪ್ರಸಾದ ವಿನಿಯೋಗ ನಡೆಯಿತು. ರಾಮಕೃಷ್ಣನಗರದಲ್ಲಿ ರಾಮ ನವಮಿ ಪ್ರಯುಕ್ತ ರಾಮ ಪಟ್ಟಾಭಿಷೇಕ ನಡೆಯಿತು.

### ಏಪ್ರಿಲ್ 1 ರಿಂದ 15ರವರೆಗೆ ಸ್ವಯಂ ಗಣತಿಗೆ ಅವಕಾಶ

# ಜನಗಣತಿಯಲ್ಲಿ ಭಾಗವಹಿಸುವಂತೆ ಪೌರಾಯುಕ್ತ ಮನವಿ

ರಾಮನಗರ: ಇದೇ ಏಪ್ರಿಲ್‌ನಿಂದ ಭಾರತ ಸರ್ಕಾರ ಜನಗಣತಿ ಕಾರ್ಯ ಆರಂಭಿಸಲಿದೆ. ನಗರದ ಎಲ್ಲ ಕುಟುಂಬಗಳು ಭಾಗವಹಿಸಿ ನಿಖರವಾದ ಮಾಹಿತಿ ನೀಡುವಂತೆ ನಗರಸಭೆ ಆಯುಕ್ತ ಡಾ.ಜಯಣ್ಣ ನಗರದ ನಾಗರೀಕರಲ್ಲಿ ಮನವಿ ಮಾಡಿದರು.

ನಗರಸಭೆಯ ತಮ್ಮ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜನಗಣತಿಯ ಮೊದಲ ಹಂತವಾದ ಮನೆಗಳ ಪಟ್ಟಿ ಮತ್ತು ವಸತಿ ಗಣತಿ ಪ್ರಕ್ರಿಯೆಯು ಏಪ್ರಿಲ್ ನಿಂದ ಸೆಪ್ಟೆಂಬರ್ ವರೆಗೆ ನಡೆಯಲಿದೆ. ಎರಡನೇ ಹಂತದಲ್ಲಿ 2027ರ ಮಾರ್ಚ್ ತಿಂಗಳಲ್ಲಿ ಜನಸಂಖ್ಯಾ ಗಣತಿ ನಡೆಯಲಿದೆ ಎಂದರು.

ಜನಗಣತಿ ಪ್ರಜಾಪ್ರಭುತ್ವ ವ್ಯವಸ್ಥೆಯ ಅಡಿಪಾಯ. ಇದರಿಂದ ಜನರ ಜೀವನ ಮಟ್ಟ, ಶೈಕ್ಷಣಿಕ ಮಟ್ಟ, ಆರ್ಥಿಕ ಹಾಗೂ ಸಾಮಾಜಿಕ ವ್ಯವಸ್ಥೆಯನ್ನು ತಿಳಿಯಲು ಸಹಕಾರಿಯಾಗಲಿದೆ. ಆದ್ದರಿಂದ ಪ್ರತಿಯೊಬ್ಬರು ಸಮರ್ಪಕ ಮಾಹಿತಿಯನ್ನು ಸರ್ಕಾರಕ್ಕೆ ನೀಡುವುದು ಎಲ್ಲರ ಕರ್ತವ್ಯವಾಗಿದೆ. ಈ ಮಹತ್ವ ಅವಕಾಶ ಪೂರ್ಣವಾದ ಕಾರ್ಯದಲ್ಲಿ ಎಲ್ಲರೂ ಪಾಲ್ಗೊಂಡಾಗ ಮಾತ್ರ ಜನಗಣತಿ ಸಂಪೂರ್ಣವಾಗಲು ಸಾಧ್ಯ ಎಂದು ಹೇಳಿದರು.

ಮೊದಲ ಬಾರಿಗೆ ಸಂಪೂರ್ಣ ಡಿಜಿಟಲ್ ರೂಪದಲ್ಲಿ ಜನಗಣತಿ ನಡೆಯುತ್ತಿದೆ. ಈ ಕಾರ್ಯವನ್ನು ಸಮರ್ಪಕವಾಗಿ ನಡೆಸಲು, ಮೊದಲೇ ಎಲ್ಲ ರೀತಿಯ ಸಿದ್ಧತೆ ಕೈಗೊಳ್ಳಲು ಜಿಲ್ಲಾಮಟ್ಟದಲ್ಲಿ ಅಧಿಕಾರಿಗಳಿಗೆ ತರಬೇತಿ ನೀಡಲಾಗಿದೆ. ಜನಗಣತಿಗೆ ನೆರವಾಗುವಂತೆ 120 ರಿಂದ 150 ಮನೆಗಳಿಗೆ ಒಬ್ಬರು ಗಣತಿದಾರರನ್ನು ನೇಮಕ ಮಾಡಲಾಗುತ್ತದೆ ಎಂದು ತಿಳಿಸಿದರು.

**ವಿಶೇಷ ವೆಬ್ ಪೋರ್ಟಲ್ :**

ಜನಗಣತಿ ಮಾಡುವ ಸಮಯದಲ್ಲಿ ಯಾವುದೇ ಪತ್ರ ಬರಹ ಇರುವುದಿಲ್ಲ. ಗಣತಿ ಪ್ರಕ್ರಿಯೆಯನ್ನು ಆರಂಭದಿಂದ ಮುಕ್ತಾಯದವರೆಗೆ ನಿರ್ವಹಿಸಲು 'ಜನಗಣತಿ ನಿರ್ವಹಣೆ ಮತ್ತು ಮಾನಿಟರಿಂಗ್ ಸಿಸ್ಟಂ' (ಸಿಎಂಎಂಎಸ್) ಎಂಬ ವಿಶೇ? ವೆಬ್ ಪೋರ್ಟಲ್ ಅಭಿವೃದ್ಧಿಪಡಿಸಲಾಗಿದೆ ಎಂದು ತಿಳಿಸಿದರು.

ಮನೆ ಗಣತಿಗೆ ಅಗತ್ಯವಿರುವ ಸಿಬ್ಬಂದಿಯನ್ನು ನೇಮಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ತರಬೇತಿಯಲ್ಲಿ ತಿಳಿಸಲಾಗಿದೆ. ಮೊದಲ ಹಂತದಲ್ಲಿ ಮನೆ ಗಣತಿ ಮಾತ್ರ ನಡೆಯಲಿದ್ದು, ಕ್ಷೇತ್ರ ಮಟ್ಟದ



ಗಣತಿದಾರರು ಎಚ್‌ಎಲ್‌ಬಿ (ಹೌಸ್ ಲಿಸ್ಟಿಂಗ್ ಬ್ಲಾಕ್) ಕ್ರಿಯೇಟರ್ ಆ?ಯಪ್ ಬಳಸಿ ಪ್ರತಿ ಬ್ಲಾಕ್‌ನ ಮನೆಗಳ ಲೊಕೇಶನ್ ಮತ್ತು ವ್ಯಾಪ್ತಿಯನ್ನು ಜಿಯೋ ಟ್ಯಾಗಿಂಗ್ ಮೂಲಕ ಗುರುತಿಸುತ್ತಾರೆ. ಮನೆಗಳಲ್ಲಿ ಎ?ು ಜನ ಇದ್ದಾರೆ. ಆ ಪ್ರದೇಶದಲ್ಲಿ ಏನೆಲ್ಲ ನಾಗರಿಕ ಸೌಲಭ್ಯಗಳಿವೆ ಎಂದು ಗಣತಿ ಮಾಡಬೇಕು. ಮುಂದಿನ ಗಣತಿಗೆ ಪ್ರಾಥಮಿಕ ಕೆಲಸ ಇದು. ಎರಡನೇ ಹಂತದಲ್ಲಿ ಜಾತಿ ಗಣತಿಯನ್ನೂ ಸೇರಿಸಲಾಗಿದೆ ಎಂದು ಜಯಣ್ಣ ತಿಳಿಸಿದರು.

### ಏ.1ರಿಂದ ಸ್ವಯಂ ಗಣತಿಗೆ ಅವಕಾಶ

**ಗಣತಿ ಆರಂಭವಾಗುವ 15 ದಿನಗಳ ಮೊದಲೇ ಅಂದರೆ ಏಪ್ರಿಲ್ 1 ರಿಂದ 15ರವರೆಗೆ ಜನಗಣತಿ ಆ?ಯಪ್ ಅಥವಾ ಪೋರ್ಟಲ್ ಮೂಲಕ ಸ್ವಯಂ ಮಾಹಿತಿ ದಾಖಲಿಸಿಕೊಳ್ಳಬಹುದು. ಗಣತಿದಾರರ ಸ್ಮಾರ್ಟ್ ಫೋನ್ ಮೀಸಲಾದ ಮೊಬೈಲ್ ಆಪ್ ಮೂಲಕ ಆನ್ ಲೈನ್‌ನಲ್ಲಿ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಆಫ್‌ಲೈನ್‌ನಲ್ಲಿಯೂ ಈ ಆ?ಯಪ್ ಕೆಲಸ ಮಾಡಲಿದ್ದು, ನೆಟ್‌ವರ್ಕ್ ವ್ಯಾಪ್ತಿಗೆ ಬಂದಾಗ ಸಂಗ್ರಹಿಸಿದ ಮಾಹಿತಿಗಳು ಸರ್ವರ್‌ಗೆ ಸಂಯೋಜನೆ ಆಗಲಿವೆ. ತಮ್ಮ ಮೊಬೈಲ್‌ನಲ್ಲಿಯೇ ಆಪ್ ಅನ್ನು ಡೌನ್‌ಲೋಡ್ ಮಾಡಿಕೊಂಡು, ಅದರಲ್ಲಿ ಸರಳ ವಿಧಾನದಲ್ಲಿ ಬರುವ 32 ವೈಯುಕ್ತಿಕ ಮಾಹಿತಿಗಳನ್ನು ದಾಖಲಿಸಬೇಕಿದೆ. ಸಂಪೂರ್ಣ ಮಾಹಿತಿಗಳನ್ನು ದಾಖಲಿಸಿ ಸ್ವಯಂ ಗಣತಿ ಪೂರ್ಣಗೊಳಿಸಿದವರು , ತಮ್ಮ ಮೊಬೈಲ್‌ನಲ್ಲಿ ಬಂದ (ಕೋಡ್) ಸಂಕೇತವನ್ನು ಗಣತಿದಾರರು ಮನೆಗೆ ಬಂದಾಗ ನೀಡಬೇಕು. ಅದನ್ನು ಅನುಮೋದಿಸಿದ ನಂತರವ?ೆ ಸ್ವಯಂ ಗಣತಿ ಪೂರ್ಣಗೊಳ್ಳಲಿದೆ ಎಂದು ಹೇಳಿದರು.**

ರಾಮನಗರದಲ್ಲಿ 1.50 ಲಕ್ಷ ಜನಸಂಖ್ಯೆಯಿದ್ದು, ಜನಗಣತಿಯಿಂದ ವಂಚಿತರಾಗದಂತೆ ಕ್ರಮ ವಹಿಸಲಾಗಿದೆ. ಜನಗಣತಿಯಲ್ಲಿ ಎಲ್ಲರ ಮಾಹಿತಿ ಕಲೆ ಹಾಕುವ ಉದ್ದೇಶದಿಂದ ಪೂರಕ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿದೆ. ಸಾರ್ವಜನಿಕರಿಗೆ ಯಾವುದೇ ಸಮಸ್ಯೆಗಳು ಎದುರಾದರೂ ನೇರವಾಗಿ ನಮ್ಮನ್ನು ಸಂಪರ್ಕಿಸಬಹುದಾಗಿದೆ. ನಗರಸಭೆ ವ್ಯಾಪ್ತಿಯ 31 ವಾರ್ಡುಗಳಲ್ಲಿ ಜನಗಣತಿ ಮಾಡಲು ಒಟ್ಟು 170 ಗಣತಿದಾರರನ್ನು ನೇಮಕ ಮಾಡಿಕೊಂಡಿದ್ದು, 6 ಗಣತಿದಾರರಿಗೆ ಒಬ್ಬರು ಮೇಲ್ವಿಚಾರಕರು ಕರ್ತವ್ಯ ನಿರ್ವಹಿಸಲಿದ್ದಾರೆ. ಇವರ ಮೇಲೆ ಒಬ್ಬರು ಚಾರ್ಜ್ ಆಫೀಸರ್ ಆಗಿ ಕರ್ತವ್ಯ ನಿರ್ವಹಿಸಲಿದ್ದು, ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಸಂಪೂರ್ಣವಾಗಿ ಜನಗಣತಿ ಕಾರ್ಯ ನಡೆಯಲಿದೆ ಎಂದು ಅವರು ತಿಳಿಸಿದರು.

# ಹೆಣ್ಣಿಗೆ ಪ್ರಾಶಸ್ತ್ಯ ನೀಡಲಿ: ಡಾ.ಶ್ವೇತಾ ಮಡಪ್ಪಾಡಿ

ಮೈಸೂರು: ಹೆಣ್ಣಿನ ಸ್ಥಾನಮಾನಕ್ಕೆ ತಕ್ಕಂತೆ ಸಮಾಜದಲ್ಲಿ ಪ್ರಾಶಸ್ತ್ಯ ನೀಡಬೇಕು ಎಂದು ಮೈಸೂರಿನ ಧ್ವನಿ ಫೌಂಡೇಷನ್ ಸಂಸ್ಥಾಪಕಿ ಮತ್ತು ಉದ್ಯಮಿ ಡಾ.ಶ್ವೇತಾ ಮಡಪ್ಪಾಡಿ ಅಭಿಪ್ರಾಯಪಟ್ಟರು.

ನಗರದ ಸರಸ್ವತಿಪುರಂ ಜೆಎಸ್ಎಸ್ ಮಹಿಳಾ ಕಾಲೇಜಿನಲ್ಲಿ ಯೂತ್ ರೆಡ್ಕ್ರಾಸ್ ಹಾಗೂ ಮಹಿಳಾ ಸಬಲೀಕರಣ ಕೋಶದ ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮವನ್ನು ಉದ್ಘಾಟಿಸಿದ ಡಾ. ಶ್ವೇತಾ ಮಡಪ್ಪಾಡಿ ಅವರು ಮಾತನಾಡುತ್ತಾ, ಹೆಣ್ಣಿನ ಸ್ಥಾನ ಮಾನಕ್ಕೆ ತಕ್ಕಂತೆ ಸಮಾಜದಲ್ಲಿ ಪ್ರಾಶಸ್ತ್ಯ ನೀಡಬೇಕು ಎಂದರು. ಹೆಣ್ಣಿಗೆ ಉತ್ತಮ ಶಿಕ್ಷಣದ ಜೊತೆಗೆ ಆತ್ಮಸ್ಥೈರ್ಯ ಬಹು ಮುಖ್ಯ ಎಂದು ತಿಳಿಸಿದರು. ಪ್ರತಿಯೊಬ್ಬ ಹೆಣ್ಣು ಮಕ್ಕಳು ಸಾಧಕಿಯರು ಎಂದರು. ತಮ್ಮ ಉತ್ತಮ ಸಾಧನೆಗೆ ವಿದ್ಯಾಭ್ಯಾಸದ ಹಂತದಲ್ಲೆ ಬುನಾದಿಯನ್ನು ಹಾಕಿಕೊಳ್ಳಬೇಕು ಎಂದು ತಿಳಿಸಿಕೊಟ್ಟರು.

ಕಾಲೇಜಿನ ಹಿರಿಯ ವಿದ್ಯಾರ್ಥಿನಿ, ಲೆಕ್ಕ ಪರಿಶೋಧಕರಾದ ಜಿ ಎ ಅಕ್ಷರಿ ಅವರು ಮಾತನಾಡುತ್ತಾ, ಈ ಕಾಲೇಜು ನಮ್ಮ ಬದುಕಿನಲ್ಲಿ ಶಿಸ್ತು ಮತ್ತು ಜವಾಬ್ದಾರಿಯನ್ನು ಕಲಿಸಿಕೊಟ್ಟಿದೆ ಎಂದು ತಿಳಿಸಿದರು. ಜೀವನದಲ್ಲಿ ಎದುರಾಗುವ ಸವಾಲುಗಳನ್ನು ಧೈರ್ಯದಿಂದ ಎದುರಿಸಬೇಕಿದೆ. ಮಹಿಳೆಯರು ಕನಸು ಕಾಣುವುದನ್ನು ನಿಲ್ಲಿಸಬೇಡಿ ಎಂದು ಸಲಹೆ ನೀಡಿದರು. ಮಹಿಳಾ ದಿನಾಚರಣೆಯ ಪ್ರಯುಕ್ತ ಕ್ರೀಡಾ ಸ್ಪರ್ಧೆಗಳಲ್ಲಿ ವಿಜೇತರಾದ ಮಹಿಳಾ ಅಧ್ಯಾಪಕರಿಗೆ ಬಹುಮಾನ ವಿತರಿಸಿದರು. ವೇದಿಕೆಯಲ್ಲಿ ಪ್ರಾಂಶುಪಾಲ ಡಾ. ರೇಚಣ್ಣ ಅವರು, ಯೂತ್ ರೆಡ್ಕ್ರಾಸ್ ಸಂಚಾಲಕಿ ಪಿ.ವಸುಮತಿ ಮತ್ತು ಮಹಿಳಾ ಸಬಲೀಕರಣ ಕೋಶದ ಸಂಚಾಲಕಿ ಎನ್.ನಾಗಲಾಂಬಿಕೆ ಉಪಸ್ಥಿತರಿದ್ದರು.



## ಮಾತೃ ಹೃದಯದಿಂದ ಕಾಲೇಜು ನಿರ್ಮಾಣ

**ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ್ದ ಜೆಎಸ್ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕರಾದ ಪ್ರೊ. ಮೊರಬದ ಮಲ್ಲಿಕಾರ್ಜುನ ಮಾತನಾಡಿ, ಪರಮಪೂಜ್ಯರು ಮಾತೃ ಹೃದಯದಿಂದ ಕಾಲೇಜು ನಿರ್ಮಿಸಿದ್ದಾರೆ ಎಂದು ಸ್ಮರಿಸಿದರು. ಹೊಸ ಸೃಷ್ಟಿ ಮತ್ತು ಆರೋಗ್ಯಕರ ಚೈತನ್ಯವನ್ನು ನಿರ್ಮಾಣ ಮಾಡುವ ಶಕ್ತಿ ಹೆಣ್ಣಿಗಿದೆ ಎಂದು ತಿಳಿಸಿದರು. ಪುರುಷರು ಮೃದು ಸ್ವಭಾವವನ್ನು ಹೊಂದಿ ಮಹಿಳೆಯರ ಏಳಿಗೆಗೆ ಸಹಕರಿಸಬೇಕು ಎಂದು ಅಭಿಪ್ರಾಯಪಟ್ಟರು.**

## ಉತ್ತಮ ದಾರಿಯಲ್ಲಿ ಸಾಗಿ ಗುರಿ ಸಾಧಿಸಿ

**ಮುಖ್ಯ ಅತಿಥಿಗಳಾಗಿ ಆಗಮಿಸಿದ ಮೈಸೂರಿನ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ನಿರ್ವಹಣಾ ಅಧ್ಯಯನ ವಿಭಾಗದ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಕಾರ್ಯಕ್ರಮ ಸಂಯೋಜಕರಾದ ಡಾ. ಹೇಮ ಪಾಟೀಲ್ ಅವರು ಮಾತನಾಡುತ್ತಾ, ಉತ್ತಮ ದಾರಿಯಲ್ಲಿ ಸಾಗಿ ಗುರಿ ಸಾಧಿಸಿ ಎಂದರು. ಕುಟುಂಬದಲ್ಲಿ ಶ್ರೇಷ್ಠ ಕನಿಷ್ಠ ಎಂಬುದಿಲ್ಲ, ಪರಸ್ಪರ ಸೌಹಾರ್ದಯುತವಾಗಿ ಬದುಕಬೇಕಿದೆ ಎಂದು ತಿಳಿಸಿಕೊಟ್ಟರು. ಹೆಣ್ಣು ಮಕ್ಕಳು ಸ್ವತಂತ್ರ ಆಲೋಚನೆಯಿಂದ ಸಾಗಬೇಕಿದೆ. ತಮ್ಮ ಸುತ್ತಲಿನ ಸಂಕೋಲೆಗಳನ್ನು ದಾಟಬೇಕು ಎಂದು ತಿಳಿಸಿದರು.**

# ನಂದಿನಿ ಕ್ಷೀರ ಕೇಂದ್ರ ಉದ್ಘಾಟನೆ

ಮೈಸೂರು: ಜೆ ಎಲ್ ಬಿ ರಸ್ತೆಯ ತುಳಸಿದಾಸ್ ಮೋಹನ್ ದಾಸ್ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಬಳಿ ಮೈಮುಲ್ ವತಿ ಯಿಂದ ಈ ದಿನ ನಂದಿನಿ ಕ್ಷೀರ ಕೇಂದ್ರವನ್ನು ಮೈಮುಲ್ ಅಧ್ಯಕ್ಷ ರಾದ ಕೆ. ಈರೇಗೌಡರವರು ಉದ್ಘಾಟಿಸಿದರು

ಈ ಸಂದರ್ಭದಲ್ಲಿ ಮೈಮುಲ್ ಮಾಜಿ ಅಧ್ಯಕ್ಷ ಮತ್ತು ಹಾಲಿ ನಿರ್ದೇಶಕರಾದ ಎ.ಟಿ.ಸೋಮಶೇಖರ, ಕೆ.ಜಿ.ಮಹೇಶ್, ಕೆ. ಉಮಾಶಂಕರ್, ಸಿ.ಓಂ.ಪ್ರಕಾಶ್, ಆರ್.ಚೆಲುವರಾಜು, ಹಾಗೂ ನಿರ್ದೇಶಕರುಗಳಾದ , ಲೀಲಾ ಬಿ.ಕೆ.ನಾಗರಾಜು, ನೀಲಾಂಬಿಕೆ ಮಹೇಶ್ ಕುರಹಟ್ಟಿ, ಶಿವಗಾಮಿ ಷಣ್ಮುಗಂ, ಬಿ.ಎನ್.ಸದಾನಂದ, ಬಿ.ಗುರುಸ್ವಾಮಿ ಮತ್ತು ಮಾರುಕಟ್ಟೆ ವ್ಯವಸ್ಥಾಪಕ ಎಚ್.ಕೆ.ಜಯಶಂಕರ್ ಇನ್ನಿತರರು ಹಾಜರಿದ್ದರು.




# ಕೋಟೆ ಜೆಡಿಎಸ್ ಸಂಬಂಧ ಅವಿನಾಭಾವ

## ನಿಖಿಲ್ ಕುಮಾರಸ್ವಾಮಿ ಹೇಳಿಕೆ | ಜನರೊಂದಿಗೆ ಜನತಾದಳ, ಸದಸ್ಯತ್ವ ನೋಂದಣಿ ಕಾರ್ಯಕ್ರಮ

ಎಚ್.ಡಿ.ಕೋಟೆ: 1989ರ ವಿಧಾನ ಸಭಾ ಚುನಾವಣೆಯಲ್ಲಿ ಜಾತ್ಯಾತೀತ ಜನತಾದಳ ಪಕ್ಷ ನಿರೀಕ್ಷಿತ ಫಲಿತಾಂಶ ಪಡೆಯದಿದ್ದಾಗ, ರಾಜ್ಯದಲ್ಲಿ ಪ್ರಥಮವಾಗಿ ನಮ್ಮ ಪಕ್ಷದ ಅಭ್ಯರ್ಥಿ ಗೆಲ್ಲಿಸಿ ವಿಧಾನ ಸಭೆಗೆ ಕಳುಹಿಸಿದ ತಾಲೂಕಿನ ಜನತೆ ಮೇಲೆ ನಮ್ಮ ಕುಟುಂಬ ಅಪಾರವಾದ ಪ್ರೀತಿ ಇಟ್ಟಿದೆ ಎಂದು ನಿಖಿಲ್ ಕುಮಾರಸ್ವಾಮಿ ತಿಳಿಸಿದರು.

ಪಟ್ಟಣದ ಸಂತೆ ಮಾಳದಲ್ಲಿ ನಡೆದ ಜನರೊಂದಿಗೆ ಜನತಾದಳ ಮತ್ತು ಪಕ್ಷದ ಸದಸ್ಯತ್ವ ನೋಂದಣಿ ಕಾರ್ಯಕ್ರಮದಲ್ಲಿ ಮಾತನಾಡಿ, ರಾಜಕೀಯದಲ್ಲಿ ಸೋಲು, ಗೆಲುವಿನ ಏರಿಳಿತ ಸಾಮಾನ್ಯ. ಅಂದು ತಾಲೂಕಿನ ಜನತೆ ನೀಡಿದ ಗೆಲುವು, ಪ್ರಾದೇಶಿಕ ಪಕ್ಷಗಳೂ ರಾಷ್ಟ್ರೀಯ ಪಕ್ಷಗಳೊಂದಿಗೆ ಚುನಾವಣೆಗೆ ಸ್ಪರ್ಧಿಸಬಹುದು ಎಂದು ಸಾಬೀತು ಮಾಡಿದ ಕ್ಷೇತ್ರ ಹೆಚ್.ಡಿ.ಕೋಟೆ. ಅಂದಿನಿಂದ ಇಂದಿನವರೆಗೂ ತಾಲೂಕಿಗೂ, ಜೆಡಿಎಸ್ ಗೂ ಅವಿನಾಭಾವ ಸಂಬಂಧವಿದೆ. 2023ರ ವಿಧಾನಸಭಾ ಚುನಾವಣೆಯಲ್ಲೂ ಅದೇ ಗೆಲುವನ್ನು ನಾವು ಪಡೆಯಬಹುದಿತ್ತು.ಆದರೆ, ಕೊನೆಗಳಿಗೆಯಲ್ಲಿ ಆದ ಕೆಲ ಬದಲಾವಣೆಗಳಿಂದ ಕ್ಷೇತ್ರ ಕೈತಪ್ಪಿದೆ. ಮುಂದಿನ ದಿನಗಳಲ್ಲಿ ಮರಳಿ ತೆಕ್ಕೆಗೆ ಪಡೆಯುವ ನಿಟ್ಟಿನಲ್ಲಿ ಕೆ.ಎಂ.ಕೃಷ್ಣನಾಯಕ ಪಕ್ಷ ಸಂಘಟಿಸುತ್ತಿದ್ದಾರೆ ಎಂದರು.

2028ರ ವಿಧಾನಸಭಾ ಚುನಾವಣೆಗೆ ಜನತಾದಳದ ಕಾರ್ಯಕರ್ತರು, ಮುಖಂಡರು ಕೃಷ್ಣನಾಯಕರನ್ನು ಶಾಸಕರನ್ನಾಗಿ ಆಯ್ಕೆ ಮಾಡಬೇಕು. ತಾಲೂಕಿ ನಲ್ಲಿ ಹುಲಿ ದಾಳಿಯಿಂದ ತತ್ತರಿಸಿದ ಕುಟುಂಬಕ್ಕೆ ಸಾಂತ್ವನ ಹೇಳಿ ರೈತರ ಮನೆಗೆ ಭೇಟಿ ನೀಡಿ ವೈಯಕ್ತಿಕವಾಗಿ ಸಹಾಯವನ್ನು ಯಾವುದೇ ಅಧಿಕಾರ ಇಲ್ಲದೆಯೂ ಕೃಷ್ಣನಾಯಕ ಮಾಡಿದ್ದಾರೆ ಎಂದು ಹೇಳಿದರು.





ರಾಜ್ಯದಲ್ಲಿ ಹುಲಿ ದಾಳಿಗೆ 15 ಜನ ಬಲಿಯಾಗಿರುವುದಕ್ಕೆ ರಾಜ್ಯ ಸರ್ಕಾರವೇ ನೇರ ಹೊಣೆ ಹೊರಬೇಕು. ಸರ್ಕಾರ ಮತ್ತು ಅರಣ್ಯರ ಜೊತೆ ಕೇಂದ್ರ ಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅರಣ್ಯ ಸಚಿವರ ಜೊತೆ ಮಾತನಾಡಿ ಅರಣ್ಯ ಸಮಸ್ಯೆಗಳನ್ನು ಬಗೆಹರಿಸುವ ಕೆಲಸವನ್ನು ಮಾಡುತ್ತಿದ್ದಾರೆ ಎಂದು ಮಾತನಾಡಿದರು.

ರಾಜ್ಯ ಸರ್ಕಾರ ರೈತರಿಗೆ ಗಂಗಾ ಕಲ್ಯಾಣ ಯೋಜನೆ ಹಳ್ಳ ಹಿಡಿಯುವಂತೆ ಮಾಡಿದೆ. ರೈತರ ಹಿತ ಕಾಯುವಲ್ಲಿ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ. ರೈತರು ಜಮೀನಿಗೆ ಒಂದು ಟಿಸಿಯ ಕಲೆಕ್ಷನ್ ಪಡೆದುಕೊಳ್ಳಲು ಎಚ್.ಡಿ ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ವೇಳೆ 15,000ದರವಿತ್ತು. ಪ್ರಸ್ತುತ ಮೂರು ಲಕ್ಷ ಖರ್ಚು ಮಾಡಬೇಕಾದ ಸಂದರ್ಭ ಬಂದಿದೆ. ಸರ್ಕಾರ ರೈತರಿಗೆ ನೀರು, ವಿದ್ಯುತ್, ಭೂಮಿಯನ್ನು ಕೊಡುವುದಕ್ಕೆ ಹಿಂದೇಟು ಹಾಕುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

> **ಜಾತ್ಯಾತೀತ ಜನತಾದಳದಿಂದ ಹುಣಸೂರಿನ ಹನಗೂಡು ಕ್ಷೇತ್ರದಿಂದ ರಾಜಕೀಯ ಭವಿಷ್ಯ ರೂಪಿಸಿಕೊಂಡ ಅನಿಲ್ ಚಿಕ್ಕಮಾದು, ಇಂದು ಶಾಸಕರಾದ ನಂತರ ಪಕ್ಷದ ಮೇಲೆ ಕಿಂಚಿತ್ತು ಕಾಳಜಿಯನ್ನೂ ತೋರದೆ, ತಾಲೂಕಿನಲ್ಲಿ ನಡೆಯುವ ಜನರೊಂದಿಗೆ ಜನತಾ ದಳ ಕಾರ್ಯಕ್ರಮಕ್ಕೆ ಸ್ಥಳಾವಕಾಶ ನೀಡುವ ಸಂಬಂಧ ಅಧಿಕಾರಿಗಳಿಗೆ ಒತ್ತಡ ಏರಿದ್ದಾರೆ. ತಾಲೂಕಿನ ಅಭಿವೃದ್ಧಿ ವಿಷಯವಾಗಿ ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸುವ ಬದಲು, ರಾಜಕೀಯಕ್ಕಾಗಿ ಅಧಿಕಾರಿಗಳನ್ನು ಶಾಸಕ ಅನಿಲ್ ಚಿಕ್ಕಮಾದು ಬಳಸಿ ಕೊಳ್ಳುತ್ತಿದ್ದಾರೆ.**
> 
> ▶▶ **ಕೆ.ಎಂ.ಕೃಷ್ಣನಾಯಕ** ಜೆಡಿಎಸ್ ಮುಖಂಡ

ಜೆಡಿಎಸ್ ಮುಖಂಡ ಕೆ.ಎಂ.ಕೃಷ್ಣ ನಾಯಕ ಮಾತನಾಡಿ, 2018 ಹಾಗೂ 2023ರಲ್ಲಿ ಜೆಡಿಎಸ್ನಿಂದ ಟಿಕೆಟ್ ತಪ್ಪಿದಾಗ, ಬಿಜೆಪಿಯವರು ಟಿಕೆಟ್ ನೀಡಿದರು. ಆ ಚುನಾವಣೆಯಲ್ಲಿ ತಾಲೂಕಿನ ಜನತೆ 50,000 ಮತ ನೀಡಿ 2ನೇ ಸ್ಥಾನಕ್ಕೆ ತಂದರು. ಮಾಜಿ ಮುಖ್ಯಮಂತ್ರಿ ಕುಮಾರಣ್ಣ ಅವರ ಬಾಂಧವ್ಯದಿಂದ ನಾನು ಪಕ್ಷಕ್ಕೆ ಮರಳಿದ್ದೇನೆ. ತಾಲೂಕಿನಲ್ಲಿ ಹತ್ತು ವರ್ಷಗಳಿಂದ ನಿರಂತರವಾಗಿ ಜನರ ಕಷ್ಟ ಸುಖದಲ್ಲಿ ಭಾಗವಹಿಸುತ್ತಿದ್ದೇನೆ ಎಂದು ಹೇಳಿದರು.

ತಾಲೂಕನ್ನು ಹಸಿವು ಮುಕ್ತ ಮಾಡಬೇಕು ಎಂದು ಅಪ್ಪಾಜಿ ಕ್ಯಾಂಟೀನ್ ತೆರೆದಾಗ, ಬಡವರು, ಕೂಲಿ ಕಾರ್ಮಿಕರಿಗೆ ಅನುಕೂಲವಾಗುತಿತ್ತು. ಕೋವಿಡ್ ಸಮಯದಲ್ಲಿ ಇಪ್ಪತ್ತೈದು ಸಾವಿರ ಕುಟುಂಬಗಳಿಗೆ ಆಹಾರದ ಕಿಟ್ ವಿತರಣೆ ಮಾಡಿದೆ. ಎರಡು ಆಂಬುಲೆನ್ಸ್ ನೀಡಲಾಯಿತು. ರಾಜ್ಯ ಸರ್ಕಾರ ಗ್ಯಾರಂಟಿಯ ಹೆಸರಿನಲ್ಲಿ ಜನತೆಗೆ ಸಾಲ ಹೊರಿಸಿದ್ದಾರೆ. ತಾಲೂಕಿನಲ್ಲಿ ರೈತರಿಗೆ ಸಾಗುವಳಿ ಪತ್ರ ನೀಡುವಲ್ಲಿ ವಿಳಂಬ, ಭೂಮಿ ದುರಸ್ತಿ ಸೇರಿದಂತೆ ಸಾರ್ವಜನಿಕರಿಗೆ ಅಧಿಕಾರಿಗಳು ಸ್ಪಂದಿಸುತ್ತಿಲ್ಲ. ಸಾರ್ವಜನಿಕರನ್ನು ಅನಗತ್ಯವಾಗಿ ಅಲೆಸುತ್ತಿದ್ದಾರೆ ತಾಲೂಕು ಆಡಳಿತ ವಿಫಲವಾಗಿದೆ ಎಂದು ಕಿಡಿಕಾರಿದರು. ಮಾಜಿ ಸಚಿವ ಸಾ.ರಾ.ಮಹೇಶ್ ಹುಣಸೂರು ಶಾಸಕ ಜಿ.ಡಿ ಹರೀಶ್ ಗೌಡ ಸೇರಿದಂತೆ ಪಕ್ಷದ ಹಲವರು ಮಾತನಾಡಿದರು.

ಜಿಲ್ಲಾಧ್ಯಕ್ಷ ಅಶ್ವಿನ್ ಕುಮಾರ್, ಮಾಜಿ ಶಾಸಕ ಕೆ. ಮಹದೇವ, ವಿಧಾನ ಪರಿಷತ್ ಸದಸ್ಯ ಮಂಜೇಗೌಡ, ಮಾಜಿ ಮಹಾಪೌರ ರವಿಕುಮಾರ್, ಮೈಮುಲ್ ಮಾಜಿ ಅಧ್ಯಕ್ಷ ಪ್ರಸನ್ನ, ತಾಲೂಕು ಅಧ್ಯಕ್ಷರುಗಳಾದ ರಾಜೇಂದ್ರ, ಗೋಪಾಲಸ್ವಾಮಿ, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಶ್ಯಾಮ್ ಸುಂದರ್, ಒಕ್ಕಲಿಗ ಸಂಘದ ಅಧ್ಯಕ್ಷ ಹರೀಶ್ ಗೌಡ, ಮುಖಂಡರಾದ ನರಸಿಂಹೇಗೌಡ, ಮಳಲಿ ಶಾಂತಕುಮಾರ್, ಚಾ. ಸೋಮಣ್ಣ, ಸಿದ್ದೇಗೌಡ, ಎಚ್ ಹನು, ಕೃಷ್ಣಾಪುರ ಶಿವಯ್ಯ, ಡಿ. ನಾಗರಾಜು, ಕಾಳಪ್ಪಾಜಿ ಸಿ, ವಡ್ಡರಗುಡಿ ರಘು, ಕೆಟಿಎಸ್ ವಿನೋದ್, ಕೃಷ್ಣಾಪುರ ಶಿವಕುಮಾರ್ ಸೇರಿದಂತೆ ಪಕ್ಷದ ಮುಖಂಡರು ಕಾರ್ಯಕರ್ತರು ಅಭಿಮಾನಿಗಳು ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಿದ್ದರು.

**ಕಾವೇರಿ ನೀರಾವರಿ ನಿಗಮ ನಿಯಮಿತ**
(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯಪಾಲಕ ಅಭಿಯಂತರರವರ ಕಛೇರಿ, ನಂ.2, ಕೆ.ಸಿ. ವಿಭಾಗ,
ಕೊಳ್ಳೇಗಾಲ–571440, ಚಾಮರಾಜನಗರ ಜಿಲ್ಲೆ.

**ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ 21/2025–26 ದಿನಾಂಕ: 27.03.2026**
**(ಕೆಪಿಪಿ–ಪೋರ್ಟಲ್‌ನಲ್ಲಿ ಮಾತ್ರ)**

**ತುರ್ತು ನಿರ್ವಹಣಾ ಕಾಮಗಾರಿಗಳಿಗಾಗಿ ಟೆಂಡರು**

ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಮೈಸೂರು/ಬೆಂಗಳೂರು ಇವರ ಪರವಾಗಿ ವಿವಿಧ ಯೋಜನೆಗಳಡಿ ಈ ವಿಭಾಗ ವ್ಯಾಪ್ತಿಯಲ್ಲಿ ಬರುವ ಒಟ್ಟು 44 ಸಂಖ್ಯೆ ತುರ್ತು ನಿರ್ವಹಣಾ **(2701)** ಕಾಮಗಾರಿಗಳಿಗೆ ಕೆಪಿಪಿ–ಪೋರ್ಟಲ್‌ನಲ್ಲಿ ಮಾತ್ರ ಲೋಕೋಪಯೋಗಿ ಇಲಾಖೆ, ನೀರಾವರಿ ಇಲಾಖೆ, ಸಿಪಿಡಬ್ಲ್ಯೂಡಿ ಹಾಗೂ ಇತರೆ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಲ್ಲಿ ನೊಂದಾಯಿಸಿ ಕಾವೇರಿ ನೀರಾವರಿ ನಿಗಮದಲ್ಲಿ ಕಡ್ಡಾಯವಾಗಿ ಹೆಸರು ನೊಂದಾಯಿಸಿರುವ ಅರ್ಹ ಸಿವಿಲ್ ಗುತ್ತಿಗೆದಾರರಿಂದ ಐಟಂವಾರು ಇ–ಟೆಂಡರ್‌ನ್ನು **ಕೆ.ಡಬ್ಲ್ಯೂ–1** ಪ್ರಕಾರ ಆಹ್ವಾನಿಸಲಾಗಿದೆ. ಟೆಂಡರ್‌ಗಿಟ್ಟ ಕಾಮಗಾರಿಯ ಮೊಬಲಗು : **ಗರಿಷ್ಠ –ರೂ.4.24 ಲಕ್ಷ , ಕನಿಷ್ಠ : ರೂ.1.65 ಲಕ್ಷ , ಇ.ಎಂ.ಡಿ: ಗರಿಷ್ಠ – ರೂ.10.600/–, ಕನಿಷ್ಠ – ರೂ.2,100/– ಕಾಲಮಿತಿ:(ಮಳೆಗಾಲ ಸೇರಿದಂತೆ)** ಟೆಂಡರ್ ಪ್ರಕಟಣೆಯಂತೆ ಯಾವುದೇ ವಿಚಾರಣೆಗೆ ಕೊನೆಯ **ದಿ: 04.04.2026 ಸಂಜೆ 5.30 ಗಂಟೆವರೆಗೆ.** ಭರ್ತಿ ಮಾಡಿದ ಟೆಂಡರ್ ದಾಖಲಾತಿಗಳನ್ನು ಸಲ್ಲಿಸಲು ಕೊನೆಯ **06.04.2026 ಸಂಜೆ 5.30** ಗಂಟೆವರೆಗೆ. ಟೆಂಡರ್‌ಗಳನ್ನು ತೆರೆಯುವ **ದಿ: 08.04.2026 ಬೆಳಿಗ್ಗೆ 11.00** ಗಂಟೆಗೆ. ಟೆಂಡರ್ ಫಾರಂಗಳನ್ನು ವೆಬ್ ಸೈಟ್ **http://KPPP.karnataka.gov.in** ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು. ಹೆಚ್ಚಿನ ವಿವರಗಳನ್ನು ಸದರಿ ಕಛೇರಿಯಿಂದ ಪಡೆಯಬಹುದು.

**ಸಹಿ/–ಕಾರ್ಯಪಾಲಕ ಇಂಜಿನಿಯರ್,**
**ಕಾವೇರಿ ನೀರಾವರಿ ನಿಗಮ ನಿಯಮಿತ, ನಂ.02, ಕನಾವಿ, ಕೊಳ್ಳೇಗಾಲ.**
ಸಂ.ವಾಸಾಸಂಇ:ಚಾನಗರ:822:2025–26

**ಕರ್ನಾಟಕ ಸರ್ಕಾರ**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಂಜಿನಿಯರಿಂಗ್ ವಿಭಾಗ**
**ಕಾರ್ಯಪಾಲಕ ಅಭಿಯಂತರರವರ ಕಛೇರಿ,**
**ಆಕುಕ ಇಂಜಿನಿಯರಿಂಗ್ ವಿಭಾಗ,**
**ಎನ್.ಪಿ.ಸಿ.ಆಸ್ಪತ್ರೆ ಆವರಣ, ನಜರ್‌ಬಾದ್, ಮೈಸೂರು – 10.**
**(Ph. No: 0821-2979772 E-mail:-khsdrp.divmys@gmail.com)**
**ಸಂಖ್ಯೆ: ಆಕುಕ/ಇಂ.ವಿ./ಕಾ.ಅ/ಮೈ/ಸಇ–1/ಟೆಂಡರ್–16–2&3ನೇ ಕರೆ ಮತ್ತು 32–2ನೇ ಕರೆ ಮತ್ತು ಟೆಂಡರ್–35/ಪಿ.ಎಂ.ಸಿ/2025–26 ದಿ: 23.03.2026**

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಕಾರ್ಯಪಾಲಕ ಅಭಿಯಂತರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜಿನಿಯರಿಂಗ್ ವಿಭಾಗ, ಮೈಸೂರು ವ್ಯಾಪ್ತಿಗೆ ಒಳಪಡುವ ಮೈಸೂರು, ಚಾಮರಾಜನಗರ, ಮಂಡ್ಯ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಈ ವಿಭಾಗ ವತಿಯಿಂದ ಕೈಗೊಂಡಿರುವ ನಿರ್ಮಾಣ, ನವೀಕರಣ ಮತ್ತು ಅಭಿವೃದ್ಧಿ ಕಾಮಗಾರಿಗಳಿಗೆ ಯೋಜನಾ ನಿರ್ವಹಣೆ ಸಮಾಲೋಚಕರನ್ನು ನೇಮಿಸಲು ಸೇವಾ ಟೆಂಡರ್‌ಗಳನ್ನು ದ್ವಿ–ಟೆಂಡರ್ ದಾಸ್ತಾವೇಜು ಪದ್ಧತಿಯಲ್ಲಿ ವಿದ್ಯುನ್ಮಾನ ಸಂಗ್ರಹಣೆ ವೇದಿಕೆ (Karnataka Public Procurement portal) ಮೂಲಕ ಆಹ್ವಾನಿಸಲಾಗಿದೆ. ಸೇವಾ ಟೆಂಡರ್‌ಗಳ ಅಂದಾಜು ಮೊತ್ತ ಗರಿಷ್ಠ ರೂ.41.74 ಲಕ್ಷಗಳು ಕನಿಷ್ಠ ರೂ.1.27 ಲಕ್ಷಗಳಾಗಿರುತ್ತದೆ.

**ಟೆಂಡರ್ ಪ್ರಕ್ರಿಯೆ ವೇಳಾಪಟ್ಟಿ ಮತ್ತು ಇತರೆ ವಿವರಗಳು: 1)** ಟೆಂಡರ್‌ಗಳನ್ನು ಸ್ವೀಕರಿಸುವ ಕೊನೆಯ ದಿನಾಂಕ ಮತ್ತು ಸಮಯ: 02.04.2026 ರಂದು 16.00 ಗಂಟೆಯವರೆಗೆ. **2)** ಟೆಂಡರ್ ತೆರೆಯುವ ದಿನಾಂಕ ಮತ್ತು ಸಮಯ (ತಾಂತ್ರಿಕ ಬಿಡ್): 03.04.2026 ರಂದು 16.30 ಗಂಟೆಗೆ. ಟೆಂಡರ್ ವಿವರಗಳನ್ನು ವಿದ್ಯುನ್ಮಾನ ಸಂಗ್ರಹಣೆ ವೇದಿಕೆ ಮೂಲಕ (Through KPPP) https://kppp.karnataka.gov.in ದಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು.

**ಸೂಚನೆ: 1)** ಈ ಕೆಳಗೆ ಸಹಿ ಮಾಡಿರುವವರು ಯಾವುದೇ ಕಾರಣಗಳನ್ನು ನೀಡದೆ ಟೆಂಡರ್ ಪ್ರಕ್ರಿಯೆಯನ್ನು ಮುಂದೂಡುವ/ಸಂಪೂರ್ಣವಾಗಿ ಟೆಂಡರ್ ರದ್ದುಗೊಳಿಸುವ / ಟೆಂಡರ್ ನಿರಾಕರಿಸುವ ಹಕ್ಕನ್ನು ಹೊಂದಿರುತ್ತಾರೆ. **2)** ಇನ್ನು ಮುಂದೆ ಟೆಂಡರ್ ಪ್ರಕ್ರಿಯೆಯಲ್ಲಿ ಯಾವುದೇ ಬದಲಾವಣೆಗಳು ಇದ್ದಲ್ಲಿ ದಿನ ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ, ಬದಲಾಗಿ ವಿದ್ಯುನ್ಮಾನ ಸಂಗ್ರಹಣೆ ವೇದಿಕೆಯಲ್ಲಿ ಮಾತ್ರ ಬದಲಾವಣೆಗಳನ್ನು ಪ್ರಕಟಿಸಲಾಗುವುದು.

**ಸಹಿ/– ಕಾರ್ಯಪಾಲಕ ಅಭಿಯಂತರರು, ಆಕುಕ ಇಂಜಿನಿಯರಿಂಗ್ ವಿಭಾಗ, ಮೈಸೂರು.**
DIPR/DDMYS/1886/KSMCA/1070/2025-26

# ವನ್ಯಪ್ರಾಣಿ ದಾಳಿಗೆ ಹಸು ಬಲಿ

ಹನೂರು : ವನ್ಯಪ್ರಾಣಿ ದಾಳಿಗೆ ಹಸುಯೊಂದು ಬಲಿಯಾಗಿರುವ ಘಟನೆ ಕಳ್ಳಿದೊಡ್ಡಿ ಸಮೀಪದಲ್ಲಿ ಜರುಗಿದ್ದು ಶುಕ್ರವಾರ ತಡವಾಗಿ ಬೆಳಕಿಗೆ ಬಂದಿದೆ.

ಹನೂರು ತಾಲೂಕಿನ ಶಾಗ್ಯ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಳ್ಳಿದೊಡ್ಡಿ ಗ್ರಾಮದ ಅಂಕಪ್ಪ ಬಿನ್ ಸಣ್ಣನಾಯಕ ಸೇರಿದ ಹಸು ಎಂದು ಗುರುತಿಸಲಾಗಿದೆ. ಎಂದಿನಂತೆ ಶನಿವಾರ ಕಳ್ಳಿದೊಡ್ಡಿ ಗ್ರಾಮದ ಜಮೀನಿನಲ್ಲಿ ಮೇವು ಮೇಯಲು ಹಸು ಬಿಟ್ಟಿದ್ದರು. ಅಂಕಪ್ಪ ಸಾಕಿದ ನಾಟಿ ಹಸಿವಿನ ಹೋರಿಯನ್ನು ಸಂಜೆ ವೇಳೆ ಚಿರತೆ ದಾಳಿ ಮಾಡಿ ಕೊಂದು ಹಾಕಿದೆ ಎಂದು ರೈತ ಆರೋಪಿಸಿದ್ದಾರೆ. ದಾಳಿಗೆ ಒಳಗಾದ ಹೋರಿಯ ಕತ್ತಿನ ಭಾಗ ಹಿಂಭಾಗದಲ್ಲಿ ಗಾಯಗೊಂಡಿದ್ದು ರಕ್ತ ಕಲೆ ಹೊಂದಿದೆ. ಇದರ ಬೆಲೆ ಸುಮಾರು 60 ಸಾವಿರಕ್ಕೆ ಬಾಳುತ್ತಿತ್ತು ಇದೀಗ ಹೋರಿ ಇಲ್ಲವಾಗಿದೆ ಎಂದು ರೈತ ತಮ್ಮ ಅಳಲುನ್ನು ತೋಡಿಕೊಂಡಿದ್ದು, ಇದಕ್ಕೆ ಸೂಕ್ತ ಪರಿಹಾರ ಒದಗಿಸುವುದರ ಜೊತೆಗೆ ಚಿರತೆ, ವನ್ಯಪ್ರಾಣಿಗಳ ದಾಳಿ ತಡೆಗಟ್ಟಬೇಕು ಎಂದು ಒತ್ತಾಯಿಸಿದ್ದಾರೆ.



ಈ ಘಟನೆ ಸಂಬಂಧ ಹನೂರು ಕಾವೇರಿ ವನ್ಯಜೀವಿ ಧಾಮ ವಲಯ ಕಳ್ಳಿದೊಡ್ಡಿ ಬೀಟ್ ಅರಣ್ಯ ಇಲಾಖೆ ಸಿಬ್ಬಂದಿ ಮಲ್ಲಿಕಾರ್ಜುನ, ವಿವೇಕ್ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಅರಣ್ಯ ಇಲಾಖೆಗೆ ಅರ್ಜಿ ಸಲ್ಲಿಸಿ ಎಂದು ಸಿಬ್ಬಂದಿಗಳು ನಾಟಿದನದ ಮಾಲೀಕರಿಗೆ ತಿಳಿಸಿದ್ದು ಮುಂದಿನ ಕ್ರಮ ಕೈಗೊಂಡಿದ್ದಾರೆ

# ಕಾರ್ಯಾಚರಣೆಯಲ್ಲಿ ಹುಲಿ ಸೆರೆ

ಗುಂಡ್ಲುಪೇಟೆ: ತಾಲೂಕಿನ ಚನ್ನಮಲ್ಲಿಪುರ ಗ್ರಾಮದ ರೈತರೊಬ್ಬರ ಜಮೀನಿನಲ್ಲಿ ಕಳೆದ ಎರಡು ದಿನಗಳಿಂದ ಬೀಡುಬಿಟ್ಟಿದ್ದ ಹುಲಿಯನ್ನು ಅರಣ್ಯ ಇಲಾಖೆ ಯಶಸ್ವಿಯಾಗಿ ಕಾರ್ಯಾಚರಣೆ ನಡೆಸುವ ಮೂಲಕ ಸೆರೆ ಹಿಡಿದಿರುವ ಘಟನೆ ಗುರುವಾರ ರಾತ್ರಿ ನಡೆದಿದೆ.

ಕಾರ್ಯಾಚರಣೆಯಲ್ಲಿ ಸೆರೆ ಸಿಕ್ಕ ಹೆಣ್ಣು ಹುಲಿ ಸುಮಾರು 8 ವರ್ಷದ್ದಾಗಿದೆ. ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮದ್ದೂರು ಅರಣ್ಯ ವಲಯ ವ್ಯಾಪ್ತಿಗೆ ಒಳಪಡುವ ಚೆನ್ನಮಲ್ಲಿಪುರ ಗ್ರಾಮದ ಸುತ್ತಮುತ್ತಲು ಓಡಾಡಿ ಆತಂಕ ಸೃಷ್ಟಿಸಿದ ಹುಲಿಯನ್ನು ಸೆರೆ ಹಿಡಿಯಬೇಕೆಂದು ಗುರುವಾರ ರೈತರು ಮತ್ತು ಬೇರಂಬಾಡಿ ಗ್ರಾಮಸ್ಥರು ಒತ್ತಾಯಿಸಿದ್ದರು.

ಭೀಮ, ಮಹೇಂದ್ರ ಎಂಬ ಸಾಕಾನೆಗಳನ್ನು ಬಳಸಿಕೊಂಡು ಡ್ರೋಣ್ ಕ್ಯಾಮರಾ ಮೂಲಕ ಮದ್ದೂರು ವಲಯದ ಸಿಬ್ಬಂದಿಗಳು ಕಾರ್ಯಾಚರಣೆ ನಡೆಸಿ ಅರವಳಿಕೆ ಚುಚ್ಚುಮದ್ದು ನೀಡಿ ಹುಲಿಯನ್ನು ಸೆರೆ ಹಿಡಿಯಲಾಗಿದೆ. ಹುಲಿಯು ಮೇಲ್ನೋಟಕ್ಕೆ ಆರೋಗ್ಯಕರವಾಗಿದ್ದು ಮೈಸೂರಿನ ಕೂರ್ಗಳ್ಳಿ ಪುನರ್ವಸತಿ ಕೇಂದ್ರಕ್ಕೆ ರವಾನೆ ಮಾಡಲಾಗಿದೆ.



ಕಾರ್ಯಾಚರಣೆಯಲ್ಲಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಅರಣ್ಯ ಇಲಾಖೆ ಮತ್ತು ಪೊಲೀಸ್ ಇಲಾಖೆ ಸಿಬ್ಬಂದಿಗಳು ಭಾಗಿಯಾಗಿದ್ದರು.

# ಹೆಣ್ಣು ಮಕ್ಕಳಿಗೆ ಲಸಿಕೆ

ಗುಂಡ್ಲುಪೇಟೆ: ತಾಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರ ಕಗ್ಗಳದ ಹುಂಡಿ ಇಲ್ಲಿ ಹೆಚ್ ಪಿವಿ ಲಸಿಕಾ ಅಭಿಯಾನ ಕಾರ್ಯಕ್ರಮಕ್ಕೆ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ಅಲೀಂ ಪಾಷಾ ಚಾಲನೆ ನೀಡಿದರು.

ಈ ಕಾರ್ಯಕ್ರಮದಲ್ಲಿ ತಾಲೂಕು ಆರೋಗ್ಯ ಅಧಿಕಾರಿಗಳಾದ ಡಾ.ಅಲಿಂ ಪಾಷ ಮಾತನಾಡಿ ಗರ್ಭಕೋಶದ ಕ್ಯಾನ್ಸರ್ ತಡೆಗಟ್ಟುವ ಉದ್ದೇಶದಿಂದ 14 ವರ್ಷದಿಂದ 15 ವರ್ಷ 3 ತಿಂಗಳು ತುಂಬಿದ ಹೆಣ್ಣು ಮಕ್ಕಳಿಗೆ ಹೆಚ್ ಪಿ ವಿ ಲಸಿಕೆಯನ್ನು ಹಾಕಲಾಗುತ್ತಿದೆ. ಇದರ ಸಂಬಂಧವಾಗಿ ನಮ್ಮ ಗುಂಡ್ಲುಪೇಟೆ ತಾಲೂಕಿನಲ್ಲಿ 1400 ಹೆಣ್ಣು ಮಕ್ಕಳು ಅರ್ಹ ಫಲಾನುಭವಿಗಳಾಗಿದ್ದು ಕಗ್ಗಳದ ಹುಂಡಿ ವ್ಯಾಪ್ತಿಯಲ್ಲಿ 156 ಮಕ್ಕಳು ಹೆಚ್ ಪಿ ವಿ ಲಸಿಕೆ ಹಾಕಲಾಯಿತು. ಈ ಕಾರ್ಯಕ್ರಮದಲ್ಲಿ ತಾಲೂಕು ಆರೋಗ್ಯ ಅಧಿಕಾರಿಗಳು, ಸಮುದಾಯ ಅರೋಗ್ಯ ಅಧಿಕಾರಿಗಳಾದ ಅಶ್ವಿನಿ, ಪೂಜಾ, ನಂಜಮಣಿ, ವಿನಾಯಕ, ರೂಪ, ಮಹೇಶ್,ಕೆಂಪಣ್ಣ ಫಲಾನುಭವಿ ಮಕ್ಕಳ ಪೋಷಕರು ಭಾಗವಹಿಸಿದ್ದರು.





**ಅಧ್ಯಕ್ಷರಾಗಿ ಅಯ್ಯನಪುರ ಶಿವಕುಮಾರ್, ಉಪಾಧ್ಯಕ್ಷರಾಗಿ ವೈ.ಪಿ. ರಾಜೇಂದ್ರ ಪ್ರಸಾದ್**

# ಗುತ್ತಿಗೆದಾರರ ಸಹಕಾರ ಸಂಘ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ

ಚಾಮರಾಜನಗರ, ಚಾಮರಾಜನಗರ ತಾಲೂಕು ಲೋಕೋಪಯೋಗಿ ಇಲಾಖೆಯ ಸಿವಿಲ್ ಗುತ್ತಿಗೆದಾರರ ಸಹಕಾರ ಸಂಘಕ್ಕೆ ನೂತನ ಅಧ್ಯಕ್ಷರಾಗಿ ಅಯ್ಯನಪುರ ಶಿವಕುಮಾರ್ 3ನೇ ಬಾರಿಯೂ, ಉಪಾಧ್ಯಕ್ಷ ವೈ.ಪಿ.ರಾಜೇಂದ್ರ ಪ್ರಸಾದ್ ಅವಿರೋಧವಾಗಿ ಆಯ್ಕೆಯಾದರು.

ನಗರದ ಪಿಡಬ್ಲ್ಯೂಡಿ ಕಚೇರಿ ಅವರಣದಲ್ಲಿರುವ ಸಂಘದ ಕಚೇರಿ ಸಭಾಂಗಣದಲ್ಲಿ ಸಂಘದ ಅಧ್ಯಕ್ಷರಾಗಿ ನೂತನ ಅಧ್ಯಕ್ಷ ರು, ಉಪಾಧ್ಯಕ್ಷ ರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಅಯ್ಯನಪುರ ಶಿವಕುಮಾರ್, ಉಪಾಧ್ಯಕ್ಷ ಸ್ಥಾನಕ್ಕೆ ವೈ.ಪಿ.ರಾಜೇಂದ್ರ ಪ್ರಸಾದ್ ನಾಮಪತ್ರ ಸಲ್ಲಿಸಿದರು. ಈ ಎರಡು ಸ್ಥಾನಗಳಿಗೆ ಬೇರೆ ಯಾರು ನಾಮಪತ್ರ ಸಲ್ಲಿಸದ ಹಿನ್ನೆಲೆಯಲ್ಲಿ ನೂತನ ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿಯಾಗಿದ್ದ ಸಹಕಾರ ಇಲಾಖೆಯ ಅಧಿಕಾರಿ ನಾಗೇಶ್ ಘೋಷಿಸಿದರು. ಸಭೆಯಲ್ಲಿ ನಿರ್ದೇಶಕರಾದ ಎಂ. ರವಿ , ಬಸಪ್ಪನಪಾಳ್ಯ ನಟರಾಜು, ಎಂ. ಶಿವಕುಮಾರ್, ನಲ್ಲೂರು ಮಹದೇವಸ್ವಾಮಿ ಬಿ, ಶಿವಬಸವಣ್ಣ, ಎಂ.ಸಿ. ಸುರೇಂದ್ರ,ಮಲೆಯೂರು ಎಂ.ಎ. ನಾಗ ರಾಜು, ಅಬ್ದುಲ್ ಅಜೀಜ್, ನಂಜುಂಡಸ್ವಾಮಿ, ಸುಬ್ಬೇ ಗೌಡ, ದೇವಾಜಮ್ಮಣಿ, ದೊರೆಸ್ವಾಮಿ, ಸಂಘದ ಸಿಇಓ ಬರ್ನಾಲ್ಡ್ ದೀಕ್ಷಿತ್ ಭಾಗವಹಿಸಿದ್ದರು.



ಸಂಘಕ್ಕೆ ಒಂದು ಕೋಟಿ ಲಾಭ ತರುವ ಗುರಿ: ನೂತನ ಅಧ್ಯಕ್ಷ ಅಯ್ಯನಪುರ ಶಿವಕುಮಾರ್ ಮಾತನಾಡಿ, ಸಂಘದ ನಿರ್ದೇಶಕರು ನನ್ನನ್ನು ಮೂರನೇ ಬಾರಿಯೂ ಅವಿರೋಧ ಆಯ್ಕೆ ಮಾಡಿರುವುದು ತುಂಬಾ ಖುಷಿಯಾಗಿದೆ. ನಿಮ್ಮೆಲ್ಲರ ಪ್ರೀತಿ, ವಿಶ್ವಾಸಕ್ಕೆ ಚಿರಋಣಿಯಾಗಿದ್ದೇವೆ. ಕಳೆದ 2015ರಲ್ಲಿ ಸಂಘ ಸ್ಥಾಪನೆ ಗೊಂಡು ತಾಲೂಕಿನ ಗುತ್ತಿಗೆದಾರರನ್ನು ಅರ್ಥಿಕವಾಗಿ ಬಲಿಷ್ಠಗೊಳಿಸುವ ನಿಟ್ಟಿನಲ್ಲಿ ಸಂಘ ಸಕ್ರಿಯವಾಗಿ ಕೆಲಸ ಮಾಡುತ್ತಿದೆ. ಸಂಘದ ಸದಸ್ಯರಿಗೆ 2 ಲಕ್ಷ ದ ವರೆಗೂ ಅರ್ಜಿ ಸಲ್ಲಿಸಿದ ಕೆಲವ ನಿಮಿಷಗಳಲ್ಲಿ ಅವರ ಬ್ಯಾಂಕ್ ಖಾತೆಗೆ ಹಣವನ್ನು ಜಮಾ ಮಾಡಲಾಗುತ್ತದೆ. ಅದೇ ರೀತಿ ಸದಸ್ಯರು ಸಹ ಮರು ಪಾವತಿ ಮಾಡುತ್ತಿದ್ದಾರೆ. ಹೀಗಾಗಿ ನಮ್ಮ ಸಂಘ ಒಟ್ಟು ಷೇರು 20 ಲಕ್ಷ ರೂ. ಆಗಿದ್ದು, ಇದುವರೆಗೆ 45 ಲಕ್ಷ ರೂ. ನಿವ್ವಳ ಲಾಭ ಬಂದಿದೆ. ಈಗ ಸಂಘದ ಖಾತೆಯಲ್ಲಿ 65 ಲಕ್ಷ ರೂ. ಇದ್ದು, ಮುಂದಿನ ದಿನಗಳಲ್ಲಿ ಒಂದು ಕೋಟಿ ಲಾಭ ತರುವ ಚಿಂತನೆ ಹೊಂದಲಾಗಿದೆ. ಇನ್ನು ಹೆಚ್ಚಿನ ಯೋಜನೆಗಳು ಹಾಗೂ ಸಂಘ ಸದಸ್ಯರ ಆರ್ಥಿಕ ಸಬಲೀಕರಣಕ್ಕೆ ಕಾರ್ಯಕ್ರಮಗಳನ್ನು ರೂಪಿಸುವುದಾಗಿ ತಿಳಿಸಿದರು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ರಾಮಸಮುದ್ರ ಪುಟ್ಟಸ್ವಾಮಿ, ವಕೀಲರಾದ ಮಂಜು, ನಗರಸಭಾ ಮಾಜಿ ಸದಸ್ಯ ನಂಜುಂಡಸ್ವಾಮಿ, ಗುತ್ತಿಗೆದಾರ ಗಿರೀಶ್, ರಾಮಸಮುದ್ರ ಯಜಮಾನ ಪಾಪಣ್ಣ, ಗೋವಿಂದರಾಜ ಹಾಗೂ ನಿರ್ದೇಶಕರು ಸೇರಿದಂತೆ ಅನೇಕ ಮುಖಂಡರು ಅಭಿನಂದಿಸಿದರು.

# ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳ ಸಾಧನೆ

ಹನೂರು : ಪ್ರತಿ ವರ್ಷದಂತೆ ಈ ವರ್ಷವೂ ಒಲಂಪಿಯಾಡ್ ಸಂಸ್ಥೆಯಿಂದ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ನಮ್ಮ ರಿಪಬ್ಲಿಕ್ ಅಂತರಾಷ್ಟ್ರೀಯ ವಸತಿ ಶಾಲೆ ಮತ್ತು ಕಾಲೇಜು ಹಲಸು ಗುಡ್ಡೆ ಹನೂರಿನ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದು ಸಂಸ್ಥೆಗೆ ಕೀರ್ತಿ ತಂದಿರುತ್ತಾರೆ ಎಂದು ಪ್ರಾಂಶುಪಾಲರಾದ ರವೀಂದ್ರ ಜೀವರಾಜ್ ತಿಳಿಸಿದರು.

ಪಟ್ಟಣದ ಹೊರವಲಯದಲ್ಲಿರುವ ರಿಪಬ್ಲಿಕ್ ಅಂತರ ರಾಷ್ಟ್ರೀಯ ವಸತಿ ಶಾಲೆಯ ಮಕ್ಕಳು ಸಾಧನೆ ಮಾಡಿದ್ದು ಆ ಎಲ್ಲಾ ಮಕ್ಕಳನ್ನು ಅಭಿನಂದಿಸಿ ನಂತರ ಮಾತನಾಡಿದರು.

ಈ ರೀತಿಯ ಪರೀಕ್ಷೆಗಳು ಮಕ್ಕಳಲ್ಲಿ ಸ್ಪರ್ಧಾತ್ಮಕ ಮನೋಭಾವನೆ, ಕುತೂಹಲ ಆಸಕ್ತಿ ಬೆಳೆಸುವುದರ ಜೊತೆಗೆ ಮುಂದಿನ ಭವಿಷ್ಯಕ್ಕೆ ಪೂರಕ ಸಾಧನವಾಗಲಿದೆ. ಜೊತೆಗೆ ಶಾಲಾ

ನ್ಯಾಷನಲ್ ಒಲಂಪಿಯಾಡ್ ಪರೀಕ್ಷೆಗಳು ಎಂದರೆ ದೇಶಾದ್ಯಂತ ವಿದ್ಯಾರ್ಥಿಗಳು ವಿವಿಧ ವಿಷಯಗಳಲ್ಲಿ ತಮ್ಮ ಜ್ಞಾನ ಮತ್ತು ಕೌಶಲ್ಯಗಳನ್ನು ಪರೀಕ್ಷಿಸಿಕೊಳ್ಳುವ ಸ್ಪರ್ಧಾತ್ಮಕ ಪರೀಕ್ಷೆಗಳು ಸಾಮಾನ್ಯವಾಗಿ ಇವು ಗಣಿತ ವಿಜ್ಞಾನ ಭಾಷೆ (ಹಾಗೂ ಇತರ ವಿಷಯಗಳು)



ಮುಂತಾದ ಕ್ಷೇತ್ರಗಳಲ್ಲಿ ನಡೆಯುತ್ತದೆ. ಈ ಪರೀಕ್ಷೆಗಳು ವಿದ್ಯಾರ್ಥಿಗಳಿಗೆ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ತೋರಿಸಲು ಮತ್ತು ಮುಂಬರುವ ಭವಿಷ್ಯತ್ತಿನ ಪರೀಕ್ಷೆಗಳಲ್ಲಿ ಅಂದರೆ ನೀಟ್, ಕೆ ಸೆಟ್, ಜೆ ಇ ಇ ಮುಂತಾದ ಕ್ಷೇತ್ರಗಳಲ್ಲಿ ನಡೆಯುತ್ತದೆ ಇದು ಮಕ್ಕಳಿಗೆ ಅನುಕೂಲ ಆಗಲಿದೆ ಎಂದರು.

ರಾಜ್ಯ ಮತ್ತು ರಾಷ್ಟ್ರ ಮಟ್ಟದ ಒಲಂಪಿಯಾಡ್ ಪರೀಕ್ಷೆಯಲ್ಲಿ ಉತ್ತಮ ರಾಂಕ್ ಪಡೆದು ಚಿನ್ನದ ಪದಕ ಮತ್ತು ರೂ 4000 ಮೊತ್ತದ ಒಲಂಪಿಯಾಡ್ ಆನ್ಲೈನ್ ಸಬ್ಸ್ಕ್ರಿಪ್ಷನ್ ಕಾರ್ಡ್, ಜೊತೆಗೆ ಸರ್ಟಿಫಿಕೇಟ್ ಅನ್ನು ಬಹುಮಾನವಾಗಿ ಪಡೆದುಕೊಂಡಿದ್ದಾರೆ. ಆಲ್ ಇಂಡಿಯಾ ರಾಂಕಿಂಗ್ ಮತ್ತು ಸ್ಟೇಟ್ ರಾಂಕ್ ಪಡೆದ ವಿದ್ಯಾರ್ಥಿಗಳು

- **ಸಾತ್ವಿಕ್** ( 30)
- **ಪುನೀತ್** ( 390)
- **ತನು ಶ್ರೀ** ( 100)
- **ಮೇಘ .ಶ್ರಿ** ( 110)
- **ಮೋನಿಷ ಗೌಡ** ( 110 )
- **ಜೆಸ್ಸಿಕಾ** ( 222)
- **ಆರಿತ್ ಅನುರಾಗ್**( 539)
- **ಕುಶಾಂತ್ ಗೌಡ** ( 539)
- **ಕಿಶೋರ್** ( 296)
- **ಸುಹಾಸ್ ಗೌಡ** ( 141)
- **ಚಿರಂತ್ ಗೌಡ** ( 609)

ಈ ಎಲ್ಲಾ ಮಕ್ಕಳಿಗೂ ಶಾಲಾ ಆಡಳಿತ ಮಂಡಳಿ ವತಿಯಿಂದ ಶಾಲಾ ಶಿಕ್ಷಕರ ವೃಂದದ ವತಿಯಿಂದ ಪೋಷಕರ ವತಿಯಿಂದ ಶುಭ ಹಾರೈಕೆಗಳನ್ನು ಸಲ್ಲಿಸಿದ್ದಾರೆ.

# ರಾಜಾಸೀಟು ಉದ್ಯಾನಕ್ಕೆ ಜಿಲ್ಲಾಧಿಕಾರಿ ಭೇಟಿ

ಮಡಿಕೇರಿ:-ಪ್ರವಾಸಿಗರ ಕೇಂದ್ರ ಬಿಂದು ರಾಜಾಸೀಟು ಉದ್ಯಾನವನಕ್ಕೆ ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್ ಅವರು ಶುಕ್ರವಾರ ಭೇಟಿ ನೀಡಿ ವೀಕ್ಷಿಸಿದರು.

ಹಾಗೆಯೇ ಗ್ರೇಟರ್ ರಾಜಾಸೀಟು, ಪುಟಾಣಿ ರೈಲು ಮಾರ್ಗ ಮತ್ತು ಕೂರ್ಗ್ ವಿಲೇಜ್‌ಗೆ ತೆರಳಿ ಅಭಿವೃದ್ಧಿ ಸಂಬಂಧ ಮಾಹಿತಿ ಪಡೆದರು. ರಾಜಸೀಟು ಉದ್ಯಾನವನ ಬಳಿಯ ಟಿಕೇಟ್ ಕೌಂಟರ್, ಮಾಹಿತಿ ಕೇಂದ್ರ ಹಾಗೂ ಉದ್ಯಾನವನದೊಳಗೆ ಸಿಸಿಟಿವಿ ಹಾಗೂ ಗೇಟ್ ಅನ್ನು ಪರಿಶೀಲಿಸಿದರು.

ಉದ್ಯಾನವನ ಸುತ್ತಲೂ ಸಿಸಿಟಿವಿ ವೈರ್ ಹಾಗೂ ವಿದ್ಯುತ್ ತಂತಿಗಳಿಂದ ಕೂಡಿದ್ದು, ಉದ್ಯಾನವನದ ಸೌಂದರ್ಯ ಹಾಳಾಗಿದೆ. ಆದ್ದರಿಂದ ಕೂಡಲೇ ಎಲ್ಲಾ ದುರಸ್ತಿ ಕಾರ್ಯ ಹಾಗೂ ಭೂಮಿಯ ಒಳಭಾಗದಲ್ಲಿ ತಂತಿ ಅಳವಡಿಸುವುದು ಹಾಗೂ ದೀಪಗಳನ್ನು ದುರಸ್ತಿಪಡಿಸಿ ಅಲಂಕಾರಿಕಾ ದೀಪಗಳನ್ನು ಅಳವಡಿಸುವುದು ಸೇರಿದಂತೆ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವಂತೆ ತೋಟಗಾರಿಕೆ ಉಪ ನಿರ್ದೇಶಕರಿಗೆ ಜಿಲ್ಲಾಧಿಕಾರಿ ಅವರು ನಿರ್ದೇಶನ ನೀಡಿದರು. ಪ್ರವಾಸಿಗರ ಆಕರ್ಷಣೀಯ ಕೇಂದ್ರವಾದ ರಾಜಾಸೀಟು ಬಳಿಯಲ್ಲಿ ಪುಟಾಣಿ ರೈಲು ಆರಂಭಕ್ಕೆ ಅಗತ್ಯ ಕ್ರಮವಹಿಸುವಂತೆ ಇದೇ ಸಂದರ್ಭದಲ್ಲಿ




ಜಿಲ್ಲಾಧಿಕಾರಿ ಅವರು ಸೂಚಿಸಿದರು.

ಕೂರ್ಗ್ ವಿಲೇಜ್ ನಲ್ಲಿರುವ ಮಳಿಗೆ ವೀಕ್ಷಿಸಿದ ಜಿಲ್ಲಾಧಿಕಾರಿ ಅವರು ಈ ಮಳಿಗೆ ಪ್ರದೇಶದಲ್ಲಿ ಮಾವು ಮೇಳ, ಫಲಪು? ಪ್ರದರ್ಶನ ಮತ್ತು ಇತರೆ ಇಲಾಖೆಗಳಲ್ಲಿ ನಡೆಸುವ ಮೇಳಗಳನ್ನು ಆಯೋಜಿಸಲು ಇಲಾಖೆಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಎಸ್.ಜೆ.ಸೋಮಶೇಖರ್ ಅವರು ನಿರ್ದೇಶನ ನೀಡಿದರು.ತೋಟಗಾರಿಕೆ ಇಲಾಖೆ ಉಪ ನಿರ್ದೇಶಕರಾದ ಶಶಿಧರ ಅವರು ರಾಜಾಸೀಟು ಉದ್ಯಾನವನ ಅಭಿವೃದ್ಧಿ, ಗ್ರೇಟರ್ ರಾಜಾಸೀಟು ಬೆಳವಣಿಗೆ ಹಾಗೆಯೇ ಕೂರ್ಗ್ ವಿಲೇಜ್ ಅಭಿವೃದ್ಧಿ ಸಂಬಂಧಿಸಿದಂತೆ ಮಾಹಿತಿ ನೀಡಿದರು. ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕರಾದ ಮುತ್ತಪ್ಪ ಇತರರು ಇದ್ದರು.

# ಕಣ್ಣು ಪ್ರತಿಯೊಬ್ಬರಿಗೂ ಪ್ರಮುಖವಾದ ಅಂಗ



ಸಾಲಿಗ್ರಾಮ: ಕಣ್ಣು ಪ್ರತಿಯೊಬ್ಬರಿಗೂ ಪ್ರಮುಖವಾದ ಅಂಗವಾಗಿದೆ ಎಂದು ಸಮುದಾಯ ಆರೋಗ್ಯ ಕೇಂದ್ರದ ವೈದ್ಯ ಡಾ.ಕೀರ್ತಿ ಹೇಳಿದರು.

ಅವರು ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಕರುನಾಡ ದೀಪ ಸೇವಾ ಟ್ರಸ್ಟ್, ಗ್ರಾಮೀಣ ನಿಧಿ ಸೌಹಾರ್ದ ಕೋ ಆಪರೇಟಿವ್ ಸೊಸೈಟಿ, ಬೆಂಗಳೂರಿನ ಶಂಕರ ಕಣ್ಣಿನ ಆಸ್ಪತ್ರೆ, ಜಿಲ್ಲಾ ಅಂಧತ್ವ ನಿಯಂತ್ರಣ ವಿಭಾಗ, ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಉಚಿತ ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರದಲ್ಲಿ ಪಾಲ್ಗೊಂಡು ಮಾತನಾಡಿದರು.

ಗ್ರಾಮೀಣ ಪ್ರದೇಶದಲ್ಲಿನ ಜನರು ತಮ್ಮ ಬದುಕಿನ ದಿನನಿತ್ಯದ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವಾಗ ಕಣ್ಣಿನ ಬಗ್ಗೆ ಅತಿಹೆಚ್ಚಿನ ಜಾಗೃತಿ ವಹಿಸಬೇಕಾದ ಅಗತ್ಯತೆ ಪ್ರಮುಖವಾಗಿದೆ. ಮಕ್ಕಳು ಆಟವಾಡುವ ಸಮಯದಲ್ಲಿ ಅವರುಗಳ ಮೇಲೆ ಪೋಷಕರುಗಳು ಸದಾ ಎಚ್ಚರಿಕೆ ವಹಿಸಬೇಕು. ಇಲ್ಲದಿದ್ದರೆ ಅವಘಡಗಳು ಸಂಭವಿಸುವ ಸಾಧ್ಯತೆ ಇರುತ್ತದೆ ಎಂದರು. ಆರೋಗ್ಯಕ್ಕೆ ಸಂಬಂಧಿಸಿದಂತೆ ಯಾವುದೇ ವಿಷಯಕ್ಕೂ ಯಾರೂ ಕೂಡ ಎಂತಹ ಸಂದರ್ಭದಲ್ಲಿಯೂ ತಾತ್ಸರ ತೋರದೆ ಕೂಡಲೇ ವೈದ್ಯರ ಭೇಟಿ ಮಾಡಿ ಅವರಿಂದ ಸಲಹೆಯನ್ನು ಪಡೆದು ಆರೋಗ್ಯದ ಕಡೆಗೆ ಹೆಚ್ಚಿನ ಗಮನವನ್ನು ಹರಿಸಬೇಕು ಎಂದರು.

ಸಂಘ ಸಂಸ್ಥೆಗಳು ಆರೋಗ್ಯಕ್ಕೆ ಸಂಬಂಧಿಸಿದಂತಹ ವಿವಿಧ ಉಚಿತ ಶಿಬಿರಗಳನ್ನು ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಿನ ಮಟ್ಟದಲ್ಲಿ ಮಾಡುವ ಮೂಲಕ ಗ್ರಾಮಾಂತರ ಪ್ರದೇಶದ ಜನರಿಗೆ ಉತ್ತಮ ಆರೋಗ್ಯ ಸೇವೆಯು ಸಿಗುವಂತೆ ಮಾಡಬೇಕು ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಕರುನಾಡ ದೀಪ ಸೇವಾ ಟ್ರಸ್ಟ್ ಅಧ್ಯಕ್ಷ ಕೆ.ಟಿ.ಮೋಹನ್ ಕುಮಾರ್, ಗ್ರಾಮೀಣ ನಿಧಿ ಸೌಹಾರ್ದ ಕೋ ಆಪರೇಟಿವ್ ಸೊಸೈಟಿ ಅಧ್ಯಕ್ಷ ಕೆ.ಆರ್.ಶ್ಯಾಮಸುಂದರ್, ಗ್ರಾ.ಪಂ. ಮಾಜಿ ಉಪಾಧ್ಯಕ್ಷ ಚಿಕ್ಕನಾಯಕನಹಳ್ಳಿ ವಾಸು, ವೀರಶೈವ ಲಿಂಗಾಯತ ಮಹಾಸಭಾದ ದಡದಹಳ್ಳಿನಟರಾಜ್, ಆರೋಗ್ಯ ರಕ್ಷಾ ಸಮಿತಿ ಸದಸ್ಯರಾದ ಲಕ್ಕಿಕುಪ್ಪೆ ಮಂಜೇಗೌಡ, ದಿನೇಶ್, ಮುಖಂಡ ಕರ್ತಾಳು ಧರ್ಮೇಶ್, ಗ್ರಾಮೀಣ ನಿಧಿ ಸೌಹಾರ್ದ ಕೋ ಆಪರೇಟಿವ್ ಸೊಸೈಟಿಯ ನಿರ್ದೇಶಕರಾದ ಎಂ.ಎಸ್.ನರಸಿಂಹ, ಮಂಜುನಾಥ, ಕುಮಾರ್, ಸಿಇಒ ಸಿಂಧೂ ಮಂಜುನಾಥ್, ಮಮತ, ಶಂಕರ ಕಣ್ಣಿನ ಆಸ್ಪತ್ರೆಯ ಶ್ರೀಕಂಠಮೂರ್ತಿ, ತೇಜ, ಫರಿದಾ, ಹರೀಶ್, ಮೋಹನ್, ಶಿವು, ನೇತ್ರಾಧಿಕಾರಿ ಕೆ.ಎಸ್.ಶೇಖರ್, ಆಸ್ಪತ್ರೆಯ ನೌಕರರು ಹಾಗೂ ಸಿಬ್ಬಂದಿ ವರ್ಗದವರು ಇದ್ದರು.



**ರಾಮನಗರದ ಶ್ರೀ ಕನ್ನಿಕಾ ಪರಮೇಶ್ವರಿ ಅಮ್ಮನವರಿಗೆ ಶ್ರೀರಾಮನವಮಿ ಹಿನ್ನಲೆಯಲ್ಲಿ ಶ್ರೀರಾಮನ ಅಲಂಕಾರ ನೆರವೇರಿ ಸಲಾಗಿತ್ತು.**

# ಪ್ರಕರಣಗಳ ವಿಲೇವಾರಿ ಮಾಡಿ

## ದೌರ್ಜನ್ಯ ಪ್ರಕರಣ: ತ್ವರಿತ ಕ್ರಮಕ್ಕೆ ಜಿಲ್ಲಾಧಿಕಾರಿ ಶ್ರೀರೂಪ ಸೂಚನೆ

ಚಾಮರಾಜನಗರ: ಜಾತಿ, ಪರಿಶಿಷ್ಟ ಪಂಗಡಗಳ ಬಾಕಿ ಇರುವ ದೌರ್ಜನ್ಯ ಪ್ರಕರಣಗಳ ತ್ವರಿತ ವಿಲೇವಾರಿಗೆ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಶ್ರೀರೂಪ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ದೌರ್ಜನ್ಯಕ್ಕೆ ಒಳಗಾದವರು ಸಂಕಷ್ಟದಲ್ಲಿದ್ದು, ಅಂತಹವರಿಗೆ ಯಾವುದೇ ವಿಳಂಬಕ್ಕೆ ಅವಕಾಶವಾಗದಂತೆ ಪರಿಹಾರ ಹಾಗೂ ಸಾಮಾಜಿಕ ನ್ಯಾಯ ತಲುಪಿಸುವ ಕೆಲಸವಾಗಬೇಕು. ಪರಿಶಿಷ್ಟ ಜಾತಿ, ಪರಿಶಿಷ್ಟ ಸಮುದಾಯದ ಜನರ ದೌರ್ಜನ್ಯ ಪ್ರಕರಣಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಕಾಲಮಿತಿಯಲ್ಲಿ ಪರಿಹರಿಸಬೇಕು. ಕೆಲ ಪ್ರಕರಣಗಳು ಸಾಕಷ್ಟು ವರ್ಷಗಳಿಂದ ಬಾಕಿ ಉಳಿದಿದ್ದು, ಅಂತಹ ಪ್ರಕರಣಗಳ ಶೀಘ್ರ ಇತ್ಯರ್ಥಕ್ಕೆ ಮುಂದಾಗುವಂತೆ ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

ಬಾಕಿ ಇರುವ ದೌರ್ಜನ್ಯ ಪ್ರಕರಣಗಳ ಶೀಘ್ರ ಪರಿಹಾರಕ್ಕಾಗಿ ಖಾಯಂ ಸರ್ಕಾರಿ ಅಭಿಯೋಜಕರ ಅವಶ್ಯವಿದೆ. ಪ್ರಸ್ತುತ ಸರ್ಕಾರಿ ಅಭಿಯೋಜಕರು ಪ್ರಭಾರದಲ್ಲಿದ್ದು, ಸಿಬ್ಬಂದಿ ಕೊರತೆಯಿಂದ ದೌರ್ಜನ್ಯ ಪ್ರಕರಣಗಳ ಇತ್ಯರ್ಥದಲ್ಲಿ ವಿಳಂಬವಾಗುತ್ತಿದೆ. ಇದರ ಪರಿಹಾರಕ್ಕಾಗಿ ಮುಂದಿನ ದಿನಗಳಲ್ಲಿ ಜಿಲ್ಲಾಡಳಿತದಿಂದ ಖಾಯಂ ಅಭಿಯೋಜಕರನ್ನು ನೇಮಕ ಮಾಡಿಕೊಳ್ಳಲಾಗುತ್ತದೆ. ಖಾಯಂ ಅಭಿಯೋಜಕರ ನೇಮಕಾತಿಗೆ ಕಾನೂನಿನಲ್ಲಿ ಅವಕಾಶವಿದೆ ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮುತ್ತುರಾಜು, ಉಪ ವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾದ ಮುನಿರಾಜು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರಾದ ಅರಕಲವಾಡಿ ನಾಗೇಂದ್ರ, ಕೇತಮ್ಮ, ರಮೇಶ್, ರಜನಿ ತಿವಾರಿ, ಅರ್ಪಿತಾ, ಸಿದ್ದರಾಜು, ವೃಷಭೇಂದ್ರಪ್ಪ, ಎಲ್ಲ ತಾಲೂಕುಗಳ ಸಮಾಜ ಕಲ್ಯಾಣಾಧಿಕಾರಿಗಳು, ಸರ್ಕಾರಿ ಅಭಿಯೋಜಕರು, ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.



### ನೊಂದವರಿಗೆ ನ್ಯಾಯ ದೊರಕಲಿ

ಜಿಲ್ಲೆಯಲ್ಲಿ ಬಾಕಿ ಇರುವ ದೌರ್ಜನ್ಯ ಪ್ರಕರಣಗಳ ತಾಲೂಕುವಾರು ಮಾಹಿತಿಯನ್ನು ಸಂಬಂಧಪಟ್ಟ ಅಧಿಕಾರಿಗಳು ನೀಡಬೇಕು. ಪ್ರಕರಣಗಳ ವಿಚಾರಣೆಗಾಗಿ ಸಂತ್ರಸ್ಥರು ನ್ಯಾಯಾಲಯಕ್ಕೆ ಹಾಜರಾಗುತ್ತಿದ್ದಾರೆಯೇ ಅಥವಾ ಇಲ್ಲವೇ ಎಂಬುದನ್ನು ತಾಲೂಕು ಸಮಾಜ ಕಲ್ಯಾಣಾಧಿಕಾರಿಗಳು ಖುದ್ದು ಪರಿಶೀಲಿಸಿ ಸಂತ್ರಸ್ಥರು ಕೋರ್ಟ್‌ಗೆ ಹೊಗಿಬರಲು ವ್ಯವಸ್ಥೆ ಮಾಡಿಕೊಡಬೇಕು. ಪ್ರಕರಣಗಳ ತ್ವರಿತ ಪರಿಹಾರದಿಂದ ನೊಂದವರಿಗೆ ನ್ಯಾಯ ದೊರಕಲಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

### ಜಾಗೃತಿ ಮೂಡಿಸಿ

ದೌರ್ಜನ್ಯ ಪ್ರಕರಣಗಳನ್ನು ತಡೆಯಲು ಜಿಲ್ಲಾದ್ಯಂತ ಅರಿವು ಕಾರ್ಯಕ್ರಮಗಳನ್ನು ಹೆಚ್ಚಾಗಿ ಆಯೋಜಿಸಿ ಕಾನೂನಿನ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು. ಕಾರ್ಯಕ್ರಮಗಳ ಆಯೋಜನೆ ಸಂದರ್ಭದಲ್ಲಿ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರಿಗೂ ಮಾಹಿತಿ ತಿಳಿಸಬೇಕು. ಸ್ಥಳೀಯವಾಗಿ ಸಮಿತಿ ಸದಸ್ಯರನ್ನು ಒಳಗೊಂಡಂತೆ ಕಾರ್ಯಕ್ರಮಗಳನ್ನು ನಡೆಸಿ ಜನಜಾಗೃತಿ ಮೂಡಿಸಬೇಕು ಎಂದರು.

### ಸ್ಮಶಾನದ ಸಮಸ್ಯೆ ಇರುವ ಕಡೆ ಜಾಗ ಗುರುತಿಸಿ

ಪರಿಶಿಷ್ಟ ಸಮುದಾಯಗಳ ಜನರಿಗೆ ಸ್ಮಶಾನದ ಸಮಸ್ಯೆ ಇರುವ ಕಡೆ ಜಾಗ ಗುರುತಿಸಿ ಮುಂಜೂರು ಮಾಡಲು ಕ್ರಮ ವಹಿಸುವಂತೆ ಆಯಾ ತಾಲೂಕು ತಹಶೀಲ್ದಾರರಿಗೆ ಈಗಾಗಲೇ ಸೂಚಿಸಲಾಗಿದೆ. ಸುಳ್ವಾಡಿ ಸಂತ್ರಸ್ಥರಿಗೆ ನಿವೇಶನ ಮಂಜೂರಾ ಗಿದ್ದು, ಜೀವನ ಕಟ್ಟಿಕೊಳ್ಳಲು ಭೂಮಿ ನೀಡಬೇಕೆಂಬ ಬೇಡಿಕೆಯನ್ನು ಪರಿಶೀಲಿಸಲಾಗುವುದು. ಆರೋಗ್ಯ ಇಲಾಖೆಯಿಂದ ನಿಯಮಿತವಾಗಿ ಆರೋಗ್ಯ ತಪಾಸಣೆ ನಡೆಸಿ ಸೂಕ್ತ ಚಿಕಿತ್ಸೆ ನೀಡಲು ಕೌನ್ಸಲಿಂಗ್ ಮಾಡಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

# ನಮಲ್ಲಿ ಪೆಟ್ರೋಲ್, ಡೀಸೆಲ್ ಕೊರತೆಯಿಲ್ಲ




ಮೈಸೂರು: ನಮ್ಮ ವ್ಯಾಪ್ತಿಯ ಎಲ್ಲಾ ಪ್ರದೇಶ ಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಸೇರಿ ಪೆಟ್ರೋ ಲಿಯಂ ಉತ್ಪನ್ನಗಳು ಸಮರ್ಪಕವಾಗಿ ಲಭ್ಯವಿದೆ. ಯಾವುದೇ ಕೊರತೆ ಇರುವುದಿಲ್ಲ ಎಂದು ಮೈಸೂರು ಪೆಟ್ರೋಲಿಯಂ ವ್ಯಾಪಾರಿಗಳ ಒಕ್ಕೂಟ ಸ್ಪಷ್ಟಪಡಿಸಿದೆ.

ಮೈಸೂರು ಪೆಟ್ರೋಲಿಯಂ ವರ್ತಕರ ಒಕ್ಕೂಟದ ಅಧ್ಯಕ್ಷರಾದ ಶಶಿಕಲಾ ನಾಗರಾಜ್ ಈ ಕುರಿತು ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ನಮಗೆ ಭಾರತ ಸರ್ಕಾರ, ಪೆಟ್ರೋಲಿಯಂ ಮತ್ತು ಪ್ರಕೃತಿ ಅನಿಲ ಸಚಿವಾಲಯ ಹಾಗೂ ಎಲ್ಲಾ ಆಯಿಲ್ ಮಾರ್ಕೆಟಿಂಗ್ ಕಂಪನಿಗಳಿಂದ ಸಂಪೂರ್ಣ ಸಹಕಾರ ಮತ್ತು ನಿರಂತರ ಪೂರೈಕೆ ದೊರೆಯುತ್ತಿದೆ. ಇದರಿಂದ ಎಲ್ಲಾ ಪೆಟ್ರೋಲ್ ಬಂಕ್‌ಗಳಲ್ಲಿ ಸರಾಗವಾಗಿ ಇಂಧನ ಲಭ್ಯವಾಗು ತ್ತಿದೆ. ಹಾಗಾಗಿ ಯಾರೂ ಯಾವುದೇ ಕಾರಣಕ್ಕೂ ಆತಂಕಕ್ಕೆ ಒಳಗಾಗುವ ಅವಶ್ಯಕತೆ ಇಲ್ಲ. ಜತೆಗೆ ನಮ್ಮ ಒಕ್ಕೂಟದ ಡೀಲರ್‌ಗಳು ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ನಿರಂತರವಾಗಿ ಶ್ರಮಿಸುತ್ತಿದ್ದು, ಅಗತ್ಯ ಸೇವೆಯನ್ನು ಒದಗಿಸಲು ಬದ್ಧವಾಗಿದ್ದಾರೆ ಎಂದು ಹೇಳಿದರು. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು, ಅವಸರದಲ್ಲಿ ಇಂಧನ ಖರೀದಿ ಮಾಡುವುದನ್ನು ತಪ್ಪಿಸಬೇಕು ಎಂದು ಮನವಿ ಮಾಡಿದ ಅವರು, ಇಂಧನವನ್ನು ಅನಾವಶ್ಯಕವಾಗಿ ಸಂಗ್ರಹಿಸಿಕೊಳ್ಳುವುದು ಕಾನೂನು ಬಾಹಿರವಾಗುತ್ತದೆ. ಅಲ್ಲದೇ ಅಸುರಕ್ಷಿತ ಪಾತ್ರೆಗಳಲ್ಲಿ ಇಂಧನವನ್ನು ಸಂಗ್ರಹಿಸುವುದು ದೊಡ್ಡ ಅಗ್ನಿ ಅಪಾಯಕ್ಕೆ ಕಾರಣವಾಗಬಹುದು ಎಂದು ಅವರು ಸಲಹೆ ಹಾಗೂ ಎಚ್ಚರಿಕೆ ನೀಡಿ ದರು. ಸುದ್ದಿಗೋಷ್ಠಿಯಲ್ಲಿ ಮನೋಜ್‌ಕುಮಾರ್, ಮಂಜಿತ್ ಹೆಗಡೆ, ಬಸವೇಗೌಡ, ಲೋಕೇಶ್ ಹಾಗೂ ಭಗವಾನ್ ಹಾಜರಿದ್ದರು.

# ಶ್ರೀ ರಾಮನವಮಿ ಆಚರಣೆ

ಗುಂಡ್ಲುಪೇಟೆ: ಶ್ರೀ ರಾಮನವಮಿ ಈ ಹಬ್ಬದ ಪ್ರಯುಕ್ತ ಗುಂಡ್ಲುಪೇಟೆ ಪಟ್ಟಣದ ವಿವಿಧ ಬಾಗದಲ್ಲಿ ರಾಮಭಕ್ತರಿಗೆ ಸಾರ್ವಜನಿಕರಿಗೆ ಪಾನಕ, ಮಜ್ಜಿಗೆ, ಬಾತು ಮೊಸರನ್ನ ವಿತರಿಸಲಾಯಿತು.

ಪಟ್ಟಣದ ಕಿತ್ತೂರಾಣಿ ಚೆನ್ನಮ್ಮ ಮುಖ್ಯ ರಸ್ತೆಯಲ್ಲಿರುವ 14ನೇ ಶತಮಾನದ ಸೀತಾ ಲಕ್ಷ್ಮಣ ಸಮೇತ ಶ್ರೀ ಕೋದಂಡರಾಮ ದೇವಾಲಯದಲ್ಲಿ ಬೆಳಗಿನ ಜಾವ ದಿಂದಲೇ ಶ್ರೀರಾಮನಿಗೆ ಎಣ್ಣೆಯಿಂದ ಸ್ನಾನ ನಂತರ ಮಂಗಳಾರತಿ ಮಾಡಿಸಿ ನೂತನ ವಸ್ತ್ರಗಳಿಂದ ಆಭರಣಗಳಿಂದ ಅಲಂಕರಿಸಿ ಭಕ್ತಾದಿಗಳಿಂದ ರಥೋತ್ಸವ ನಡೆಯುತಿತ್ತು ಅದರೆ ಅದು ನಿಂತಿದ್ದು 50ನೇ ವರ್ಷದಿಂದ ರಥೋತ್ಸವ ಮಾಡುವುದಾಗಿ ಸಂಕಲ್ಪ ಮಾಡಿಸಲಾಯಿತು ನಂತರ ಮಹಾಮಂಗಳಾರತಿ ಮಾಡಿ ನೇರದ ಭಕ್ತಾದಿಗಳಿಗೆ ಪಾನಕ ಕೋಸಂಬರಿಯನ್ನು ವಿತರಿಸಲಾಯಿತು. ಪಟ್ಟಣದ ಸುರಭಿ ಬಳಿ, ವೀರ ಮದಕರಿ ವೃತ್ತ,ಸೇರಿದಂತೆ ಹಲವೆಡೆ ಬಾತು ಮೊಸರನ್ನ ಒಅನಕ, ಮಜ್ಜಿಗೆ ಕೋಸಂಬರಿ ವಿತರಿಸಲಾಯಿತು.



# ದೇವಸ್ಥಾನ ಪ್ರತಿಷ್ಠಾಪನೆ ಕಾರ್ಯಕ್ರಮ


ಹನೂರು: ತಾಲೂಕಿನ ಪೊನ್ನಾಚಿ ಗ್ರಾಪಂ ವ್ಯಾಪ್ತಿಯ ಅಸ್ತೂರು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ಶನೇಶ್ವರ ಶ್ರೀ ಪಡಗಲ್ಲು ಮಹದೇಶ್ವರ, ಶ್ರೀ ಜಡೆ ಸ್ವಾಮಿ ದೇವಸ್ಥಾನ ಪ್ರತಿಷ್ಠಾಪನೆಯ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಆರ್ ನರೇಂದ್ರ ಭಾಗಿಯಾಗಿ ವಿಶೇಷ ಪೂಜೆ ಸಲ್ಲಿಸಿದರು.

ದೇವಸ್ಥಾನಕ್ಕೆ ಭೇಟಿ ನೀಡಿದ ವೇಳೆ ಗ್ರಾಮಸ್ಥರು ಆತ್ಮೀಯವಾಗಿ ಬರಮಾಡಿಕೊಂಡರು ವಿಶೇಷ ಪೂಜೆ ಸಲ್ಲಿಸಿದ ನಂತರ ಗೌರವ ಸಮರ್ಪಿಸಿದರು. ನಂತರ ಮಾಜಿ ಶಾಸಕ ಆರ್ ನರೇಂದ್ರ ಮಾತನಾಡಿ ಪವಾಡ ಪುರುಷ ಮಲೆ ಮಹದೇಶ್ವರ ಸ್ವಾಮಿ ನಡೆದಾಡಿದ ಈ ಪುಣ್ಯಕ್ಷೇತ್ರದಲ್ಲಿ ನೂತನ ದೇವಸ್ಥಾನ ಮಾಡಿರುವುದು ಸಂತಸ ತಂದಿದೆ. ಹನೂರು ವಿಧಾನಸಭಾ ಕ್ಷೇತ್ರವು ಪವಾಡ ಪುರುಷರ ಪ್ರಸಿದ್ಧ ತಾಣವಾಗಿದೆ. ಮಲೆ ಮಹದೇಶ್ವರ ಬೆಟ್ಟಕ್ಕೆ ಇತ್ತೀಚಿನ ದಿನಗಳಲ್ಲಿ ಲಕ್ಷಾಂತರ ಮಂದಿ ಭಕ್ತಾದಿಗಳು ಭೇಟಿ ನೀಡಿ ಸ್ವಾಮಿಯ ದರ್ಶನ ಪಡೆದು ತಮ್ಮ ಹರಕೆಗಳನ್ನು ಸಲ್ಲಿಸಿದ್ದಾರೆ. ಪವಾಡ ಪುರುಷ ಮಲೆ ಮಹದೇಶ್ವರ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಸಮಾಜಕ್ಕೆ ಮಾದರಿ ವ್ಯಕ್ತಿಯಾಗಬೇಕಿದೆ. ಅದೇ ರೀತಿ ಪ್ರತಿ ವರ್ಷ ನಡೆಯುವ ಚಿಕ್ಕಲೂರು ಜಾತ್ರಾ ಮಹೋತ್ಸವದಲ್ಲಿಯೂ ಲಕ್ಷಾಂತರ ಜನರು ಭೇಟಿ ನೀಡಿ ತಮ್ಮ ಸೇವೆ ಸಲ್ಲಿಸುತ್ತಿದ್ದಾರೆ. ಇದಲ್ಲದೆ ಮಧ್ಯರಂಗ, ಪ್ರಸನ್ನ ಮೀನಾಕ್ಷಿ ದೇವಾಲಯ ಶಿಂಷಾ ಮಾರಮ್ಮ, ಹಲವು ಪ್ರಸಿದ್ಧ ದೇವಸ್ಥಾನಗಳಿಗೆ ರಾಜ್ಯದ ವಿವಿಧ ಮೂಲೆಗಳಿಂದ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುತ್ತಿದ್ದಾರೆ. ಈ ಪ್ರವಾಸಿ ತಾಣಗಳನ್ನು



ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿಗಳ ಗಮನಕ್ಕೆ ತಂದು ಅಭಿವೃದ್ಧಿಪಡಿಸಲಾಗುವುದು ಎಂದರು. ನಮ್ಮ ಹಿಂದೂ ಸಂಸ್ಕೃತಿಯಲ್ಲಿ ಎಲ್ಲಾ ದೇವರನ್ನು ಪೂಜಿಸುವುದು ಸಂಪ್ರದಾಯ, ಅದೇ ರೀತಿ ನಮ್ಮ ಮಕ್ಕಳಿಗೂ ಶಿಕ್ಷಣ ಕೊಡಿಸುವುದರ ಮೂಲಕ ಶಿಕ್ಷಿತರನ್ನಾಗಿ ಮಾಡಬೇಕು ಪೂಜೆ ಮಾಡುವುದು ಒಂದು ಕಡೆಯಾದರೆ ಶಿಕ್ಷಣ ಕೊಡಿಸುವುದು ಅಷ್ಟೇ ಮುಖ್ಯವಾಗಿದೆ. ಎಂದರು. ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಪುರಾತನ ದೇವಾಲಯಗಳನ್ನು ನಾನು ಶಾಸಕನಾಗಿ ಆಯ್ಕೆಯಾಗಿದ್ದ ಸಂದರ್ಭದಲ್ಲಿ ಕೋಟ್ಯಾಂತರ ರೂಪಾಯಿ ಅನುದಾನ ನೀಡಿ ಅಭಿವೃದ್ಧಿಪಡಿಸಿದ್ದೇನೆ. ಕ್ಷೇತ್ರ ವ್ಯಾಪ್ತಿಯ ಪ್ರತಿ ಗ್ರಾಮಗಳಲ್ಲಿ ವಿವಿಧ ಸಮುದಾಯದವರು ನಿರ್ಮಾಣ ಮಾಡಿರುವ ದೇವಸ್ಥಾನಗಳಿಗೆ ಪುರಾತತ್ವ ಇಲಾಖೆ ಹಾಗೂ ಶಾಸಕರ ಅನುದಾನದಲ್ಲಿ ಅಭಿವೃದ್ಧಿಪಡಿಸಿದ್ದೇನೆ ಎಂದರು. ಹಿರಿಯ ಮುಖಂಡ ಪೊನ್ನಾಚಿ ಮಹಾದೇವಸ್ವಾಮಿ, ಮುಖಂಡರಾದ ರಂಗಸ್ವಾಮಿ, ರವಿಕುಮಾರ್ ಇನ್ನಿತರರು ಹಾಜರಿದ್ದರು.

# ಕಾಮಗಾರಿಗೆ ಸಿ.ಪುಟ್ಟರಂಗಶೆಟ್ಟಿ ಭೂಮಿಪೂಜೆ



ಚಾಮರಾಜನಗರ, ತಾಲೂಕಿನ ಕೂತ್ತಲವಾಡಿ, ಕಟ್ನವಾಡಿ ಗ್ರಾಮದಲ್ಲಿ 1,50 ಲಕ್ಷರೂ, ವೆಚ್ಚದಲ್ಲಿ ರಸ್ತೆ, ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಭೂಮಿಪೂಜೆ ನೆರವೇರಿಸಿದರು

ನಂತರ ಮಾತನಾಡಿದ ಶಾಸಕರು ಕಟ್ನವಾಡಿ ಗ್ರಾಮದಲ್ಲಿ ಎಸ್,ಸಿ,ಪಿ ಯೋಜನಡಿಯಲ್ಲಿ ಪರಿಶಿಷ್ಟರ ಬೀದಿಗೆ ರಸ,ಚರಂಡಿ ಅಭಿವೃದ್ಧಿಗೆ 50, ಲಕ್ಷ ರೂ, ವಿಶೇಷ ಅಭಿವೃದ್ಧಿ ಅನುದಾನ ಯೋಜನೆಯಡಿಯಲ್ಲಿ ಕೂತ್ತಲವಾಡಿ ಗ್ರಾಮದ ಮಾರ್ಗವಾಗಿ ಗೂರುವಿನ ಪುರಕ್ಕೆ ,ಸಂಪರ್ಕ ಕಲ್ಪಿಸುವ ರಸ್ತೆ ಅಭಿವೃದ್ಧಿಗೆ ನಿರ್ಮಾಣಕ್ಕೆ 1 ಕೋಟಿ ರೂ ವೆಚ್ಚದಲ್ಲಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಲಾಗಿದೆ ಎಂದರು.

ತಮ್ಮ ಕೇತ್ರವ್ಯಾಪ್ತಿಯಲ್ಲಿ ಜನತೆಯ ಆಶಯಕ್ಕೆ ಬದ್ದರಾಗಿ ಗ್ರಾಮಗಳಲ್ಲಿ ರಸ್ತೆ ಚರಂಡಿ, ಸಮುದಾಯ ಭವನ ಆಶ್ರಯಮನೆ ಗಂಗಾ ಕಲ್ಯಾಣ ಯೋಜನೆ ಸೇರಿದಂತೆ ಸರಕಾರ ಮಂಜೂರು ಮಾಡುವ ಅನುದಾನ ಹಾಗೂ ಸೌಲಭ್ಯಗಳನ್ನು ಜನರಿಗೆ ಪ್ರಾಮಾಣಿಕವಾಗಿ ತಲುಪಿಸುವ ಕೆಲಸ ಮಾಡಲಾಗುತ್ತಿದೆ. ಕಾಮಗಾರಿ ನಿರ್ವಹಣೆ ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿಗೆ ಒತ್ತು ನೀಡಬೇಕು ಎಂದರು. ತಾ,ಪಂ ಮಾಜಿ ಅಧ್ಯಕ್ಷ ಶಾಂತಪ್ಪ, ಮುಖಂಡರಾದ ಸೋಮುಲಿಂಗಪ್ಪ, ಗೌಡಿಕೆರಾಜಶೇಖರ್,ಸೋಮಪ್ಪ,ಪುಟ್ಟಲಿಂಗಂಯ್ಯ, ಮಹದೇವಶೆಟ್ಟಿ, ಎ,ಎಸ್,ಗುರುಸ್ವಾಮಿ, ಉಡಿಗಾಲ ನಂಜಪ್ಪ, ನಾಗರಾಜು, ಬಿಸಲವಾಡಿ ರವಿ, ಗುರುಸ್ವಾಮಿ, ಸೋಮಣ್ಣ, ಮಹದೇವ ಪ್ರಸಾದ್, ದೂರಸ್ವಾಮಿ, ನಾಗಮಲ್ಲಪ್ಪ. ಶಿವನಂಜಪ್ಪ, ಇಂಜೀನಿಯರ್ ಮಧು, ಸೇರಿದಂತೆ ಗ್ರಾಮದ ಮುಖಂಡರು, ಗ್ರಾಮಸ್ಥರು ಹಾಜರಿದ್ದರು.

**ಶ್ರೀಕಾಂತ್ ಫುಲಾರಿ ಹೇಳಿಕೆ । ಪ್ರತಿಜ್ಞಾವಿಧಿ ಸ್ವೀಕಾರ ಸಮಾರಂಭ**

# ನರ್ಸಿಂಗ್ ವೃತ್ತಿಗೆ ದೇಶ, ವಿದೇಶದಲ್ಲೂ ಬೇಡಿಕೆ

ಚಾಮರಾಜನಗರ: ನಿಸ್ವಾರ್ಥ ಸೇವೆಯ ಸಂಕೇತವಾಗಿರುವ ನರ್ಸಿಂಗ್ ವೃತ್ತಿ ಒಂದುಪವಿತ್ರ ವೃತ್ತಿಯಾಗಿದ್ದು ಈ ವೃತ್ತಿಗೆ ದೇಶ, ವಿದೇಶದಲ್ಲೂ ಬೇಡಿಕೆ ಇದೆ ಎಂದು ಬೆಂಗಳೂರು ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ಸಹಾಯಕ ನಿರ್ದೇಶಕ ಶ್ರೀಕಾಂತ್ ಫುಲಾರಿ ಹೇಳಿದರು.

ನಗರದ ಡಾ.ರಾಜ್ ಕುಮಾರ್ ರಂಗಮಂದಿರದಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠ ಜೆಎಸ್‌ಎಸ್ ಕಾಲೇಜ್ ಆಫ್ ನರ್ಸಿಂಗ್ ಮತ್ತು ಜೆಎಸ್‌ಎಸ್ ಸ್ಕೂಲ್ ಆಫ್ ನರ್ಸಿಂಗ್ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಮುಚ್ಚಯ ವತಿಯಿಂದ ನಡೆದ ಪ್ರಥಮ ವರ್ಷದ ವಿದ್ಯಾರ್ಥಿಗಳಿಂದ ಜ್ಯೋತಿ ಬೆಳಗಿಸುವಿಕೆ ಮತ್ತು ಪ್ರತಿಜ್ಞಾವಿಧಿ ಸ್ವೀಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಸಕ್ತ ವರ್ಷದಲ್ಲಿ ಕರ್ನಾಟಕದಲ್ಲಿ 656 ನರ್ಸಿಂಗ್ ಕಾಲೇಜಿಗಳಲ್ಲಿ 40 ಸಾವಿರ ವಿದ್ಯಾರ್ಥಿಗಳನ್ನು ಪ್ರವೇಶ ಮಾಡಿಕೊಳ್ಳಲಾಗಿದೆ. ಖಾಸಗಿ ಶಾಲೆಗಳಲ್ಲೂ 40 ಸಾವಿರ ಪ್ರವೇಶ ಮಾಡಿಕೊಳ್ಳಲಾಗಿದ್ದು ಒಟ್ಟಾರೆ. ಪ್ರತಿ ವರ್ಷವೂ 80 ಸಾವಿರ ವಿದ್ಯಾರ್ಥಿಗಳು ನರ್ಸಿಂಗ್ ಕೋರ್ಸ್ ಪೂರ್ಣಗೊಳಿಸಿ ಹೊರಗಡೆ ಬರುತ್ತಿದ್ದಾರೆ.




ಆದರೂ ಕೂಡ ನರ್ಸಿಂಗ್ ಕೊರತೆಯಾಗಿದೆ. ರಾಜ್ಯ, ದೇಶ, ವಿದೇಶದಲ್ಲೂ ನರ್ಸಿಂಗ್ ವೃತ್ತಿಗೆ ಬೇಡಿಕೆವಿದೆ ಎಂದರು.

ಕರ್ನಾಟಕದಿಂದ ನರ್ಸ್‌ಗಳನ್ನು ಕಳುಹಿಸಿಕೊಡುವಂತೆ ಜರ್ಮನ್, ಇಟಾಲಿ, ಫ್ರಾನ್ಸ್ ಸೇರಿದಂತೆ ಬೇರೆಬೇರೆ ವಿದೇಶಗಳಿಂದಲ್ಲೂ ಬೇಡಿಕೆಗಳು ಬಂದಿದೆ. ಸರ್ಕಾರವೇ ವಿದೇಶಗಳಿಗೆ ಕಳುಹಿಸುವ ವ್ಯವಸ್ಥೆ. ಇದ್ದು, ಸರ್ಕಾರ ವಿದೇಶಿ ಉದ್ಯೋಗಗಳನ್ನು ನೀಡುತ್ತಿದೆ. ಆ ದೇಶದ ಭಾಷೆ ಗೊತ್ತಿದ್ದರೆ ಸಲೀಸಾಗಿ ಕೆಲಸ ಮಾಡಬಹುದು. ಸರ್ಕಾರವೇ ಬಜೆಟ್‌ನಲ್ಲಿ ಭಾಷಾ ಕಲಿಕೆಗೆ ಅನುದಾನ ಘೋಷಣೆ ಮಾಡಿದೆ. ಆಗಾಗಿ ನರ್ಸಿಂಗ್ ಮಾಡಿದವರಿಗೆ ಒಳ್ಳೆಯ ಭವಿಷ್ಯವಿದೆ. ತಾವೂ ಒಳ್ಳೆಯ ವೃತಿ ಆಯ್ಕೆ ಮಾಡಿಕೊಂಡಿದ್ದೀರಿ. ಪೋಷಕರು ನಿಮ್ಮ ಮಕ್ಕಳನ್ನು ಜಾಬ್ ಗೆ ಸೇರಿದ್ದಾರೆ ಎಂದು ತಿಳಿದುಕೊಳ್ಳಿ ಎಂದರು.

ಪ್ರತಿಷ್ಠಿತ ಕಾಲೇಜು ಆದ ಜೆಎಸ್‌ಎಸ್ ನರ್ಸಿಂಗ್ ಕಾಲೇಜಿನಲ್ಲಿ ಪ್ರವೇಶ ಪಡೆದಿದ್ದೀರಿ ಕಾಲೇಜಿನಲ್ಲಿ ಉತ್ತಮ ಭೋದನೆ ಸಿಗುತ್ತಿದೆ. ವಿದ್ಯಾರ್ಥಿಗಳು ಇಂತಹ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸಿಮ್ ಭೋಧನಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಚೆನ್ನಭೋವಿ, ಅಧ್ಯಕ್ಷತೆ ವಹಿಸಿದ್ದ ಮೈಸೂರು ಜೆಎಸ್‌ಎಸ್ ಮಹಾವಿದ್ಯಾಪೀಠದ ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್.ಮಹೇಶ್, ಸಿಮ್ಸ್ ಬೋಧನಾ ಆಸ್ಪತ್ರೆಯ ಪ್ರಭಾರ ಶುಶೂಷಕ ಅಧೀಕ್ಷಕಿ ಚಂದ್ರಕಲಾ ವಿ.ಶೇಷಾದ್ರಿ ಮಾತನಾಡಿದರು. ಕಾಲೇಜು ಪ್ರಾಂಶುಪಾಲ ವಿನಯ್ ಕುಮಾರ್ ಪ್ರತಿಜ್ಞಾವಿಧಿ ಭೋದಿಸಿದರು. ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ‘ಬೇಸಿಗೆ ಶಿಬಿರ’

**ತುಮಕೂರು:** ಜಿಲ್ಲಾ ಬಾಲಭವನ ಸಮಿತಿ ವತಿಯಿಂದ 2026–27ನೇ ಸಾಲಿನಲ್ಲಿ 5 ರಿಂದ 16ರ ವಯೋಮಾನದ ಮಕ್ಕಳಿಗಾಗಿ ಏಪ್ರಿಲ್ 15 ರಿಂದ 29ರವರೆಗೆ ಪ್ರತಿ ದಿನ ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ 15 ದಿನಗಳ “ಬೇಸಿಗೆ ಶಿಬಿರ”ವನ್ನು ಆಯೋಜಿಸಲಾಗಿದೆ.

ಆಸಕ್ತ ಪಾಲಕರು ಏಪ್ರಿಲ್ 9ರೊಳಗೆ ಜಿಲ್ಲಾ ಬಾಲಭವನ ಕಚೇರಿ, ಎಂ.ಜಿ. ರಸ್ತೆ, ತುಮಕೂರು ಇಲ್ಲಿ ಕಚೇರಿ ವೇಳೆಯಲ್ಲಿ ತಮ್ಮ ಮಕ್ಕಳ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಶಿಬಿರದಲ್ಲಿ 60 ಮಕ್ಕಳು ಮಾತ್ರ ಭಾಗವಹಿಸಲು ಅವಕಾಶವಿರುವುದರಿಂದ ಮೊದಲು ನೋಂದಾಯಿಸಿಕೊಂಡವರಿಗೆ ಮಾತ್ರ ಆದ್ಯತೆ ನೀಡಲಾಗುವುದಲ್ಲದೇ, ಅಗತ್ಯ ಸಂಖ್ಯೆ ಮೀರಿ ನೋಂದಾಯಿಸಿಕೊಳ್ಳುವುದಿಲ್ಲ.

ಸರ್ಕಾರಿ ಶಾಲಾ ಮಕ್ಕಳು, ಗ್ರಾಮೀಣ/ಹೋಬಳಿ ಮಟ್ಟದ ಮತ್ತು ಸೌಲಭ್ಯ ವಂಚಿತ ಮಕ್ಕಳಿಗೆ, ಸರ್ಕಾರಿ ಸುಧಾರಣಾ ಸಂಸ್ಥೆಗಳ ಬಾಲಕ/ಬಾಲಕಿಯರ ಬಾಲ ಮಂದಿರದ ಮಕ್ಕಳಿಗೆ ಹಾಗೂ ವಿಕಲಚೇತನ ಮಕ್ಕಳಿಗೆ ಬೇಸಿಗೆ ಶಿಬಿರದಲ್ಲಿ ವಿಶೇಷ ಆದ್ಯತೆ ನೀಡಲಾಗಿದೆ.

ಹೆಚ್ಚಿನ ವಿವರಗಳಿಗೆ ಸಂಚಾರಿ ದೂರವಾಣಿ ಸಂಖ್ಯೆ 9901890079ನ್ನು ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾ.30ರಂದು : ಮಾಂಸ ಮಾರಾಟ ನಿಷೇಧ

**ತುಮಕೂರು:** ಸರ್ಕಾರದ ಅಧಿಸೂಚನೆಯನ್ವಯ ಮಾರ್ಚ್ 30ರಂದು ಆಚರಿಸಲಾಗುವ ಮಹಾವೀರ ಜಯಂತಿ ಪ್ರಯುಕ್ತ ತುಮಕೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಮಾರ್ಚ್ 29ರ ಸಂಜೆ 5 ಗಂಟೆಯಿಂದ ಮಾರ್ಚ್ 30ರ ಮಧ್ಯರಾತ್ರಿ 12 ಗಂಟೆಯವರೆಗೆ ಮಾಂಸ ಮಾರಾಟ ನಿಷೇಧಿತ ದಿನವೆಂದು ಘೋಷಿಸಲಾಗಿದೆ. ಈ ಅವಧಿಯಲ್ಲಿ ಕಸಾಯಿಖಾನೆ ಮುಚ್ಚಲು ಹಾಗೂ ಮಾಂಸ ಮಾರಾಟ ಮಾಡುವುದಾಗಲಿ, ಸಂಗ್ರಹಣೆ ಮಾಡುವುದನ್ನು ನಿಷೇಧಿಸಿದೆ ಎಂದು ಪಾಲಿಕೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು(ಪರಿಸರ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ

**ತುಮಕೂರು:** ಕುಣಿಗಲ್ ತಾಲ್ಲೂಕು ಹುತ್ರಿದುರ್ಗ ಹೋಬಳಿ ಸೀಗೇಪಾಳ್ಯ ಗ್ರಾಮದ ಸುಮಾರು 48 ವರ್ಷದ ಲೋಕೇಶ್ ಎಂಬ ವ್ಯಕ್ತಿಯು ಫೆಬ್ರವರಿ 5ರಂದು ಕಾಣೆಯಾಗಿದ್ದಾನೆ ಎಂದು ಈತನ ಅಣ್ಣ ಚಂದ್ರಯ್ಯ ಕುಣಿಗಲ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಈತನು 5.5 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ಕೋಲು ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾನೆ. ಕಾಣೆಯಾದ ಸಂದರ್ಭದಲ್ಲಿ ಬಿಳಿ ಬಣ್ಣದ ಅಂಗಿ ಮತ್ತು ಪ್ಯಾಂಟ್ ಧರಿಸಿದ್ದನು. ಕಾಣೆಯಾದವನ ಬಗ್ಗೆ ಸುಳಿವು ಸಿಕ್ಕಲ್ಲಿ ದೂ.ವಾ.ಸಂ. 08132–220229, 0816–22272451ನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

## ಮಾ.29ರಂದು ವಿದ್ಯುತ್ ವ್ಯತ್ಯಯ

**ತುಮಕೂರು:** ಬೆಸ್ಕಾಂ ಗ್ರಾಮೀಣ ಉಪವಿಭಾಗ–2ರ ವ್ಯಾಪ್ತಿಯಲ್ಲಿ ಲಿಂಕ್ ಲೈನ್ ಕಾಮಗಾರಿ ಕೈಗೊಂಡಿರುವುದರಿಂದ ಮಾರ್ಚ್ 29ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ಹೆಬ್ಬೂರು, ಸಿರಿವರ, ಬಳ್ಳಗೆರೆ, ನಿಡುವಳಲು ಮತ್ತು ಕಣಕುಪ್ಪೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

## ಶ್ರೀರಾಮನವಮಿ ಜಯಂತಿ

**ತಿಪಟೂರು :** ತಾಲ್ಲೂಕಿನ ತಾಲ್ಲೂಕಿನ ಮತ್ತಿಹಳ್ಳಿ, ಬಿದರೆಗುಡಿ, ಹಾಲ್ಕುರಿಕೆ, ಕಿಬ್ಬನಹಳ್ಳಿ, ಚಿಕ್ಕಬಿದರೆ, ಸಾರ್ಥವಳ್ಳಿ, ರಂಗಾಪುರ, ಕರೀಕೆರೆ ಹಿಂಡಸ್ಕೆರೆ, ಬಿಳಿಗೆರೆ, ಈಚನೂರು, ನೋಣವಿನಕೆರೆ, ಬೆಸುಗೆ, ತೀಮ್ಲಾಪುರ, ಸೇರಿದಂತೆ ಹಲವು ಗ್ರಾಮದಲ್ಲಿ ಶ್ರೀರಾಮನವಮಿಯನ್ನು ಭಕ್ತಿ ಹಾಗೂ ಸಂಭ್ರಮವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ರಾಮಮಂದಿರಗಳು, ಹನುಮನ ದೇವಸ್ಥಾನಗಳು ಹಾಗೂ ಗ್ರಾಮಾಂತರ ಪ್ರದೇಶಗಳ ಅರಳಿಕಟ್ಟೆಗಳಲ್ಲಿ, ಗ್ರಾಮದ ಮಂದಿರಗಳಲ್ಲಿ ವಿಶೇ? ಪೂಜೆಗಳು ನೆರವೇರಿಸಲಾಯಿತು. ಪೂಜೆಯ ನಂತರ ಸಾರ್ವಜನಿಕರಿಗೆ ಪಾನಕ, ಕೋಸಂಬರಿ, ರಾಸಾಯಣ, ಫಲಾಹಾರ ಮತ್ತು ಮಜ್ಜಿಗೆ, ಪ್ರಸಾದವನ್ನು ವಿತರಿಸಲಾಯಿತು. ಹಾಗೂ ಕೆಲವು ಮಂದಿರಗಳಲ್ಲಿ ಭಜನೆ, ನಾಟಕಗಳನ್ನು ನಡೆಸಲಾಯಿತು.

### 2 ಲಕ್ಷಕ್ಕೂ ಅಧಿಕ ಭಕ್ತರು ಭಾಗಿ ನಿರೀಕ್ಷೆ | ಭದ್ರತೆಗೆ ಹೆಚ್ಚುವರಿ ಪೊಲೀಸ್ ಸಿಬ್ಬಂದಿ ನಿಯೋಜನೆ

# ಮೇಲುಕೋಟೆಯಲ್ಲಿ ವೈರಮುಡಿ ಬ್ರಹ್ಮೋತ್ಸವ

**ಮಂಡ್ಯ:** ಪ್ರಸಿದ್ಧ ಮೇಲುಕೋಟೆ ಶ್ರೀಚೆಲುವನಾರಾಯಣಸ್ವಾಮಿ ದೇವಾಲಯದಲ್ಲಿ ನಡೆಯುವ ವೈರಮುಡಿ ಬ್ರಹ್ಮೋತ್ಸವಕ್ಕೆ ಈ ಬಾರಿ ಸುಮಾರು 2 ಲಕ್ಷಕ್ಕೂ ಅಧಿಕ ಭಕ್ತರು ಆಗಮಿಸುವ ನಿರೀಕ್ಷೆಯಿದ್ದು, ಭದ್ರತೆ ಮತ್ತು ಸೌಲಭ್ಯಗಳ ದೃಷ್ಟಿಯಿಂದ ಜಿಲ್ಲಾಡಳಿತವು ಸಮಗ್ರ ಸಿದ್ಧತೆಗಳನ್ನು ಕೈಗೊಂಡಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ್ ತಿಳಿಸಿದ್ದಾರೆ.



ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಮಾರ್ಚ್ 23ರಿಂದ ಏಪ್ರಿಲ್ 4ರವರೆಗೆ ವೈರಮುಡಿ ಬ್ರಹ್ಮೋತ್ಸವ ನಡೆಯಲಿದ್ದು, ಅದರ ಪ್ರಮುಖ ಆಕರ್ಷಣೆಯಾದ ವೈರಮುಡಿ ಕಿರೀಟಧಾರಣೆ ಉತ್ಸವ ಮಾರ್ಚ್ 28ರಂದು ನಡೆಯಲಿದೆ ಎಂದು ಹೇಳಿದರು.

**ಭದ್ರತೆಗೆ ಕಟ್ಟು ನಿಟ್ಟಿನ ಕ್ರಮ**

ಉತ್ಸವದ ವೇಳೆ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು 1,210ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಹೆಚ್ಚುವರಿ ಪೊಲೀಸ್ ಅಧೀಕ್ಷಕರ ನೇತೃತ್ವದಲ್ಲಿ ಸಮಿತಿಯನ್ನು ರಚಿಸಿ ಭದ್ರತಾ ಮೇಲ್ವಿಚಾರಣೆ ಕೈಗೊಳ್ಳಲಾಗಿದೆ. ತುರ್ತು ಅವಘಡಗಳ ನಿರ್ವಹಣೆಗೆ ಅಗ್ನಿಶಾಮಕ ದಳದ ವಾಹನಗಳನ್ನೂ ನಿಯೋಜಿಸಲಾಗಿದೆ.

**ಸಾರಿಗೆ ಮತ್ತು ಪಾರ್ಕಿಂಗ್ ವ್ಯವಸ್ಥೆ**

ಭಕ್ತರ ಅನುಕೂಲಕ್ಕಾಗಿ ಕೆಎಸ್‌ಆರ್‌ಟಿಸಿ ವತಿಯಿಂದ ವಿವಿಧ ನಗರಗಳು ಮತ್ತು ಪಟ್ಟಣಗಳಿಂದ ಸುಮಾರು 140 ವಿಶೇಷ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ. ಮಂಡ್ಯದಿಂದ ನಿರಂತರ ಬಸ್ ಸೇವೆ ಹಾಗೂ ಮುಂಗಡ ಕಾಯ್ದಿರಿಸುವ ವ್ಯವಸ್ಥೆಯೂ ಲಭ್ಯವಿದೆ.

ವಾಹನ ದಟ್ಟಣೆ ನಿಯಂತ್ರಣಕ್ಕಾಗಿ ಮೇಲುಕೋಟೆ ಹೊರವಲಯದಲ್ಲಿ ಅನೇಕ ಸ್ಥಳಗಳಲ್ಲಿ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗಿದೆ. ದ್ವಿಚಕ್ರ ಮತ್ತು ನಾಲ್ಕು ಚಕ್ರ ವಾಹನಗಳಿಗೆ ಪ್ರತ್ಯೇಕವಾಗಿ ಹಲವು ಪಾರ್ಕಿಂಗ್ ಕೇಂದ್ರಗಳು ಸ್ಥಾಪಿಸಲಾಗಿದೆ. ಪಾರ್ಕಿಂಗ್ ಸ್ಥಳದಿಂದ ದೇವಾಲಯದವರೆಗೆ ಹಿರಿಯ ನಾಗರಿಕರು, ಗರ್ಭಿಣಿಯರು ಹಾಗೂ ಸಾರ್ವಜನಿಕರಿಗಾಗಿ ಉಚಿತ ಮಿನಿ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ.

**ದಾಸೋಹ ಮತ್ತು ಮೂಲ ಸೌಲಭ್ಯಗಳು**

ಭಕ್ತರಿಗೆ ದಾಸೋಹ ವ್ಯವಸ್ಥೆಯನ್ನು ಮಾರ್ಚ್ 28ರ ಬೆಳಿಗ್ಗೆ 8ರಿಂದ ಮಾರ್ಚ್ 29ರ ಬೆಳಿಗ್ಗೆ 8ರವರೆಗೆ ನಿರಂತರವಾಗಿ ಒದಗಿಸಲಾಗುತ್ತದೆ. ಪ್ರಮುಖ ಸ್ಥಳಗಳಲ್ಲಿ 52 ತಾತ್ಕಾಲಿಕ ಶೌಚಾಲಯಗಳು ಹಾಗೂ ಹೆಚ್ಚುವರಿ ಶಾಶ್ವತ ಶೌಚಾಲಯಗಳ ನಿರ್ಮಾಣವೂ ಕೈಗೊಳ್ಳಲಾಗಿದೆ.

**ಕುಡಿಯುವ ನೀರು ಮತ್ತು ಆರೋಗ್ಯ ಸೇವೆ**

ಪಾರ್ಕಿಂಗ್ ಸ್ಥಳಗಳು, ಕಲ್ಯಾಣಿ ಪ್ರದೇಶಗಳು ಮತ್ತು ಪ್ರಮುಖ ಸ್ಥಳಗಳಲ್ಲಿ ಟ್ಯಾಂಕರ್ ಹಾಗೂ ತಾತ್ಕಾಲಿಕ ನಳಿಗಳ ಮೂಲಕ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ.

ಉತ್ಸವದ ಅವಧಿಯಲ್ಲಿ 24/7 ಆರೋಗ್ಯ ಸೇವೆ, ತುರ್ತು ಚಿಕಿತ್ಸಾ ಕೇಂದ್ರಗಳು, ಆಂಬ್ಯುಲೆನ್ಸ್‌ಗಳು ಮತ್ತು ನುರಿತ ವೈದ್ಯರ ತಂಡವನ್ನು ನಿಯೋಜಿಸಲಾಗಿದೆ. ಭದ್ರತಾ ದೃಷ್ಟಿಯಿಂದ ಕ್ಷೇತ್ರದ ಪ್ರಮುಖ ಪ್ರದೇಶಗಳಲ್ಲಿ ಸುಮಾರು 40 ಶಾಶ್ವತ ಹಾಗೂ ಹೆಚ್ಚುವರಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಕ್ಷೇತ್ರದಲ್ಲಿ ಸ್ವಚ್ಛತೆ ಕಾಪಾಡಲು ವಿಶೇಷ ಸಿಬ್ಬಂದಿಯನ್ನು ನಿಯೋಜಿಸಲಾಗಿದ್ದು, ಪ್ಲಾಸ್ಟಿಕ್ ಬಳಕೆ ನಿಷೇಧಿಸಲಾಗಿದೆ.

ವೈರಮುಡಿ ಉತ್ಸವದ ಪ್ರಮುಖ ಕಾರ್ಯಕ್ರಮಗಳನ್ನು ಭಕ್ತರು ವೀಕ್ಷಿಸಲು ಯೂಟ್ಯೂಬ್ ಮತ್ತು ದೃಶ್ಯ ಮಾಧ್ಯಮಗಳ ಮೂಲಕ ನೇರ ಪ್ರಸಾರ ವ್ಯವಸ್ಥೆ ಮಾಡಲಾಗಿದೆ. ಪ್ರಮುಖ ಸ್ಥಳಗಳಲ್ಲಿ ದೊಡ್ಡ ಎಲ್‌ಇಡಿ ಪರದೆಗಳನ್ನು ಅಳವಡಿಸಲಾಗಿದೆ.

ಏಪ್ರಿಲ್ 1ರಂದು ನಡೆಯುವ ತೆಪ್ಪೋತ್ಸವದ ಅಂಗವಾಗಿ ದೊಡ್ಡ ಕಲ್ಯಾಣಿಯಲ್ಲಿ ವಿಶೇಷ ವಿದ್ಯುತ್ ದೀಪಾಲಂಕಾರ ಮಾಡಲಾಗುತ್ತದೆ. ಮ್ಯಾಂಡಲಿನ್ ವಾದನ, ಭರತನಾಟ್ಯ, ನಾದಸ್ವರ ಹಾಗೂ ಇತರೆ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಸುರಕ್ಷತೆಗೆ ನುರಿತ ಈಜುಗಾರರನ್ನು ನಿಯೋಜಿಸಲಾಗಿದೆ.

ಪೊಲೀಸ್ ಅಧೀಕ್ಷಕಿ ವಿ.ಜೆ. ಶೋಭಾರಾಣಿ ಮಾತನಾಡಿ, ಭಕ್ತರ ಸುರಕ್ಷತೆಗಾಗಿ ಅಗತ್ಯವಿರುವ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಪಂಚಾಯತ್ ಸಿಇಒ ಕೆ.ಆರ್.ನಂದಿನಿ, ಅಪರ ಜಿಲ್ಲಾಧಿಕಾರಿ ಬಿ.ಸಿ. ಶಿವಾನಂದಮೂರ್ತಿ ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು. ಈ ಬಾರಿ ವೈರಮುಡಿ ಬ್ರಹ್ಮೋತ್ಸವವು ಭಕ್ತರಿಗಾಗಿ ಸುಗಮ, ಸುರಕ್ಷಿತ ಮತ್ತು ಭಕ್ತಿಭರಿತ ಅನುಭವವನ್ನು ನೀಡಲು ಎಲ್ಲಾ ರೀತಿಯ ಸಿದ್ಧತೆಗಳೊಂದಿಗೆ ಎದುರು ನೋಡುತ್ತಿದೆ.

## ವಿದ್ಯುತ್ ವ್ಯತ್ಯಯ

**ಕೆ .ಆರ್. ನಗರ :** ದಿನಾಂಕ: 29.03.2026 ರ ಭಾನುವಾರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ 66/11 ಕೆ.ವಿ ವಿದ್ಯುತ್ ಸ್ವೀಕರಣಾ ಕೇಂದ್ರ, ಕೆ.ಆರ್ ನಗರ ಮತ್ತು ಹಂಪಾಪುರದಲ್ಲಿ ತ್ರೈ ಮಾಸಿಕ ನಿರ್ವಹಣೆ ಕೈಗೊಳ್ಳಬೇಕಾಗಿರುವುದರಿಂದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಕೆ.ಆರ್. ನಗರ ಉಪ–ವಿಭಾಗ ವ್ಯಾಪ್ತಿಗೆ ಒಳಪಡುವ ಕೆ.ಆರ್. ನಗರ ಪಟ್ಟಣ ಹಾಗು ಚಂದಗಾಲು. ಹೆಬ್ಬಾಳು, ಸಿದ್ದಾಪುರ, ಬ್ಯಾಡರಹಳ್ಳಿ, ದೊಡ್ಡಕೊಪ್ಪಲು, ಲಾಳಂದೇವನಹಳ್ಳಿ, ಕಗ್ಗೆರೆ, ತಿಪ್ಪರು. ಹಂಪಾಪುರ, ಅಡಗೂರು, ಅರ್ಜುನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಎಲ್ಲಾ ಗ್ರಾಮಗಳಿಗೆ ವಿದ್ಯತ್ ವ್ಯತ್ಯಯವಾಗಲಿದ್ದು ಈ ಹಿನ್ನೆಲೆಯಲ್ಲಿ ಗ್ರಾಹಕರು ವಿದ್ಯುತ್ ಇಲಾಖೆಯೊಡನೆ ಸಹಕರಿಸಬೇಕೆಂದು ಈ ಮೂಲಕ ಕೋರಲಾಗಿದೆ.

## ಗ್ರಾಮೀಣ ಪುನರ್ವಸತಿ ಕಾರ್ಯಕರ್ತರನ್ನು ಆಯ್ಕೆ ಮಾಡಲು ಅರ್ಜಿ ಆಹ್ವಾನ

**ಮಂಡ್ಯ:** ವಿಕಲಚೇತನರ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕೆ.ಆರ್.ಪೇಟೆ ತಾಲ್ಲೂಕಿನಲ್ಲಿ ಮುರುಕನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಅರ್ಹ ಅಂಗವಿಕಲರನ್ನು ಮಾಸಿಕ ಗೌರವಧನ ಪಾವತಿ ಆಧಾರದ ಮೇಲೆ ಆಯ್ಕೆ ಮಾಡಲು ಮಾರ್ಚ್ 07 ರರೊಳಗೆ ಅರ್ಜಿ ಸಲ್ಲಿಸುವಂತೆ ಪ್ರಕಟಣೆ ಹೊರಡಿಸಲಾಗಿರುತ್ತದೆ.

ನಿಗದಿತ ದಿನಾಂಕದೊಳಗೆ ಅರ್ಹ ಅರ್ಜಿಗಳು ಸ್ವೀಕೃತವಾಗಿರುವುದಿಲ್ಲ. ಆದುದರಿಂದ ಮರು ಪ್ರಕಟಣೆ ಹೊರಡಿಸಲಾಗುತ್ತಿದ್ದು, ಎಸ್.ಎಸ್. ಎಲ್.ಸಿ. ಉತ್ತೀರ್ಣ/ ಅನುತ್ತೀರ್ಣರಾದ 18 ರಿಂದ 45 ವರ್ಷದೊಳಗಿನ ಮುರುಕನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ವಿಕಲಚೇತನರು ಏಪ್ರಿಲ್ 10 ರ ಒಳಗಾಗಿ ಜಿ.ವಿ.ಬಸವರಾಜು ವಿವಿಧ್ದೋದೇಶ ಪುನರ್ವಸತಿ ಕಾರ್ಯಕರ್ತರು, ತಾಲ್ಲೂಕು ಪಂಚಾಯತ್ ಕಾರ್ಯಾಲಯ ಕೆ.ಆರ್.ಪೇಟೆ ಇವರಿಂದ ಅರ್ಜಿ ನಮೂನೆ ಪಡೆದು ಅಗತ್ಯ ದಾಖಲೆಗಳೊಂದಿಗೆ ನಿಗಧಿತ ಅವಧಿಯೊಳಗೆ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಿ.ವಿ.ಬಸವರಾಜು ತಾಲ್ಲೂಕು ವಿವಿದ್ಧೋದೇಶ ಪುನರ್ವಸತಿ ಕಾರ್ಯಕರ್ತರು ತಾಲ್ಲೂಕು ಪಂಚಾಯತ್ ಕಾರ್ಯಾಲಯ ಕೆ.ಆರ್.ಪೇಟೆ ದೂ.ಸಂ. 9900748434 ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರೀಕರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಭವಿಷ್ಯದ ವೃತ್ತಿ ದಾರಿಗೆ ಮೇಳ ಸಹಕಾರ: ಸಿಇಓ ಕೆ.ಆರ್.ನಂದಿನಿ

# ವೃತ್ತಿ ಶಿಕ್ಷಣ ಪ್ರದರ್ಶನ ಜೊತೆಗೆ ಕೆರಿಯರ್ ಮೇಳ

**ಮಂಡ್ಯ:** ಸಮಗ್ರ ಶಿಕ್ಷಣ ಕರ್ನಾಟಕದ ರಾಜ್ಯ ಯೋಜನಾ ನಿರ್ದೇಶಕರ ಸೂಚನೆ ಮೇರೆಗೆ, ಮಂಡ್ಯ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಹಾಗೂ ಜಿಲ್ಲಾ ವೃತ್ತಿಪರ ಮತ್ತು ವೃತ್ತಿ ಮಾರ್ಗದರ್ಶನ ಘಟಕದ ಸಂಯುಕ್ತಾಶ್ರಯದಲ್ಲಿ ವೃತ್ತಿ ಮಾರ್ಗದರ್ಶನ ಶಿಬಿರ ಹಾಗೂ ಕೆರಿಯರ್ ಮೇಳವನ್ನು ಸಂತ ಜೋಸೆಫರ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯದಲ್ಲಿ ಯಶಸ್ವಿಯಾಗಿ ಆಯೋಜಿಸಲಾಯಿತು.





ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಆರ್.ನಂದಿನಿ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳು ಮತ್ತು ಯುವಜನತೆಗೆ ತಮ್ಮ ಭವಿಷ್ಯದ ವೃತ್ತಿ ದಾರಿಯನ್ನು ಸ್ಪಷ್ಟವಾಗಿ ನಿರ್ಧರಿಸಲು ಇಂತಹ ಮೇಳಗಳು ಮಹತ್ವದ ವೇದಿಕೆಯಾಗಿದೆ ಎಂದು ತಿಳಿಸಿದರು. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಸರಿಯಾದ ಮಾಹಿತಿ ಮತ್ತು ಸೂಕ್ತ ಮಾರ್ಗದರ್ಶನವು ಯಶಸ್ಸಿನ ಮೂಲಸ್ತಂಭವಾಗಿದ್ದು, ವಿದ್ಯಾರ್ಥಿಗಳು ತಮ್ಮ ಆಸಕ್ತಿ ಮತ್ತು ಸಾಮರ್ಥ್ಯಗಳಿಗೆ ಹೊಂದುವ ವೃತ್ತಿಯನ್ನು ಆಯ್ಕೆ ಮಾಡಿಕೊಳ್ಳಲು ಈ ಕಾರ್ಯಕ್ರಮಗಳು ಸಹಾಯಕವಾಗುತ್ತವೆ ಎಂದು ಹೇಳಿದರು.

ಈ ಮೇಳದ ಮೂಲಕ ವಿವಿಧ ಕ್ಷೇತ್ರಗಳಲ್ಲಿ ಲಭ್ಯವಿರುವ ಉನ್ನತ ಶಿಕ್ಷಣದ ಮಾರ್ಗಗಳು, ಉದ್ಯೋಗಾವಕಾಶಗಳು, ಕೌಶಲ್ಯಾಭಿವೃದ್ಧಿ ತರಬೇತಿಗಳು ಹಾಗೂ ಸ್ವಯಂ ಉದ್ಯೋಗದ ಅವಕಾಶಗಳ ಕುರಿತು ಸಮಗ್ರ ಮಾಹಿತಿ ಒದಗಿಸಲಾಯಿತು. ಸರ್ಕಾರವು ಯುವಜನತೆಗೆ ಉದ್ಯೋಗ ಸೃಷ್ಟಿ ಮತ್ತು ಕೌಶಲ್ಯಾಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ವಿವಿಧ ಯೋಜನೆಗಳು ಮತ್ತು ತರಬೇತಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುತ್ತಿದೆ. ಯುವಜನತೆ ಇವುಗಳ ಸದುಪಯೋಗ ಪಡೆದುಕೊಂಡು ತಮ್ಮ ಭವಿಷ್ಯವನ್ನು ಯಶಸ್ವಿಯಾಗಿ ರೂಪಿಸಿಕೊಳ್ಳಬೇಕೆಂದು ಅವರು ಕರೆ ನೀಡಿದರು. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ನಂತರದ ಕೋರ್ಸ್‌ಗಳ ಆಯ್ಕೆಗಳು, ವೃತ್ತಿಪರ ಕೋರ್ಸ್‌ಗಳು, ತಾಂತ್ರಿಕ ಶಿಕ್ಷಣದ ಅವಕಾಶಗಳು, ಕೌಶಲ್ಯಾಭಿವೃದ್ಧಿ ತರಬೇತಿಗಳು, ವಿಶೇಷ ಚೇತನ ಮಕ್ಕಳಿಗೆ ಇರುವ ಅವಕಾಶಗಳು, ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ನೀಡಲಾಯಿತು. ವಿವಿಧ ಇಲಾಖೆಗಳ ಪ್ರದರ್ಶನ ಮಳಿಗೆಗಳ ಮೂಲಕ ವಿದ್ಯಾರ್ಥಿಗಳಿಗೆ ವಿವರವಾದ ಮಾರ್ಗದರ್ಶನ ಒದಗಿಸಲಾಯಿತು. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಂದ ಸುಮಾರು 2500ಕ್ಕೂ ಹೆಚ್ಚು ಪೋಷಕರು, ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಅಧಿಕಾರಿಗಳು ಮೇಳದಲ್ಲಿ ಭಾಗವಹಿಸಿ, ಮುಂದಿನ ವಿದ್ಯಾಭ್ಯಾಸ ಮತ್ತು ಉದ್ಯೋಗ ಅವಕಾಶಗಳ ಕುರಿತು ಉಪಯುಕ್ತ ಮಾಹಿತಿಯನ್ನು ಪಡೆದುಕೊಂಡರು. ಸುಮಾರು 20ಕ್ಕೂ ಹೆಚ್ಚು ಇಲಾಖೆಗಳು ತಮ್ಮ ಪ್ರದರ್ಶನ ಮಳಿಗೆಗಳನ್ನು ತೆರೆಯುವ ಮೂಲಕ ವಿವಿಧ ಕ್ಷೇತ್ರಗಳ ಪರಿಚಯ ಮಾಡಿಕೊಟ್ಟವು.

ಕಾರ್ಯಕ್ರಮದಲ್ಲಿ ಜಂಟಿ ನಿರ್ದೇಶಕಿ ರಾಜಲಕ್ಷ್ಮೀ, ಉಪ ನಿರ್ದೇಶಕ (ಆಡಳಿತ) ಜಿ.ಎ. ಲೋಕೇಶ್, ಉಪನಿರ್ದೇಶಕ (ಅಭಿವೃದ್ಧಿ) ಯೋಗೇಶ್ ಕೆ., ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸೌಭಾಗ್ಯ ಮತ್ತು ಮಹದೇವ್ ಸೇರಿದಂತೆ ಹಲವು ಗಣ್ಯರು ಹಾಗೂ ವೃತ್ತಿ ಮಾರ್ಗದರ್ಶನ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು. ಈ ವೃತ್ತಿ ಶಿಕ್ಷಣ ಪ್ರದರ್ಶನ ಮತ್ತು ಕೆರಿಯರ್ ಮೇಳವು ವಿದ್ಯಾರ್ಥಿಗಳಿಗೆ ದಿಕ್ಕು ತೋರಿಸುವ ಪರಿಣಾಮಕಾರಿ ವೇದಿಕೆಯಾಗಿದ್ದು, ಅವರ ಭವಿಷ್ಯ ರೂಪಿಸುವಲ್ಲಿ ಮಹತ್ವದ ಪಾತ್ರವಹಿಸಿದೆ.

# ಮೈಶುಗರ್ ಕಾರ್ಖಾನೆ ಅಕ್ರಮ ಮಾಹಿತಿ ನೀಡುವಲ್ಲಿ ಅಧ್ಯಕ್ಷರು ವಿಫಲ




**ಮಂಡ್ಯ:** ಮೈಶುಗರ್ ಕಾರ್ಖಾನೆಯಲ್ಲಿ ನಡೆದಿರುವ ಅಕ್ರಮಗಳ ಸಂಬಂಧ ಅಲ್ಲಿನ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಅಧ್ಯಕ್ಷರು ಸರಿಯಾದ ಮಾಹಿತಿ ನೀಡುವಲ್ಲಿ ವಿಫಲರಾಗಿದ್ದಾರೆ ಎಂದು ಬಿಜೆಪಿ ಮುಖಂಡ ಹಾಗೂ ನಗರಸಭೆ ಮಾಜಿ ಸದಸ್ಯ ಶಿವಕುಮಾರ್ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಒಂದು ವರ್ಷದಿಂದ ಕಾರ್ಖಾನೆಯಲ್ಲಿ ಹಲವು ಭ್ರಷ್ಟಾಚಾರ ನಡೆಯುತ್ತಿದೆ. ಅಲ್ಲದೇ ಸರಕಾರದಿಂದ ಪಡೆದ ಹಣ ದುರುಪಯೋಗ ಮಾಡಿಕೊಳ್ಳಲಾಗಿದೆ ಎಂದು ದೂರಿದರು.

ನಗರದ ಮೈಶುಗರ್‌ನ 11 ಎಕರೆ ಭೂಮಿಯನ್ನು ಕೆಎಸ್‌ಆರ್‌ಟಿಸಿ ಸಂಸ್ಥೆಗೆ ಮೌಖಿಕವಾಗಿ, ಕೇವಲ ಅರ್ಜಿ ಮೂಲಕ ನೀಡುವಂತೆ ಬೇಡಿಕೆ ಇಟ್ಟಿದ್ದಾರೆ. ಆದರೆ ಇದನ್ನು ಈ ಭೂಮಿಯನ್ನು ಕೇಲವ 7.80 ಲಕ್ಷ ರೂಗಳಿಗೆ ನೀಡಿದ್ದಾರೆ ಇದರಿಂದ ಮೈಶುಗರ್‌ನ ಸಂಸ್ಥೆಗೆ ಅಕ್ರಮವಾಗಿ ನೀಡಲಾಗಿದೆ. ಯಾವುದೇ ಕಾರಣಕ್ಕೂ ಇದನ್ನು ಮಾರಾಟ ಮಾಡಬಾರದು ಎಂದು ಒತ್ತಾಯಿಸಿದರು.

ಮೈಶುಗರ್ ಕೇಂದ್ರ ಕಚೇರಿಯ ಕಾಂಪೌಂಡ್ ಸುಸ್ಥಿತಿಯಲ್ಲಿದ್ದರೂ ಟೆಂಡರ್ ಕರೆದು 6.50 ಲಕ್ಷ ರೂನಲ್ಲಿ ಕಾಮಗಾರಿ ಮಾಡಿಸಿದ್ದು, ಸಂಸ್ಥೆಗೆ ನಷ್ಟ ಉಂಟು ಮಾಡಿದ್ದಾರೆ. ಮೈಶುಗರ್‌ನಲ್ಲಿ ಭ್ರಷ್ಟಾಚಾರ ಸಂಬಂಧ ನಿಯೋಗ ತನಿಖೆ ನಡೆಸುತ್ತಿರುವಾಗಲೇ ಅಧ್ಯಕ್ಷರು ಯಾವುದೇ ಅಕ್ರಮ ನಡೆದಿಲ್ಲ ಎಂದು ಘೋಷಿಸಿದ್ದಾರೆ. ಅಲ್ಲದೇ ಸಂಸ್ಥೆಯ ಆವರಣದಲ್ಲಿ ಮರ ಕಡೆದ ಸಂಬಂಧ ಉಪ ಅರಣ್ಯ ಸಂರಕ್ಷಣಾ ಅಧಿಕಾರಿಗಳು ತನಿಖೆಯ ನ್ಯೂನ್ಯತೆ ಸರಿಪಡಿಸುವುದಾಗಿ ಹೇಳಿದ್ದಾರೆಂದು ತಿಳಿಸಿದರು.

ಇನ್ನು ಮೈಶುಗರ್ ಕಂಪನಿಯ 53 ಕೋಟಿ ರೂ. ವಿದ್ಯುತ್ ಬಿಲ್ ಮನ್ನ ಎಂದು ಬಡಾಯಿ ಕೊಚ್ಚಿಕೊಳ್ಳುತ್ತಿದ್ದು, 2025 ಸೆಪ್ಟೆಂಬರ್ 30ರವರೆಗೆ 37.47 ಕೋಟಿ ರೂ ಬಾಕಿ ಇರುವುದಾಗಿ ಸೆಸ್ಕಾಂ 2026ರ ಜನವರಿ 12ರಂದು ತಿಳಿಸಿದೆ. ಕಾಂಗ್ರೆಸ್ ಸರಕಾರ ಹಣ ನೀಡಿದ್ದರಿಂದ ಮೈಶುಗರ್ ಮರು ಪ್ರಾರಂಭವಾಗಿದೆ ಎಂದು ಬಡಾಯಿ ಕೊಚ್ಚಿಕೊಳ್ಳುತ್ತಿದ್ದಾರೆ. ಆದರೆ 2022ರಲ್ಲಿ ಅವರ ಹಿಂದಿನ ಸರಕಾರ ಹಣ ನೀಡಿದೆ. ಇದೀಗ 60 ಕೋಟಿ ಹೊಸ ಯಂತ್ರೋಪಕರಣ ಅಳವಡಿಕೆಗೆ ನೀಡಲಾಗಿದೆ ಎಂದು ಹೇಳಲಾಗುತ್ತಿದ್ದು, ಈ ಹಿಂದಿನ ಸರಕಾರ ನೀಡಿದ ಹಣ ಯಾವುದಕ್ಕೆ ಬಳಸಿದ್ದೀರಿ ಎಂದು ಪ್ರಶ್ನಿಸಿದರು.

ಸಂಸ್ಥೆಯ ಅನುಪಯುಕ್ತ ವಸ್ತುಗಳನ್ನು ಮುಖ್ಯಕಾರ್ಯದರ್ಶಿಗಳು ಹಾಗೂ ಆಯುಕ್ತರಿಂದ ಅನುಮತಿ ಪಡೆಯದೇ ವಿಂಗಡಿಸಲು ಮುಂದಾಗಿದ್ದನ್ನು ತಡೆದಿದ್ದೇವೆ. ಪ್ರಸಕ್ತ ಸಾಲಿನಲ್ಲಿ 5,81,780 ಟನ್ ಕಬ್ಬು ಒಪ್ಪಿಗೆ ಮಾಡಿಕೊಂಡಿದ್ದಾರೆ. ಇದನ್ನು ಅರೆಯಲು ಕನಿಷ್ಠ 180 ದಿನ ಕಾರ್ಖಾನೆ ನಡೆಸಬೇಕು. ಇಲ್ಲವಾದಲ್ಲಿ ಕಳೆದಬಾರಿ 6 ಲಕ್ಷ ಟನ್ ಒಪ್ಪಿಗೆ ಪಡೆದು ಕೇವ; 1.19 ಲಕ್ಷ ಟನ್ ಅರೆದು ಕಬ್ಬು ಬೆಳೆಗಾರರಿಗೆ ನಷ್ಟ ಉಂಟಾಗಲಿದೆ ಎಂದು ಆರೋಪಿಸಿದರು.

ಗೋಷ್ಠಿಯಲ್ಲಿ ಸುನೀಲ್, ಬೇಲೂರು ಬೊಮ್ಮೇಶ, ಎಚ್.ಬಿ.ಪ್ರಸನ್ನಕುಮಾರ ಇದ್ದರು.

# ಮಿರ್ಲೆ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ನೂತನ ಅಧ್ಯಕ್ಷರಾಗಿ ರಂಗಸ್ವಾಮಿ ಆಯ್ಕೆ

**ಕೆ .ಆರ್. ನಗರ:** ಮಿರ್ಲೆ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ನೂತನ ಅಧ್ಯಕ್ಷರಾಗಿ ರಂಗಸ್ವಾಮಿ ಚುನಾವಣೆಯಲ್ಲಿ ಶುಕ್ರವಾರ ಆಯ್ಕೆಯಾದರು.

ಮಿರ್ಲೆ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ. ಈ ಹಿಂದೆ ಅಧ್ಯಕ್ಷರಾಗಿದ್ದ ಎಂ ಕೆ ಮಹೇಶ್ ಅವರ ರಾಜೀನಾಮೆಯಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಡೈರಿ ಆವರಣದಲ್ಲಿ ಚುನಾವಣೆ ನಡೆಯಿತು. ನಿರ್ದೇಶಕರಾದ ಎಂ ಕೆ ಮಹೇಶ್, ಭಾಗ್ಯಮ್ಮ, ಎಂ ಆರ್ ರಘು, ಎಂ ಆರ್ ವಸಂತಕುಮಾರ್, ಕೆ ರಘು, ಎಂ ಎಸ್ ಉಮೇಶ್, ರಂಗಸ್ವಾಮಿ, ಎಂ ಆರ್ ಕಾಂತರಾಜ್, ಎಂ ಎಸ್ ಯೋಗೇಶ್, ಶ್ಯಾಮಲಾ, ಶಾರದಾಬಾಯಿ, ಜಯಮ್ಮ ಸೇರಿದಂತೆ ಎಲ್ಲಾ ನಿರ್ದೇಶಕರು ಹಾಜರಿದ್ದರು.

ಚುನಾವಣಾ ನಿಯಮವನ್ನು ಡೈರಿ ಕಾರ್ಯದರ್ಶಿ ವಸಂತ ಕುಮಾರ್ ನಿರ್ದೇಶಕರಿಗೆ ಓದಿ ತಿಳಿಸಿದರು. ನಂತರ ಅಧ್ಯಕ್ಷ ಸ್ಥಾನಕ್ಕೆ ರಂಗಸ್ವಾಮಿ ಮತ್ತು ಕೆ ರಘು ನಾಮಪತ್ರ ಸಲ್ಲಿಸಿದರು. ಕೆ ರಘು ಮೂರು ಮತ ಪಡೆದು ಪ್ರಭಾವಗೊಂಡರೆ ರಂಗಸ್ವಾಮಿ 9 ಮತ ಪಡೆದು ಅಧ್ಯಕ್ಷರಾಗಿ ಆಯ್ಕೆಯಾದರೂ ಎಂದು ಸಹಕಾರ ಇಲಾಖೆಯ ಚುನಾವಣಾ ಅಧಿಕಾರಿ ರವಿಕುಮಾರ್ ತಿಳಿಸಿದರು. ನೂತನ ಅಧ್ಯಕ್ಷರನ್ನು ನಿರ್ದೇಶಕರು ಮತ್ತು ಸಿಬ್ಬಂದಿಗಳು ಅಭಿನಂದಿಸಿದರು. ನೂತನ ಅಧ್ಯಕ್ಷರ ರಂಗಸ್ವಾಮಿ ಅವರ ಬೆಂಬಲಿಗರು ಸಿಹಿ ವಿತರಿಸಿ ಪಟಾಕಿ ಸಿಡಿಸಿ ಸಂಭ್ರಮಿಸಿದರು. ಸಂದರ್ಭದಲ್ಲಿ ಡೈರಿ ಶೇರುದಾರರು ಮತ್ತು ಗ್ರಾಮಸ್ಥರು ಸ್ಥಳೀಯ ಚುನಾಯಿತ ಪ್ರತಿನಿಧಿಗಳು ಸೇರಿದಂತೆ ಇತರರು ಇದ್ದರು.



# ಬೇಸಿಗೆಯ ತಂಪಿಗೆ ಬಾರ್ಲಿ ಎಂಬ ಸಂಜೀವಿನಿ



✍ಸೌಮ್ಯಸನತ್

ತಾಪಮಾನ ವಿಪರೀತವಾಗಿ ಹೆಚ್ಚುತ್ತಿದೆ ಸ್ವಲ್ಪ ಹೊತ್ತು ಹೊರಗೆ ಹೋದರೂ, ನಮ್ಮಲ್ಲಿರುವ ಎಲ್ಲಾ ಶಕ್ತಿಯನ್ನು ಯಾರೋ ಹೀರುವಂತೆ ಭಾಸವಾಗುತ್ತದೆ. ಅಲ್ಲದೆ, ಬೇಸಿಗೆಯ ಬಿಸಿಲಿನಿಂದ ಅನೇಕ ಆರೋಗ್ಯ ಸಮಸ್ಯೆಗಳು ಉಂಟಾಗುತ್ತವೆ. ಅನ್ನ ತಿನ್ನಲು ಮನಸ್ಸು ಬರಲ್ಲ, ತಿನ್ನದಿದ್ದರೆ ಹಸಿವಿನ ಸಮಸ್ಯೆ ನಿರ್ಜಲೀಕರಣ ಹೀಟ್ ಸ್ಟ್ರೋಕ್ ಇತ್ಯಾದಿ ಸಮಸ್ಯೆಗಳು ಕಾಡುತ್ತವೆ. ಬೇಸಿಗೆಗೆ ಸಂಬಂಧಿಸಿದ ಇಂತಹ ಸಮಸ್ಯೆಗಳನ್ನು ಬಾರ್ಲಿ ನೀರಿನಿಂದ ಪರಿಹರಿಸಬಹುದು ಎಂದು ತಜ್ಞರು ಹೇಳುತ್ತಾರೆ. ಬಾರ್ಲಿಯು ಬೇಸಿಗೆಯ ಸಮಸ್ಯೆಗಳಿಗೆ ಮಾತ್ರವಲ್ಲದೆ ಅನೇಕ ಆರೋಗ್ಯ ಸಮಸ್ಯೆಗಳಿಗೂ ಚೆನ್ನಾಗಿ ಕೆಲಸ ಮಾಡುತ್ತದೆ ಎಂದು ಹೇಳುತ್ತಾರೆ. ಆ ಪ್ರಯೋಜನಗಳೇನು ಎಂಬುದನ್ನು ನಾವಿಂದು ನೋಡೋಣ....

**ಬಾರ್ಲಿ:** ಬಾರ್ಲಿಯು ಪ್ರಪಂಚದ ಸಮಶೀತೋಷ್ಣ ಹವಾಮಾನದಲ್ಲಿ ಕಂಡುಬರುವ ಒಂದು ಬಗೆಯ ಬೀಜಭರಿತ ಮತ್ತು ಸೌಮ್ಯವಾದ ಪರಿಮಳವನ್ನು ಹೊಂದಿರುವ ಏಕದಳ ಧಾನ್ಯವಾಗಿದೆ. ಇದರಲ್ಲಿ ಖನಿಜಗಳು, ಜೀವಸತ್ವಗಳು, ಫೈಬರ್, ರಂಜಕ, ಕ್ಯಾಲ್ಸಿಯಂ, ಮ್ಯಾಂಗನೀಸ್, ಮೆಗ್ನೀಸಿಯಮ್ ಮತ್ತು ತಾಮ್ರ, ವಿಟಮಿನ್ ಬಿ 12, ಕಬ್ಬಿಣ ಮತ್ತು ಪ್ರೋಟೀನ್ ಸಮೃದ್ಧವಾಗಿದೆ ಮತ್ತು ಕೊಬ್ಬು, ಕೊಲೆಸ್ಟ್ರಾಲ್ ಮತ್ತು ಸಕ್ಕರೆ ಅಂಶವು ತುಂಬಾ ಕಡಿಮೆಯಾಗಿದೆ ಬೆಳಗಿನ ಸಮಯದಲ್ಲಿ ತಿಂಡಿ ತಿನ್ನುವ ಮುಂಚೆ ಒಂದು ಲೋಟ ಬಾರ್ಲಿ ನೀರು ಕುಡಿದರೆ ಹಲವು ಆರೋಗ್ಯಕರ ಪ್ರಯೋಜನಗಳು ನಮ್ಮದಾಗುತ್ತವೆ.

1) ಬಾರ್ಲಿಯು ಆ?ಯಂಟಿಆಕ್ಸಿಡೆಂಟ್ಸ್? ಸಮೃದ್ಧವಾಗಿದ್ದು ಇವು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು ಸಹಾಯ ಮಾಡುತ್ತವೆ.

2) ಬಾರ್ಲಿ ನೀರನ್ನು ಸೇವಿಸುವುದರಿಂದ ಜೀರ್ಣಕ್ರಿಯೆ ಸಮಸ್ಯೆ ನಿವಾರಣೆಯಾಗುತ್ತದೆ. ಬಾರ್ಲಿಯಲ್ಲಿರುವ ಫೈಬರ್ ಅಂಶವು ಜೀರ್ಣಾಂಗವನ್ನು ಆರೋಗ್ಯಕರವಾಗಿಸುತ್ತದೆ. ಅಜೀರ್ಣ, ಮಲಬದ್ಧತೆ, ವಾಯು, ಎದೆಯುರಿ, ಅಸಿಡಿಟಿ, ಗ್ಯಾಸ್ ಮುಂತಾದ ಸಮಸ್ಯೆಗಳನ್ನು ಕಡಿಮೆ ಮಾಡುತ್ತದೆ.

3) ಬಾರ್ಲಿಯನ್ನು ಸೇವಿಸುವುದರಿಂದ ಅದರಲ್ಲಿರುವ ಪೋಷಕಾಂಶಗಳು ಹೃದಯದ ಆರೋಗ್ಯವನ್ನು ಸುಧಾರಿಸುತ್ತದೆ. ಇದು ರಕ್ತದಲ್ಲಿರುವ ಕೆಟ್ಟ ಕೊಲೆಸ್ಟ್ರಾಲ್ ಅನ್ನು ಸಹ ಕರಗಿಸುತ್ತದೆ.

4) ಬಾರ್ಲಿ ಪುಡಿಯನ್ನು ಬಿಸಿ ನೀರಿನಲ್ಲಿ ಬೆರೆಸಿ ಕುಡಿದರೆ ಮೂತ್ರ ಸರಾಗವಾಗಿ ವಿಸರ್ಜನೆಯಾಗುತ್ತದೆ.

5) ಗರ್ಭಿಣಿಯರು ಪ್ರತಿದಿನ ಬಾರ್ಲಿ ನೀರನ್ನು ಕುಡಿಯುವುದರಿಂದ ಕಾಲಿನ ಊತದ ಸಮಸ್ಯೆ ಅವರ ಮೇಲೆ ಪರಿಣಾಮ ಬೀರುವುದಿಲ್ಲ. ಆಯಾಸವೂ ಆಗುವುದಿಲ್ಲ. ಪ್ರತಿದಿನ ಬೆಳಗ್ಗೆ ಮತ್ತು ಸಂಜೆ ಬಾರ್ಲಿ ನೀರನ್ನು ಕುಡಿದರೆ ಹುಟ್ಟುವ ಮಗು ಕೂಡ ಆರೋಗ್ಯವಾಗಿರುತ್ತದೆ.



6) ಬಾರ್ಲಿ ನೀರನ್ನು ದಿನನಿತ್ಯ ಸೇವಿಸುತ್ತಿದ್ದರೆ ಕೂದಲಿನ ಆರೋಗ್ಯಕ್ಕೆ ಒಳ್ಳೆಯದು.

7) ಬಾರ್ಲಿ ನೀರು ಕೊಲೆಸ್ಟ್ರಾಲ್ ಮಟ್ಟವನ್ನು ಕಡಿಮೆ ಮಾಡುವ ಮೂಲಕ ಹೃದಯದ ಆರೋಗ್ಯಕ್ಕೆ ಕೊಡುಗೆ ನೀಡುತ್ತದೆ.

8) ಬಾರ್ಲಿ ನೀರನ್ನು ಸೇವಿಸುವುದರಿಂದ ರಕ್ತದ ಒತ್ತಡ, ಹೊಟ್ಟೆ ಹುಣ್ಣು, ಕರುಳಿನ ಬೇನೆ ಸಮಸ್ಯೆಯು ದೂರವಾಗುತ್ತದೆ.

9) ಬಾರ್ಲಿಯು ಕಡಿಮೆ ಕ್ಯಾಲೋರಿ ಮತ್ತು ಹೆಚ್ಚಿನ ಫೈಬರ್ ಆಹಾರವಾಗಿದ್ದು ಅದು ತೂಕ ನಷ್ಟಕ್ಕೆ ಸಹಾಯ ಮಾಡುತ್ತದೆ.

10) ಕಿಡ್ನಿ ಸ್ಟೋನ್ ಸಮಸ್ಯೆಯಿಂದ ಬಳಲುತ್ತಿರುವವರು ಬಾರ್ಲಿಯನ್ನು ನೀರಿನಲ್ಲಿ ಚೆನ್ನಾಗಿ ಕುದಿಸಿ, ಶೋಧಿಸಿ ಸೇವಿಸುವುದರಿಂದ ಈ ಸಮಸ್ಯೆಯಿಂದ ಮುಕ್ತರಾಗಬಹುದು.

11 ) ಬಾರ್ಲಿ ನೀರು ಮೂಳೆಗಳಲ್ಲಿರುವ ಕೊಳಕು ಯೂರಿಕ್ ಆಸಿಡ್ ಹರಳುಗಳನ್ನು ಒಡೆದು ಕೀಲು ಮತ್ತು ಮೊಣಕಾಲು ನೋವನ್ನು ಕಡಿಮೆ ಮಾಡುತ್ತದೆ.

12) ಬಾರ್ಲಿ ಗಂಜಿಯನ್ನು ಮಜ್ಜಿಗೆ ಮತ್ತು ನಿಂಬೆರಸದೊಂದಿಗೆ ಸೇವಿಸಿದರೆ ತಲೆನೋವು ಕಡಿಮೆಯಾಗುತ್ತದೆ.

13) ಗಾಯದ ಕಲೆಗಳಿದ್ದರೆ ಒಂದು ಚಮಚದಷ್ಟು ಚಾರ್ಲಿ ಪುಡಿ, ಮೊಸರು, ಒಂದು ಚಿಟಿಕೆಯಷ್ಟು ಅರಶಿನ ಹಾಗೂ ನಿಂಬೆರಸ ಬೆರೆಸಿ ಹಚ್ಚುವುದರಿಂದ ಕಲೆ ಮಾಸುತ್ತದೆ.

14) ಬಾರ್ಲಿಯ ನೀರನ್ನು ಸೋಸಿ ಮುಖವನ್ನು ತೊಳೆಯುವುದರಿಂದ ಮುಖದ ಚರ್ಮದ ಕಾಂತಿ ಹೆಚ್ಚಿಸಿ, ವೃದ್ಧಾಪ್ಯದ ಲಕ್ಷಣಗಳನ್ನು ಕಡಿಮೆ ಮಾಡುತ್ತದೆ.

15) ಬಾರ್ಲಿಯನ್ನು ನೀರಿನಲ್ಲಿ ಕುದಿಸಿ ಕುಡಿಯುವುದರಿಂದ ಗಂಟಲು ನೋವು, ಟಾನ್ಸಿಲ್ ಸೇರಿದಂತೆ ಇನ್ನಿತ್ತರ ಸಮಸ್ಯೆಗಳು ನಿವಾರಣೆಯಾಗುತ್ತದೆ.

**ಬಾರ್ಲಿ ನೀರನ್ನು ಹೇಗೆ ತಯಾರಿಸುವುದು?:** ಬಾರ್ಲಿ ನೀರನ್ನು ತಯಾರಿಸಲು, 1 ಕಪ್ ಬಾರ್ಲಿ ಧಾನ್ಯಗಳನ್ನು 3 ರಿಂದ 4 ಕಪ್ ನೀರಿನಲ್ಲಿ 30–40 ನಿಮಿಷಗಳ ಕಾಲ ಕುದಿಸಿ. ಮಿಶ್ರಣವನ್ನು ಸೋಸಿ ತಣ್ಣಗಾಗಲು ಬಿಡಿ. ನೀವು ಸುವಾಸನೆಗಾಗಿ ನಿಂಬೆ ರಸ ಅಥವಾ ಜೇನುತುಪ್ಪವನ್ನು ಸೇರಿಸಬಹುದು. ಅಥವಾ ಈ ನೀರಿಗೆ ಚಿಟಿಕೆ ಉಪ್ಪು ಸೇರಿಸಿಯೂ ಸೇವಿಸಬಹುದು . ಅದರ ಹೊರತಾಗಿ, ಉಪ್ಪು ಜೊತೆಗೆ ಕಾಲು ಲೋಟ ಮಜ್ಜಿಗೆಯನ್ನು ಬೆರೆಸಿ ಕುಡಿಯಬಹುದು.



## ಬಾರ್ಲಿ ಎಲ್ಲರಿಗೂ ಒಳ್ಳೆಯದು ?

ಬಾರ್ಲಿಯನ್ನು ಸಾಮಾನ್ಯವಾಗಿ ಹೆಚ್ಚಿನ ಜನರು ಸೇವಿಸಲು ಸುರಕ್ಷಿತವೆಂದು ಪರಿಗಣಿಸಲಾಗುತ್ತದೆ. ಆದಾಗ್ಯೂ, ಉದರದ ಕಾಯಿಲೆ ಅಥವಾ ಗ್ಲುಟನ್ ಅಸಹಿಷ್ಣುತೆ ಹೊಂದಿರುವವರು ಅದನ್ನು ತಪ್ಪಿಸಬೇಕು, ಏಕೆಂದರೆ ಇದು ಗ್ಲುಟನ್ ಅನ್ನು ಹೊಂದಿರುತ್ತದೆ. ಹೆಚ್ಚುವರಿಯಾಗಿ, ಮಧುಮೇಹ ಹೊಂದಿರುವ ಜನರು ಬಾರ್ಲಿಯನ್ನು ಸೇವಿಸುವ ಮೊದಲು ತಮ್ಮ ವೈದ್ಯರನ್ನು ಸಂಪರ್ಕಿಸುವುದು ಉತ್ತಮ.




**ಬಾರ್ಲಿ ಸಲಾಡ್:** ಬಾರ್ಲಿಯನ್ನು ರುಚಿಕರವಾದ ಮತ್ತು ಪೌಷ್ಟಿಕ ಸಲಾಡ್ ಮಾಡಲು ಬಳಸಬಹುದು. ಬಾರ್ಲಿಯನ್ನು ಬೇಯಿಸಿ ಮತ್ತು ಸೌತೆಕಾಯಿಗಳು, ಟೊಮೆಟೊಗಳು ಮತ್ತು ಬೆಲ್ ಪೆಪರ್‌ಗಳಂತಹ ನಿಮ್ಮ ನೆಚ್ಚಿನ ತರಕಾರಿಗಳೊಂದಿಗೆ ಮಿಶ್ರಣ ಮಾಡಿ. ಇದು ನಿಮ್ಮ ಊಟಕ್ಕೆ ವಿವಿಧ ಟೆಕಶ್ಚರ್ ಮತ್ತು ಸುವಾಸನೆಗಳನ್ನು ಸೇರಿಸುವುದು ಮಾತ್ರವಲ್ಲದೆ ನಿಮ್ಮ ಜೀವಸತ್ವಗಳು ಮತ್ತು ಉತ್ಕರ್ಷಣ ನಿರೋಧಕಗಳ ಸೇವನೆಯನ್ನು ಹೆಚ್ಚಿಸುತ್ತದೆ.

## ಪದ ಬಂಧ



ಜ್ಯೋತಿ ರಾಜೇಶ್




### ಎಡದಿಂದ ಬಲಕ್ಕೆ

1. ಮೊನ್ನೆ ತಾನೆ ಹೊಸ ವರ್ಷ ತಂದ ಹರುಷದ ಹಬ್ಬ.....(3)
3. ಈ ಬಗೆಯ ಹಾಡಿನಲ್ಲಿ ಜೋಳವಿದೆ.......(3)
6. ಪವಿತ್ರ, ಮೂಲ ಬೀಜಾಕ್ಷರ ಮಂತ್ರ.......(1)
8. ಕೊನೆಯಲ್ಲಿ ಬಾರ ಎಂದು ಕರೆಯುತ್ತಿರುವ ಆಟ ಹಿಂದುಮುಂದಾಗಿದೆ......(4)
10. ಸಂತರೊಬ್ಬರ ಹೆಸರಿದು.....(4)
11. ಕಾರ್ನಾಡರ ನಾಟಕ, ಊರೊಂದರ ಹೆಸರನ್ನು ನೆನಪಿಸುತ್ತಿದೆ.......(5)14. ನವ ದಂಪತಿಗಳು ಹೋಗುವ ಪ್ರವಾಸ......(4)
16. ಮನೆ ಅಥವ ಯಾವುದೇ ಕಟ್ಟಡ ಕಟ್ಟಲು ಇರುವ ಜಾಗ...... (4)
18. ಕವಿ, "ನಿನಗೆ ಬೇರೆ ಹೆಸರು ಬೇಕೆ" ಎಂದು ಕೇಳಿದ್ದು ಯಾರಿಗೆಂದು ತಿಳಿಯಿತೆ?......(1)
19. ಕೈಯಿಂದ ಹತ್ತಿಯ ನೂಲು ತೆಗೆಯುವ ಸಾಧನ........(3)
20. ಅಮೂಲ್ಯ, ಅಥವಾ ಶ್ರೇಷ್ಠವಾದದ್ದು........(3)

### ಮೇಲಿನಿಂದ ಕೆಳಕ್ಕೆ.....

2. ಹಾಡುವವನೀತ......(3)
4. ಇಸ್ಪೀಟ್ ಆಟದಲ್ಲೂ ಇರುವ ಜೀತದಾಳು........(3)
5. ಸಾಂಪ್ರದಾಯಿಕವಾದ ಇದರ ಪಾಯಸ ಈಗ ಅಪರೂಪವಾಗಿದೆ.......(3)
7. ಈಗ ಬಂದಿರುವ ಋತು ಚೆಲ್ಲಾಪಿಲ್ಲಿಯಾಗಿದೆ......(3)
9. ಇವನನ್ನು ನೋಡಿದರೆ ತಪ್ಪೇ ಮಾಡದಿದ್ದರೂ ಅಪವಾದ ಬರುವುದಂತೆ.......(5)
10. ಇವನು ಜಗಳ ತಂದಿಡುವುದು ಲೋಕಕಲ್ಯಾಣಕ್ಕಾಗಿಯೇ ಅಂತೆ ......(5)
12. ಸರಕ್ಕಾಗಿ ಆದ ಯುದ್ಧವೆ?......(3)
13. ನರನೊಡಗೂಡಿ ಬಂದ ಮರ್ಕಟನಿವ......(3)
15. ಹಲವರಿಗೆ ತಲೆನೋವು ತರಿಸುವ ಸುಗಂಧಭರಿತ ಹೂ (3)
17. ಪ್ರತಿ ತಿಂಗಳು ಪಡೆಯುವ ಸಂಬಳ.....(3)

# "ನೂರೊಂದು ನೆನಪು ಎದೆಯಾಳದಿಂದ..!



✍ಹಿರಿಯೂರು ಪ್ರಕಾಶ್

ಮಿಸ್ ನಂದಿನಿ ನಾನು ಮದುವೆ ಆಗೋ ಹುಡ್ಗೀ ಸುಂದರವಾಗಿರ್ಬೇಕು , ಮಾತು ಮಧುರವಾಗಿರ್ಬೇಕು, ಒಳ್ಳೇ ನಡೆ ಇರಬೇಕು, ಉಡುಗೆ ತೊಡುಗೆ ಸಾಧಾರಣವಾಗಿರ ಬೇಕು ಅಂದ್ಕೊಂಡಿದ್ದೆ ಕಣ್ರೀ ! . ಅಷ್ಟೂ ಗುಣಗಳು ಒಂದೇ ಹೆಣ್ಣಲ್ಲಿ ಇರುತ್ತೆ ಅನ್ನೋ ನಂಬಿಕೆ ನಿಮ್ಮನ್ನು ನೋಡಿದ ಮೇಲೆ ಬಂತು ಕಣ್ರೀ ! ನಾನು ನಿಮ್ಮನ್ನು ತುಂಬಾ ಪ್ರೀತಿಸ್ತೀನಿ ಕಣ್ರಿ ! ಹೇಳ್ರೀ.... ನನ್ನ ಮದ್ವೆ ಆಗ್ತೀರಾ ? ನೀವಿಲ್ಲದೇ ನನ್ನ ಬಾಳು ಶೂನ್ಯಾರೀ ಶೂನ್ಯ......"

ಕಪ್ಪು ಸೂಟ್, ಬಿಳಿ ಷರ್ಟ್ ,ನೀಲಿ ಸ್ಟ್ರೈಪ್ಸ್ ನ ಟೈ ಧರಿಸಿ, ಕೈಯಲ್ಲಿ ಕೆಂಪು ಗುಲಾಬಿ ಹಿಡಿದು ತನ್ನ ಮನದಾಳದಲ್ಲಿ ಗುಪ್ತವಾಗಿ ಸುಪ್ತವಾಗಿರೋ ಅಪ್ಪಟ ಅವ್ಯಕ್ತ ಪ್ರೀತಿಯನ್ನು ಸುಹಾಸಿನಿಗೆ ಹೇಳಲಿಕ್ಕಾಗಿ ಹೀಗೊಂದು ಸ್ವಗತದ ಡೈಲಾಗ್ ಅನ್ನು ಸುರ ಸುಂದರಾಂಗನಾಗಿ ಕಂಗೊಳಿಸುತ್ತಿದ್ದ ವಿಷ್ಣುವರ್ಧನ್ ರಿಹರ್ಸಲ್ ಮಾಡುತ್ತಾ ಆಕರ್ಷಕವಾಗಿ ಉದುರಿಸುತ್ತಿದ್ದರೆ......,

ಎಂಭತ್ತರ ದಶಕದ ಜ಼ಮಾನಾದಲ್ಲಿ ಮೈಸೂರಿನ ಮಾನಸ ಗಂಗೋತ್ರಿಯ ಮಾಸ್ಟರ್ ಡಿಗ್ರೀ ಕ್ಲಾಸ್ ಗಳಿಗೆ ತೀರಾ ಸಹಜವೆಂಬಂತೆ ಅನಾಮತ್ತಾಗಿ ಬಂಕ್ ಹಾಕಿ ಅಲ್ಲಿಂದ ಸಿಟಿ ಬಸ್ ಹತ್ಕೊಂಡು ಅರಮನೆಯ ಸನಿಹವೇ ಇದ್ದ ಲಿಡೋ ಚಿತ್ರಮಂದಿರಕ್ಕೆ ನಿತ್ಯವೂ ಅಟೆಂಡೆನ್ಸ್ ಹಾಕಿ ಮನದ ತುಂಬಾ ವಿಷ್ಣು- ಸುಹಾಸಿನಿಯ ರೂಪ ತುಂಬಿಕೊಂಡು ನಿತ್ಯನಿರಂತರವಾಗಿ ತದೇಕ ಚಿತ್ತದಿಂದ ಹದಿನೆಂಟು ಬಾರಿ " ಬಂಧನ " ಚಿತ್ರವನ್ನು ಕಣ್ತುಂಬಿಕೊಂಡಿದ್ದ ಆಗಿನ ನಮ್ಮ ಪರಮಪಡ್ಡೆ ಹೃದಯಗಳಲ್ಲೂ ಭಾವಸ್ಪರ್ಷದ ಒಲವಿನ ಬಣ್ಣ ಬಣ್ಣದ ಚಿಟ್ಟೆಗಳು ಎದೆಯೊಳಗೆ ನರ್ತಿಸಿ ನವಿರೇಳಿಸುತ್ತಿದ್ದ ದಿನಗಳು ಹಾಗೇ ಕಣ್ಮುಂದೆ ಹಾದು ಹೋಗುತ್ತವೆ ಕಣ್ರೀ.... ಹುಸ್ಸಪ್ಪಾ.....!!

ಪ್ರತೀ ಬಾರಿ " ಬಂಧನ " ನೋಡಿ ಬಂದಾಗಲೂ ಹಾಸ್ಟೆಲ್ ರೂಮಿನಲ್ಲಿ ಅರಕು ಮುರುಕು ಕನ್ನಡಿಯೆದುರು ನಿಂತು ಕೈಗೆ ಸಿಕ್ಕ ಪೆನ್ನು ಸ್ಪೂನುಗಳನ್ನೇ ಥೇಟು ಗುಲಾಬಿಯೆಂದುಕೊಂಡು ವಿಷ್ಣು ರೀತಿಯಲ್ಲೇ ಡೈಲಾಗುಗಳನ್ನು ಒಂದಕ್ಷರವೂ ಬಿಡದೇ ಹಾಗೆಯೇ ಹೊಡೆಯುತ್ತಾ ಕಾಲರ್ ಮೇಲೆತ್ತಿಕೊಂಡಿದ್ದೂ ಉಂಟು ! ವ್ಯತ್ಯಾಸವೆಂದರೆ ಆ ಸಂದರ್ಭದಲ್ಲಿ ನನ್ನ ಮನದೊಳಗೆ ಸುಹಾಸಿನಿ ಇನ್ನೂ ಎಂಟ್ರಿ ಕೊಟ್ಟಿರಲಿಲ್ಲ.

ಎಂತಹಾ ಅದ್ಭುತ ದೃಶ್ಯಕಾವ್ಯ " ಬಂಧನ." ! ಒಂದು ಸದಭಿರುಚಿಯ ಸಿನಿಮಾ ಹೇಗಿರಬೇಕೆಂಬುದಕ್ಕೆ ಹೇಳಿ ಮಾಡಿಸಿದಂತಹ ಲಯ, ಲಾವಣ್ಯ , ಸೊಗಸು, ಹಾಗೂ ಪರಿಪೂರ್ಣ ಫ಼್ರೆಶ್‌ನೆಸ್ ಆ ಚಿತ್ರದಲ್ಲಿದೆ. ಸುಹಾಸಿನಿಯ ಸುಂದರ ನಗುವಿನಲ್ಲಿ, ವಿಷ್ಣುವರ್ಧನ್ ರ ಮುದ್ದಾದ ಭಾವಾಭಿನಯದ ಗುಂಗಿನಲ್ಲಿ ಎಲ್ಲ ಮರೆತು ಎಲ್ಲೋ ಕಳೆದುಹೋದಂತಹ ಅನುಭವ. ಬಹುಶಃ ಇದೇ ತಾದ್ಯಾತ್ಮತೆ ಅಂದು ನನ್ನ ಎಂ.ಎ. ಎಕನಾಮಿಕ್ಸ್ ಸಿಲಬಸ್ ಮೇಲಿದ್ದಿದ್ದರೆ ಇಡೀ ಗಂಗೋತ್ರಿಗೇ ಅರ್ಥಶಾಸ್ತ್ರದಲ್ಲಿ ಮೊದಲ ರ್‍ಯಾಂಕ್ ಬಂದು ಬಂಗಾರದ ಪದಕ ಸಿಕ್ಕಿರುತ್ತಿತ್ತೇನೋ...! ನೋ..ವರೀಸ್ , ಫಸ್ಟ್ ಕ್ಲಾಸಿಗೇ ಜಗತ್ತನ್ನೇ ಗೆದ್ದಂತಹ ತೃಪ್ತಿ ಪಟ್ಟಿದ್ದ ದಿನಗಳವು.

ತಾನು ಮನಸಾರೆ ಇಷ್ಟಪಟ್ಟವಳಲ್ಲಿ ತನ್ನ ಪವಿತ್ರವಾದ ಪ್ರೀತಿಯನ್ನು ಹೇಳಿಕೊಳ್ಳಲಾಗದ ಸಂದಿಗ್ಧತೆಯಲ್ಲಿದ್ದ ಡಾ. ಹರೀಶ್ ಆಗಿ ವಿಷ್ಣುವಿನ ಒಳ ತಳಮಳ, ಪ್ರೇಮ ನಿವೇದನೆಗಾಗಿ ಅಮಾಯಕತನದಿಂದ ಮಾಡಿಕೊಳ್ಳುತ್ತಿದ್ದ ರಿಹರ್ಸಲ್ ಹಾಗೂ ಹೃದಯದಲ್ಲಿ ಬಚ್ಚಿಟ್ಟುಕೊಂಡ ಪ್ರೇಮವನ್ನು ಬಿಚ್ಚಿಟ್ಟು ಕೊಡುವ ಸಂದರ್ಭದಲ್ಲಿ ಆದ ವೈಫಲ್ಯದಿಂದ ಎದುರಿಸಿದ ನಿರಾಶೆ , ಬಯಸಿದ್ದನ್ನು ಮನದಲ್ಲೇ ಇರಿಸಿಕೊಂಡು ಹೇಗೆ, ಎಲ್ಲಿ ಹೇಳಬೇಕೆಂಬ ಗೊಂದಲದಿಂದ ಪರಿಪರಿಯಾಗಿ ಒದ್ದಾಡುವ ಪರಿ, ಪ್ರೀತಿಸಿದವಳು ತನ್ನ ಕೈ ಹಿಡಿಯದಿದ್ದರೂ ಅವಳ ಬಾಳು ಸುಂದರವಾಗಿರಲಿ ಎಂಬ ಪ್ರಾಮಾಣಿಕ ಪ್ರೀತಿಯ ಸುಮನಸಿನ ಭಾವನೆ....ಈ ಎಲ್ಲವನ್ನೂ ಕಣ್ಣಂಚು ಒದ್ದೆಯಾಗುವಂತೆ ಅಭಿವ್ಯಕ್ತಿಸಿದ ಸಾಹಸಸಿಂಹ ಆ ಚಿತ್ರದಲ್ಲಿ ಅಪ್ಪಟ " ಭಾವ ಬ್ರಹ್ಮ" ನಾಗಿ ಮೆರೆದಿದ್ದರು.

"ಬಂಧನ" ದಿಂದ ಸ್ವಲ್ಪ ಹೊರಬಂದು ಯೋಚಿಸಿದಾಗ ನಮ್ಮನಮ್ಮ ರಿಯಲ್ ಲೈಫ಼್‌ಲ್ಲೂ ವಿಷ್ಣುರವರಂತಹ ಪರಿಸ್ಥಿತಿ ನಮ್ಮಲ್ಲೇ ಕೆಲವರ ಬಾಳಲ್ಲೂ ಎದುರಿಸಿರಬಹುದಲ್ಲವೇ ?


ಒಂದೈದು ನಿಮಿಷ ನಿಮ್ಮ ಕಾಲೇಜು ದಿನಗಳ ಫ಼್ಲಾಷ್ ಬ್ಯಾಕ್ ಗೆ ಹೋಗಿ ! ನಿಸ್ಸಂದೇಹವಾಗಿ ನಿಮ್ಮೊಳಗೆ ಯಾರೋ ಒಬ್ಬರ ಮೇಲೆ ಏನೋ ಒಂದು ರೀತಿಯ ಮಧುರ ಭಾವನೆ ತಾನಾಗಿಯೇ ಉಂಟಾಗಿರಲೇ ಬೇಕಲ್ಲವೇ.. ! ಅದು ಪ್ರೀತಿ- ಪ್ರೇಮವೇ ಆಗಬೇಕಿಲ್ಲ ! ಅಥವಾ ಅದನ್ನು ಇನ್ನಾವುದೇ ಕೆಟ್ಟ ದೃಷ್ಟಿಯಿಂದ ನೋಡುವ ಅಗತ್ಯವೂ ಇಲ್ಲ. ಅದು ಆ ವಯಸ್ಸಿನ , ಆ ದಿನಗಳ ವಿನೂತನ ಭಾವನೆಯಾಗಿಯೂ ಇರಬಹುದು. ಇಲ್ಲವೇ , ಇಂದು ಅದೇನೋ ಮೊದಲ " ಕ್ರಷ್ " ಅಂತ ಕರೀತಾರಲ್ಲಾ ಹಾಗೆಯೂ ಇದ್ದಿರಬಹುದು ! ಲವ್ ಅಟ್ ಫ಼ಸ್ಟ್ ಸೈಟೂ ಆಗಿದ್ದಿರಬಹುದು, ಅಥವಾ ಪರಿಶುದ್ಧ ಸ್ನೇಹವೂ ಇರಬಹುದು. ನಮ್ಮಲ್ಲೂ ಕೆಲವರಲ್ಲಿ ಬಂಧನದ ವಿಷ್ಣುವಿನ ರೀತಿಯಲ್ಲಿ ಪ್ರೀತಿ ನಿವೇದನೆಗೆ ರಿಹರ್ಸಲ್ ಮಾಡಿಕೊಂಡವರೂ ಇದ್ದಿರಬಹುದು. ಮನಸಿನೊಳಗೇ ಬೆಳೆಸಿಕೊಂಡ ಅವ್ಯಕ್ತವಾದ ಪ್ರೀತಿ ಇದ್ದಿರಲೂಬಹುದು ! ಸ್ನೇಹ , ಸಲಿಗೆ, ಪರಿಚಯ, ಪರಿಣಯ, ಮೆಚ್ಚುಗೆ, ಆಪ್ತತೆ....ಆಗಿರಲೂ ಬಹುದು. ಅದೇನೇ ಇದ್ದರೂ ಆ ನೆನಪುಗಳು ಜೀವನದುದ್ದಕ್ಕೂ ಆಗಾಗ್ಗೆ ಸುಂಯ್ ಎಂದು ಬೀಸುವ ತಂಗಾಳಿಯಂತೆ ಮನದಲ್ಲಿ ಮಧುರ ತರಂಗಗಳ ಬುಗ್ಗೆಯನ್ನು ನೆನೆದಾಗಲೆಲ್ಲಾ ಚಿಮ್ಮಿಸುತ್ತಲೇ ಇರುವುದಂತೂ ನಿಜ ಅನ್ಸತ್ತೆ ಅಲ್ವಾ ?

ನಾನಿಲ್ಲಿ ಮುಖ್ಯವಾಗಿ ಹೇಳ ಬಯಸಲು ಹೊರಟಿರುವುದು- ನಿಮ್ಮಲ್ಲಿ ಹಲವರು ಆ ನವಿರು ನವಿರಾದ ಭಾವನೆಗಳನ್ನು ಈಗಲೂ ಕಾಪಾಡಿಕೊಂಡು ಬಂದಿರಬಹುದಲ್ಲವೇ ? ಕಾಲೇಜು ದಿನಗಳ ಸ್ನೇಹಿತರನ್ನು , ಗೆಳೆಯ- ಗೆಳತಿಯರನ್ನು, ಆ ದಿನಗಳ ನಿಮ್ಮ ಲೆಕ್ಚರರ್ ಗಳನ್ನು , ಕಾಲೇಜಿನಲ್ಲಿ ಕೆಲಸ ಮಾಡುತ್ತಿದ್ದವರನ್ನು, ಅಂದಿನ ಹಸಿರಾಗಿ ಉಳಿದ ಘಟನೆಗಳನ್ನು ಹಾಗೆಯೇ ಮೆಲುಕು ಹಾಕಿ ಅವರ ವಿಳಾಸ- ಮೊಬೈಲ್ ನಂಬರ್ ಪತ್ತೆ ಮಾಡಿ ಒಮ್ಮೆ ಸ್ನೇಹದಿಂದ ಹಳೆಯ ಸಲಿಗೆಯಿಂದ ಮಾತನಾಡಿಸಿ ನೋಡಿ ! ಕೆಲ ಕ್ಷಣವಾದರೂ ನಿಮ್ಮ ಇಂದಿನ ಒತ್ತಡ, ನಿರಾಶೆ, ಏಕತಾನತೆ ಹಾಗೂ ಎಲ್ಲಕ್ಕಿಂತ ಮುಖ್ಯವಾಗಿ ನಾನು-ನನ್ನದು ಎಂಬ ಪ್ರತಿಷ್ಠೆ ದೂರವಾಗಿ ಮನಸ್ಸು ಹಗುರವಾಗಬಹುದು. ಅದರಲ್ಲೂ ನಿಮ್ಮ ಮನದೊಳಗೆ ಆಗ ಮನೆ ಮಾಡಿದ ವ್ಯಕ್ತಿಗಳು ಈಗ ಹೇಗಿರಬಹುದು ? ಯಾವ ರೀತಿ ಇರಬಹುದೆಂಬ ಕುತೂಹಲದಿಂದ ವಿಚಾರಿಸಿ ನೋಡಿ ! ಈ ಸಂಗತಿಗಳು ಸಂತಸದ ಜೊತೆಗೆ ಅದ್ಭುತ ಅಚ್ಚರಿಯನ್ನುಂಟು ಮಾಡದಿದ್ದರೆ ಹೇಳಿ ಮತ್ತೆ !

ಮ್ಯಾಟರ್ ಎಲ್ಲಿಂದಲೋ ಆರಂಭವಾಗಿ ಎಲ್ಲೋ ಎಳೆದುಕೊಂಡೂ ಹೋಗುತ್ತಿದೆಯಲ್ಲವೇ ? ಈಗಷ್ಟೇ ನನ್ನ ಕಾಲೇಜು ದಿನಗಳ ಹಳೆಯ ಸ್ನೇಹಿತರೊಬ್ಬರಿಂದ ಅಚ್ಚರಿಯೆಂಬಂತೆ ಬಂದ ಮೊಬೈಲ್ ಕಾಲ್ ನಿಂದ ಮಾತುಗಳೆಲ್ಲಾ ಅಂದಿನ ಗಂಗೋತ್ರಿಯ ಕಾಲೇಜು ದಿನಗಳತ್ತ ಹೊರಳಿ ನವಿರಾಗಿ ಹರಡಿಕೊಂಡಾಗ ನೆನಪುಗಳು ಕೆದಕಿ, ಮನವನ್ನು ಕಲಕಿ ಒಮ್ಮೊಮ್ಮೆ ಮೃದುವಾಗಿ ಕುಲುಕಿ ಹಾಗೆಯೇ ಮೆಲುಕು ಹಾಕಿದ್ದವು. ಆ ಹಾದಿಯಲ್ಲಿ ಹಿಂದಿನ ನೆನಪುಗಳಿಗೆ ಅರೆ ಕ್ಷಣ ಜಾರಿ ಮಾನಸ ಗಂಗೋತ್ರಿಯ ರಮಣೀಯ ವಾತಾವರಣದಿಂದ ಆರಂಭವಾಗಿ , ಕುಕ್ಕರಹಳ್ಳಿ ಕೆರೆ ಮೂಲಕ ಮೈಸೂರು ಯೂನಿವರ್ಸಿಟಿ ದಾಟಿ, ಚಾಮರಾಜ ಡಬಲ್ ರೋಡ್ ಹಾದು ಅರಮನೆಯ ಸುಂದರ ಆವರಣದ ಸುತ್ತ ಮುತ್ತ ಚೆಕ್ಕು ಚದುರಿಹೋದ ಕಾಲೇಜು ದಿನಗಳ ಗೊತ್ತು, ಗುರಿ- ಜವಾಬ್ದಾರಿಯಿಲ್ಲದ, ಅಲೆಮಾರಿ ಬದುಕಿನತ್ತ ನಮ್ಮ ಮಾತುಕತೆ ಬಂಧನ ದ ವಿಷ್ಣುವಿನ ಕ್ರೇಜ಼್ ನತ್ತ , ಸುಹಾಸಿನಿಯ ಮಿಲಿಯನ್ ಡಾಲರ್ ಸ್ಮೈಲ್ ನತ್ತ ಓಡಿದಾಗ ಆ ನೆನಪಲ್ಲೇ ಮೂಡಿದ ಅಕ್ಷರಗಳ ಅಸ್ತವ್ಯಸ್ತ ಅಪಸವ್ಯಗಳಿವು !

**ಮರೆಯುವ ಮುನ್ನ**

**ಹೆಚ್ಚು ಕಡಿಮೆ ನಲವತ್ತೆರಡು ವರ್ಷಗಳ ಹಿಂದೆ ತೆರೆಕಂಡಿದ್ದ ಕನ್ನಡದ ಅತ್ಯುತ್ತಮ ಚಿತ್ರಗಳಲ್ಲೊಂದಾದ "ಬಂಧನ" ದ ನಾಯಕ ಡಾ.ವಿಷ್ಣುವರ್ಧನ್ ರ ಮನದಲ್ಲಿನ ಮಧುರ ಹೊಯ್ದಾಟದ ಭಾವನೆಗಳ ಸಮೀಕರಣದಲ್ಲಿ ತಮ್ಮನ್ನು ತಾವೇ ಗುರುತಿಸಿಕೊಂಡು ತೊಳಲಾಡಿದ್ದ ನನ್ನ ಎಲ್ಲಾ ಸಮಾನ ಮನಸ್ಕರಿಗೆ , ಸಮಾನ ವಯಸ್ಕರಿಗೆ ಈ ಬರಹ ಅರ್ಪಣೆ.**
**ಅಂಥಾ ಆ ಹಳೆಯ ನೆನಪುಗಳೇನಾದರೂ ಇದ್ದರೆ ಅರೆಕ್ಷಣ ಅಲ್ಲೇ ಕಳೆದುಹೋಗಿ ಮತ್ತೇ...!**



Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,